ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 166, ಪುಟಗಳು: 8, ಸೋಮವಾರ, 25 ಮಾರ್ಚ್ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆನೇಕಾ

## ಪಂಚಾಂಗ

(ಸೋಮವಾರ 25, ಮಾರ್ಚ್ -2024)

- ಸಂವತ್ಸರ: ಶೋಭಕೃತ್,
- ಋತು: ಶಿಶಿರ, ಅಯನ: ಉತ್ತರಾಯಣ
- ಮಾಸ: ಫಾಲ್ಗುಣ,
- ಪಕ್ಷ : ಶುಕ್ಲ
- ತಿಥಿ : ಪಂಚಮಿ, ನಕ್ಷತ್ರ : ಪುಬ್ಬಾ
- ರಾಹುಕಾಲ: 04:59 PM 06 : 30 PM
- ಗುಳಿಕಕಾಲ: 03:28 PM04 : 59 PM
- ಯಮಗಂಡಕಾಲ: 12:27 PM 01 : 58 PM

## ಸಂಕ್ಷಿಪ್ತ ಸುದ್ದಿ

### ಗ್ರಾಹಕರಿಗೆ ಬೆಸ್ಕಾಂ ಶುಭ ಸುದ್ದಿ



**ಬೆಂಗಳೂರು:** ವಿದ್ಯುತ್ ಬಿಲ್ ಪಾವತಿಯ ಆನ್ ಲೈನ್ ವ್ಯವಸ್ಥೆಯ ಅಪ್ ಗ್ರೇಡ್ ವೇಳೆ ಕಂಡುಬಂದ ತಾಂತ್ರಿಕ ಸಮಸ್ಯೆಯ ಕಾರಣ ಮಾರ್ಚ್ ತಿಂಗಳಲ್ಲಿ ಬಿಲ್ ಪಾವತಿ ವಿಳಂಬವಾದರೆ ಅದಕ್ಕೆ ವಿಳಂಬ ಶುಲ್ಕ ಪಾವತಿ ಮಾಡಬೇಕಿಲ್ಲ ಎಂದು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ತಿಳಿಸಿದೆ. ಡಿಜಿಟಲ್ ಸೇವೆಗಳಲ್ಲಿನ ಅಡೆತಡೆಗಳ ನಿವಾರಣೆಗಾಗಿ ಆನ್‌ಲೈನ್ ಪಾವತಿ ವ್ಯವಸ್ಥೆಗೆ ತಾಂತ್ರಿಕ ನವೀಕರಣಗಳನ್ನು ಮಾಡಿದ ನಂತರ ಬೆಸ್ಕಾಂ ಈ ಕುರಿತು ಪ್ರಕಟಣೆ ಹೊರಡಿಸಿದೆ. ಈ ಸೌಲಭ್ಯ ಬೆಂಗಳೂರು ಮಾತ್ರವಲ್ಲದೆ, ಬೆಸ್ಕಾಂ ವ್ಯಾಪ್ತಿಯಡಿ ಬರುವ ಇತರ ಜಿಲ್ಲೆಗಳಲ್ಲೂ ಲಭ್ಯ ಇರಲಿದೆ. ಪುಟ 2

### ಕೀಟನಾಶಕ ಸೇವಿಸಿ ಆಸ್ಪತ್ರೆಗೆ ದಾಖಲಾದ ಸಂಸದ

**ಚೆನ್ನೈ:** ತಮಿಳುನಾಡಿನ ಈರೋಡ್ ಕ್ಷೇತ್ರದ ಹಾಲಿ ಸಂಸದ ಡಿಎಂಕೆಯ ಎ.ಗಣೇಶಮೂರ್ತಿ ಕೀಟನಾಶಕ ಸೇವಿಸಿ ಆಸ್ಪತ್ರೆಗೆ ದಾಖಲಾಗಿದ್ದಾರೆ. 2019 ರ ಲೋಕಸಭೆ ಚುನಾವಣೆಯಲ್ಲಿ ಡಿಎಂಕೆ ಟಿಕೆಟ್‌ನಲ್ಲಿ ಚುನಾಯಿತರಾದ ಗಣೇಶಮೂರ್ತಿ ಆರೋಗ್ಯ ಹದಗೆಟ್ಟಿತ್ತು. ಪುಟ 2



### ಇಂದು ಹೋಳಿ ಸಂಭ್ರಮ

**ಬೆಂಗಳೂರು:** ಬಣ್ಣಗಳ ಹಬ್ಬ ಹೋಳಿ ಅಂದರೆ ಸಾಕು ಎಲ್ಲಿಲ್ಲದ ಸಡಗರ, ಸಂಭ್ರಮ. ಒಬ್ಬರ ಮೇಲೊಬ್ಬರು ಬಣ್ಣಗಳನ್ನು ಎರಚಿ ಈ ಹಬ್ಬವನ್ನು ಸಂಭ್ರಮಿಸುತ್ತಾರೆ. ಬಣ್ಣಗಳೊಂದಿಗೆ ಸಂಬಂಧಗಳನ್ನು ಬೆಸೆಯುವ ಹಬ್ಬ ಇದಾಗಿದೆ. ಹೋಳಿ ಹಬ್ಬವನ್ನು ಹಿಂದೂ ತಿಂಗಳ ಫಾಲ್ಗುಣದ ಹುಣ್ಣಿಮೆಯಂದು ಆಚರಿಸಲಾಗುತ್ತದೆ. ಹೋಳಿಯನ್ನು ದೇಶದ ವಿವಿಧ ರಾಜ್ಯಗಳಲ್ಲಿ ಬೇರೆ ಬೇರೆ ಹೆಸರಿನಿಂದ ಕರೆಯುವುದು ಮಾತ್ರವಲ್ಲದೇ ವಿಶಿಷ್ಟವಾಗಿ ಆಚರಿಸಲಾಗುತ್ತದೆ. ಪುಟ 2

## ಇಂದಿನಿಂದ ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಆರಂಭ
# ಕೇಂದ್ರಗಳಲ್ಲಿ ಕಟ್ಟುನಿಟ್ಟಿನ ಕ್ರಮ



**ಬೆಂಗಳೂರು:** ಇಂದಿನಿಂದ ರಾಜ್ಯಾದ್ಯಂತ 2023-24ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳು ಆರಂಭಗೊಳ್ಳಲಿವೆ. ಕರ್ನಾಟಕ ಶಿಕ್ಷಣ ಇಲಾಖೆ ಪರೀಕ್ಷೆಗೆ ಸಕಲ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ರಾಜ್ಯದ 2,750 ಕೇಂದ್ರಗಳಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷೆಗಳು ನಡೆಯಲಿವೆ. 2023-24 ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಇಂದಿನಿಂದ ಏಪ್ರಿಲ್ 4ರ ವರೆಗೆ ನಡೆಯಲಿದೆ. ರಾಜ್ಯಾದ್ಯಂತ ಒಟ್ಟು 8,69,968 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದಾರೆ. 4,41,910 ಬಾಲಕರು ಹಾಗೂ 4,28,058 ಬಾಲಕಿಯರು ನೋಂದಣಿ ಮಾಡಿಕೊಂಡಿದ್ದಾರೆ.

18,225 ಖಾಸಗಿ ವಿದ್ಯಾರ್ಥಿಗಳು, 41,375 ಪುನರಾವರ್ತಿತ ವಿದ್ಯಾರ್ಥಿಗಳು, 5,424 ವಿಭಿನ್ನ ಸಾಮರ್ಥ್ಯವುಳ್ಳ ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಣಿ ಮಾಡಿಕೊಂಡಿದ್ದಾರೆ. ರಾಜ್ಯದ 2,750 ಕೇಂದ್ರಗಳಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷೆಗಳು ನಡೆಯಲಿವೆ. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಅಧಿಕಾರಿ/ಸಿಬ್ಬಂದಿ ಹಾಗೂ ಪರೀಕ್ಷಾರ್ಥಿಗಳಿಗೆ ಕಡ್ಡಾಯವಾಗಿ ಮೊಬೈಲ್ ಫೋನ್ ನಿಷೇಧ ಮಾಡಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತ 200ಮೀ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಣೆ ಮಾಡಲಾಗಿದೆ. ಪ್ರತಿ ಪರೀಕ್ಷಾ ಕೇಂದ್ರಗಳಿಗೆ ಅಗತ್ಯ ಪೊಲೀಸ್ ಭದ್ರತೆಯನ್ನು ಒದಗಿಸಲಾಗಿದೆ. ಪುಟ 2

# ಅರಣ್ಯದಲ್ಲಿ ಪವಾಡ
## ಬಿರುಬೇಸಿಗೆಯಲ್ಲಿ ವನ್ಯಜೀವಿಗಳಿಗೆ ಸಿಕ್ಕುಗಂಗೆ!





**ಹಾವೇರಿ:** ಆ ಗ್ರಾಮದಲ್ಲಿ ಕೆರೆಕಟ್ಟೆಗಳೆಲ್ಲಾ ಖಾಲಿ ಖಾಲಿಯಾಗಿವೆ. ಅಂತರ್ಜಲ ಪಾತಾಳ ಸೇರಿದೆ. ಇದ್ದ ಬೋರ್ ವೇಲ್ ಗಳು ಬತ್ತುತ್ತಿವೆ. ಹೀಗಾಗಿ ವನ್ಯಜೀವಿಗಳು ಜೀವಜಲಕ್ಕಾಗಿ ಗ್ರಾಮದಕಡೆ ಲಗ್ಗೆ ಇಡುತ್ತಿವೆ. ಇಂಥಾ ಶೋಚನೀಯ ಸ್ಥಿತಿಯಲ್ಲಿ ಆ ಗ್ರಾಮದ ಮೀಸಲು ಅರಣ್ಯ ಪ್ರದೇಶದಲ್ಲಿ ಗಂಗೆ ಮೂರು ಅಡಿಯಲ್ಲಿ ಪ್ರತ್ಯಕ್ಷವಾಗಿದ್ದಾಳೆ! ಇದು ಬೆಟ್ಟದ ಒಡೆಯ ಬಸವೇಶ್ವರನ ಪವಾಡ ಅಂತಿದ್ದಾರೆ ಗ್ರಾಮಸ್ಥರು.

ಹೌದು ಈ ಬಾರಿ ವರುಣನ ಅವಕೃಪೆಗೆ ರಾಜ್ಯದಲ್ಲಿ ಭೀಕರ ಬರಗಾಲದ ಕರಿಛಾಯೆ ನೆಟ್ಟಿದೆ. ಹನಿ ನೀರಿಗೂ ಹಾಹಾಕಾರ ಶುರುವಾಗಿದೆ. ರಾಜ್ಯದಲ್ಲಿ ಎದುರಾಗಿರುವ ಜಲಕ್ಷಾಮ ಬಗೆಹರಿಸಲು ರಾಜ್ಯ ಸರ್ಕಾರ ನಾನಾ ಕಸರತ್ತು ಮಾಡುತ್ತಿದೆ. ಇಂಥಾ ಶೋಚನೀಯ ಸ್ಥಿತಿಯಲ್ಲಿ ಹಾವೇರಿ ಜಿಲ್ಲೆ ಹಾನಗಲ್ಲ ತಾಲೂಕಿನ ಹಿರೇಬಾಸೂರು ಮೀಸಲು ಅರಣ್ಯ ಪ್ರದೇಶದಲ್ಲಿ ಅಚ್ಚರಿ ಬೆಳವಣಿಗೆ ಪುಟ 2

## ಶಾಸಕ ಜನಾರ್ದನ ರೆಡ್ಡಿ ಮತ್ತೆ ಕಮಲಕ್ಕೆ ಸೇರ್ಪಡೆ
# ಬಿಜೆಪಿಗೆ ಡಬಲ್ ಸಂಭ್ರಮ



**ಬೆಂಗಳೂರು:** ಕೆಆರ್‌ಪಿಪಿ ಪಕ್ಷದ ಸ್ಥಾಪಕ ಶಾಸಕ ಜನಾರ್ದನ ರೆಡ್ಡಿ ಅವರಿಂದು ಬಿಜೆಪಿಗೆ ಮರು ಸೇರ್ಪಡೆಯಾಗಿದ್ದಾರೆ. ಇತ್ತ ಗೋವಾದಲ್ಲಿ ಮೊದಲ ಬಾರಿಗೆ ಮಹಿಳಾ ಅಭ್ಯರ್ಥಿಯೊಬ್ಬರು ಬಿಜೆಪಿಯಿಂದ ಕೈಗಾರಿಕೋದ್ಯಮಿ ಪಲ್ಲವಿ ಡೆಂಪೊಗೆ ಟಿಕೆಟ್ ನೀಡಿ ಡಬಲ್ ಸಂಭ್ರಮದಲ್ಲಿ ಇದೆ.

ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ನಡೆದ ಕೆಆರ್‌ಪಿಪಿ ಪಕ್ಷ ವಿಲೀನ ಕಾರ್ಯಕ್ರಮದಲ್ಲಿ ಜನಾರ್ದನ ರೆಡ್ಡಿ, ಪತ್ನಿ ಅರುಣಾ ಲಕ್ಷ್ಮಿ ಸೇರಿ ಕೆಆರ್‌ಪಿಪಿ ಪಕ್ಷದ ಎಲ್ಲ ಪದಾಧಿಕಾರಿಗಳು ಬಿಜೆಪಿ ಸೇರ್ಪಡೆಯಾಗಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ, ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ, ಮಾಜಿ ಸಚಿವರಾದ ಶ್ರೀರಾಮುಲು, ಆನಂದ್ ಸಿಂಗ್, ಸಿಟಿ ರವಿ, ಅಶ್ವಥ್‌ನಾರಾಯಣ ಅವರ ಉಪಸ್ಥಿತಿಯಲ್ಲಿ ಬಿಜೆಪಿ ಸೇರ್ಪಡೆಯಾಗಿದ್ದಾರೆ.

ಈ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಪಕ್ಷದ ಶಾಲು ಹೊದಿಸಿ, ಭಾವುಟ ನೀಡಿ ಸ್ವಾಗತಿಸಿದರು. ಅಲ್ಲದೇ ಪಕ್ಷ ನಿಮ್ಮನ್ನು ಗೌರವಯುತವಾಗಿ ನಡೆಸಿಕೊಳ್ಳಲಿದೆ ಎಂದೂ ಭರವಸೆ ನೀಡಿದರು. ಈ ವೇಳೆ ಜನಾರ್ದನ ರೆಡ್ಡಿ ಯಡಿಯೂರಪ್ಪ ಅವರ ಕಾಲಿಗೆ ಬಿದ್ದು ಆಶೀರ್ವಾದ ಪಡೆದರು.

## ಗೋವಾದಲ್ಲಿ ಮೊದಲ ಬಾರಿಗೆ ಬಿಜೆಪಿಯಿಂದ ಮಹಿಳಾ ಅಭ್ಯರ್ಥಿ ಸ್ಪರ್ಧೆ
# ಕೈಗಾರಿಕೋದ್ಯಮಿ ಪಲ್ಲವಿ ಡೆಂಪೊಗೆ ಟಿಕೆಟ್



**ಗೋವಾ:** ಲೋಕಸಭೆ ಚುನಾವಣೆಗೆ ಬಿಜೆಪಿ ಬಿಡುಗಡೆ ಮಾಡಿರುವ ಅಭ್ಯರ್ಥಿಗಳ ಐದನೇ ಪಟ್ಟಿ ಸಾಕಷ್ಟು ಸದ್ದು ಮಾಡಿದೆ. ಗೋವಾದಲ್ಲಿ ಮೊದಲ ಬಾರಿಗೆ ಮಹಿಳಾ ಅಭ್ಯರ್ಥಿಯೊಬ್ಬರು ಬಿಜೆಪಿಯಿಂದ ಕಣಕ್ಕಿಳಿಯುತ್ತಿದ್ದಾರೆ. ಕೈಗಾರಿಕೋದ್ಯಮಿ ಪಲ್ಲವಿ ಡೆಂಪೊಗೆ ಟಿಕೆಟ್ ನೀಡಲಾಗಿದೆ. ಒಂದೆಡೆ ಈ ಪಟ್ಟಿಯಿಂದ ವರುಣ್ ಗಾಂಧಿಯನ್ನು ಬದಿಗಿಟ್ಟರೆ ಮತ್ತೊಂದೆಡೆ ಕಂಗನಾ ರಣಾವತ್ ಹಾಗೂ ಅರುಣ್ ಗೋವಿಲ್ ಗೆ ಟಿಕೆಟ್ ನೀಡಿರುವುದು ಅಚ್ಚರಿ ಮೂಡಿಸಿದೆ. ಪುಟ 2

## ಮೋದಿ ಮೋದಿ ಘೋಷಣೆ ಕೂಗುವ ಯುವಕರು, ವಿದ್ಯಾರ್ಥಿಗಳ ಕಪಾಳಕ್ಕೆ
# ಹೊಡೆಯಬೇಕು



**ಕೊಪ್ಪಳ:** ಪ್ರಧಾನಿ ನರೇಂದ್ರ ಮೋದಿ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಕೊಪ್ಪಳದ ಕಾರಟಗಿಯಲ್ಲಿ ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಭಾನುವಾರ ಕಾರಟಗಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, 'ಮೋದಿ ಮೋದಿ' ಎಂದು ಘೋಷಣೆ ಕೂಗುವ ಯುವಕರು, ವಿದ್ಯಾರ್ಥಿಗಳ ಕಪಾಳಕ್ಕೆ ಹೊಡೆಯಬೇಕು ಎಂದಿದ್ದಾರೆ. ಮೋದಿ ಸರ್ಕಾರ ಪ್ರತಿವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿಸುತ್ತೇವೆ ಎಂದು ಹೇಳಿತ್ತು. ಆದರೆ, ಉದ್ಯೋಗ ಕೊಡಿ ಎಂದರೆ ಪಕೋಡ ಮಾರಿ ಎನ್ನುತ್ತಾರೆ ಮೋದಿ. ಹತ್ತು ವರ್ಷದಲ್ಲಿ ಇಪ್ಪತ್ತು ಕೋಟಿ ಯುವಕರಿಗೆ ಉದ್ಯೋಗ ಸಿಗಬೇಕಿತ್ತು. ಆದರೆ ಮೋದಿ ಸರ್ಕಾರ ಭರವಸೆ ಈಡೇರಿಸಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನೀಡಿದ ಭರವಸೆಯಂತೆ ಉದ್ಯೋಗ ಸೃಷ್ಟಿ ಮಾಡದ ಕಾರಣ ಇನ್ನು ವಿದ್ಯಾರ್ಥಿಗಳು ಮತ್ತು ಯುವಕರು 'ಮೋದಿ ಮೋದಿ' ಎಂದು ಕೂಗಿದರೆ ಅವರ ಕಪಾಳಕ್ಕೆ ಹೊಡೆಬೇಕು ಎಂದು ಸಚಿವರು ಹೇಳಿದ್ದಾರೆ. ಪುಟ 2

# ಸಂದೇಶ್ ಖಾಲಿ ದುರ್ಘಟನೆಯ ಸಂತ್ರಸ್ತೆಯನ್ನೇ ಕಣಕ್ಕಿಳಿಸಿದ ಬಿಜೆಪಿ



**ಪಶ್ಚಿಮ ಬಂಗಾಳ:** ಕಳೆದ ಹಲವು ದಿನಗಳಿಂದ ಪಶ್ಚಿಮ ಬಂಗಾಳದ ಸಂದೇಶ್ ಖಾಲಿ ಚರ್ಚೆಯಲ್ಲಿದೆ. ಈ ಪ್ರದೇಶವು ಬಸಿರ್ಹತ್ ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುತ್ತದೆ. ಸಂದೇಶ್ ಖಾಲಿ ಸಂತ್ರಸ್ತೆ ರೇಖಾ ಪಾತ್ರಾ ಅವರನ್ನು ಬಿಜೆಪಿ ಈ ಕ್ಷೇತ್ರದಿಂದ ತನ್ನ ಅಭ್ಯರ್ಥಿಯನ್ನಾಗಿ ಮಾಡಿದೆ. ಸಂದೇಶ್ ಖಾಲಿಯಲ್ಲಿ ಮಹಿಳೆಯರು ಟಿಎಂಸಿ ನಾಯಕ ಶೇಖ್ ಷಹಜಹಾನ್ ಮತ್ತು ಅವರ ಸಹಚರರ ವಿರುದ್ಧ ಲೈಂಗಿಕ ಕಿರುಕುಳ ಮತ್ತು ಭೂಕಬಳಿಕೆ ಆರೋಪ ಮಾಡಿದ್ದರು. ಇದಾದ ನಂತರ ಟಿಎಂಸಿ ಷಹಜಹಾನ್ ಅವರನ್ನು ಪಕ್ಷದಿಂದ ಹೊರಹಾಕಿತು.

ಬಿಜೆಪಿ ಐಟಿ ಸೆಲ್ ಮುಖ್ಯಸ್ಥ ಅಮಿತ್ ಮಾಳವಿಯಾ ಅವರು ಟ್ವಿಟ್ಟರ್‌ನಲ್ಲಿ ಬಿಜೆಪಿ ಬಂಗಾಳದ ಬಸಿರ್‌ಹತ್ ಕ್ಷೇತ್ರದಿಂದ ರೇಖಾ ಪಾತ್ರಾ ಅವರನ್ನು ಕಣಕ್ಕಿಳಿಸಿದೆ ಎಂದು ಪೋಸ್ಟ್ ಮಾಡಿದ್ದಾರೆ. ಶೇಖ್ ಷಹಜಹಾನ್‌ನಿಂದ ನೊಂದ ಸಂದೇಶ್ ಖಾಲಿ ಸಂತ್ರಸ್ತರಲ್ಲಿ ರೇಖಾ ಪಾತ್ರಾ ಒಬ್ಬರು, ಮತ ಕೇಳುವ ಮುನ್ನ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ನೊಂದಿರುವ ಮತ್ತು ಅವರ ನಿರ್ಲಕ್ಷ್ಯಕ್ಕೆ ಬಲಿಯಾದ ಅವರಂತಹ ಮಹಿಳೆಯರ ಕಣ್ಣೀರು ಒರೆಸಲಿ. ಸಂದೇಶಖಾಲಿ ಮತ್ತು ಬಂಗಾಳದ ಮಹಿಳೆಯರೊಂದಿಗೆ ಬಿಜೆಪಿ ನಿಂತಿದೆ ಎಂದು ಬರೆದಿದ್ದಾರೆ.

ಮಾರ್ಚ್ 6 ರಂದು ಪ್ರಧಾನಿ ನರೇಂದ್ರ ಮೋದಿ ಅವರು ಸಂದೇಶಖಾಲಿಯಲ್ಲಿ ಮಹಿಳೆಯರನ್ನು ಭೇಟಿಯಾಗಿದ್ದರು. ಭಾರತೀಯ ಜನತಾ ಪಕ್ಷವು ಕಲ್ಕತ್ತಾ ಹೈಕೋರ್ಟ್ ನ್ಯಾಯಮೂರ್ತಿ ಅಭಿಜಿತ್ ಗಂಗೋಪಾಧ್ಯಾಯ ಅವರಿಗೆ ಟಿಕೆಟ್ ನೀಡಿದೆ. ಇತ್ತೀಚೆಗಷ್ಟೇ ಬಿಜೆಪಿ ಸೇರಿದ್ದರು.

ಸಂದೇಶ್ ಖಾಲಿಯ ಮಹಿಳೆಯರ ಪರವಾಗಿ ಧ್ವನಿಯನ್ನು ಮೊದಲು ಎತ್ತಿದವರು ಅವರು, ಮೂವರು ಆರೋಪಿಗಳಾದ ಟಿಎಂಸಿ ಶಾಸಕ ಶೇಖ್ ಷಹಜಹಾನ್, ಶಿಬು ಹಜ್ರಾ ಮತ್ತು ಉತ್ತಮ್ ಸರ್ದಾರ್ ಜೈಲು ಸೇರಿದ್ದಾರೆ. ಪುಟ 2

## ಸಂಸದ ಅನಂತಕುಮಾರ ಹೆಗಡೆಗೆ ಟಿಕೆಟ್ ಮಿಸ್
# ಹಲವು ಕಾರಣ!



**ಉತ್ತರ ಕನ್ನಡ:** ಲೋಕಸಭೆ ಚುನಾವಣೆಗೆ ಬಿಜೆಪಿಯಐದನೇ ಪಟ್ಟಿ ಬಿಡುಗಡೆಯಾಗಿದೆ. ಹಿಂದೂ ಫೈರ್ ಬ್ರ್ಯಾಂಡ್ ಎಂದೆ ಹೆಸರುವಾಸಿಯಾಗಿರುವ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಹಾಲಿ ಸಂಸದ ಅನಂತಕುಮಾರ ಹೆಗಡೆ ಅವರಿಗೆ ಬಿಜೆಪಿ ಟಿಕೆಟ್ ಕೈತಪ್ಪಿದೆ. ಚುನಾವಣೆ ಸಮೀಪಿಸುತ್ತಿದ್ದಂತೆಯೇ ಆಕ್ಟಿವ್ ಆಗಿದ್ದ ಅನಂತಕುಮಾರ ಹೆಗಡೆ, ವಿವಾದಾತ್ಮಕ ಹೇಳಿಕೆಗಳನ್ನು ನೀಡಿ, ಸಿಎಂ ಸಿದ್ದರಾಮಯ್ಯ ಮೇಲೆ ಮುಗಿ ಬಿದ್ದು, ಪ್ರಧಾನಿ ಮೋದಿಯವರನ್ನು ಹೊಗಳುವ ಮೂಲಕ ಹೈಕಮಾಂಡ್ ನಾಯಕರನ್ನು ಗಮನವನ್ನು ತಮ್ಮತ್ತ ಸೆಳೆದುಕೊಂಡು ಟಿಕೆಟ್ ಗಿಟ್ಟಿಸಿಕೊಳ್ಳಲು ಸಾಕಷ್ಟು ಕಸರತ್ತು ನಡೆಸಿದರು ಕೂಡ ಪ್ರಯೋಜನವಾಗಲಿಲ್ಲ.

ಚುನಾವಣಾ ರಾಜಕೀಯದಿಂದ ವಿಮುಖರಾಗಿರುವುದಾಗಿ ಹೇಳಿದ್ದ ಅನಂತ ಕುಮಾರ ಹೆಗಡೆ ಚುನಾವಣೆ ಸಮೀಪಿಸುತ್ತಿದ್ದಂತೆ ಸಕ್ರಿಯರಾದರೂ ಟಿಕೆಟ್ ಪಡೆಯುವಲ್ಲಿ ಸಫಲರಾಗಲಿಲ್ಲ. ಅನಂತಕುಮಾರ್ ಹೆಗಡೆ ಅವರಿಗೆ ಟಿಕೆಟ್ ಕೈತಪ್ಪಲಿದೆ ಎಂಬ ಕಾರಣಕ್ಕಾಗಿಯೇ ಬಿಜೆಪಿಯಲ್ಲಿ ಆಕಾಂಕ್ಷಿಗಳ ಸಂಖ್ಯೆ ಹತ್ತಕ್ಕೂ ಮೀರಿತ್ತು. ಅನಂತರ ಕುಮಾರ್ ಹೆಗಡೆ ಬದಲಿಗೆ ಪ್ರಮುಖವಾಗಿ ಚಿಂತಕ ಚಕ್ರವರ್ತಿ ಸೂಲಿಬೆಲೆ, ಮಾಜಿ ಮುಖ್ಯಮಂತ್ರಿ ರಾಮಕೃಷ್ಣ ಹೆಗಡೆ ಮೊಮ್ಮಗ ಶಶಿಭೂಷಣ್ ಹೆಗಡೆ ಮತ್ತು ಮಾಜಿ ಸಭಾಪತಿ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ಹೆಸರು ಮುನ್ನಲೆಗೆ ಬಂದಿತ್ತು. ಕೊನೆಗೆ ವಿಶ್ವೇಶ್ವರ ಹೆಗಡೆ ಕಾಗೇರಿ ಅವರಿಗೆ ಟಿಕೆಟ್ ಸಿಕ್ಕಿದೆ.

**ಅನಂತಕುಮಾರ ಹೆಗಡೆಗೆ ಟಿಕೆಟ್ ಕೈತಪ್ಪಲು ಕಾರಣ:** ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಲ್ಲಿ ತನ್ನದೆ ಆದ ಕಾರ್ಯಕರ್ತರನ್ನು ಹೊಂದಿರುವ ಅನಂತ ಕುಮಾರ ಹೆಗಡೆ, 2023ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳ ಪರವಾಗಿ ಒಂದೆ ಒಂದು ಬಾರಿ ಪ್ರಚಾರ ಪುಟ 2

# ಮೈಸೂರಿನಲ್ಲಿ ಪ್ರವಾಸಿಗರ ಸಂಖ್ಯೆಯಲ್ಲಿ ಭಾರೀ ಇಳಿಕೆ!



**ಮೈಸೂರು:** ಸಾಮಾನ್ಯವಾಗಿ ಏಪ್ರಿಲ್ ಮೇ ತಿಂಗಳಲ್ಲಿ ಶಾಲೆ ಮಕ್ಕಳ ಬೇಸಗೆ ರಜೆ ಮತ್ತು ಇತರ ರಜೆಗಳ ಕಾರಣಗಳಿಂದ ಮೈಸೂರಿಗೆ ಹರಿದು ಬರುತ್ತಿದ್ದ ಪ್ರವಾಸಿಗರ ಪ್ರವಾಹ ಈ ವರ್ಷ ಕಡಿಮೆಯಾಗಿದೆ. ಈ ವರ್ಷ ಪ್ರವಾಸಿಗರ ಸಂಖ್ಯೆಯಲ್ಲಿ ಶೇ 50ರಷ್ಟು ಕುಸಿತವಾಗಿರುವ ಬಗ್ಗೆ ವರದಿಯಾಗಿದೆ. ಸಾಮಾನ್ಯವಾಗಿ ಮಾರ್ಚ್‌ನಲ್ಲಿ ಮಕ್ಕಳ ಬೋರ್ಡ್ ಪರೀಕ್ಷೆಗಳು ಮುಗಿದ ತಕ್ಷಣ ಪ್ರವಾಸಿಗರು ಮೈಸೂರು ಮತ್ತು ಹತ್ತಿರದ ಪ್ರವಾಸಿ ತಾಣಗಳಿಗೆ ಭೇಟಿ ನೀಡುತ್ತಾರೆ. ಆದಾಗ್ಯೂ, ಹಿಂದಿನ ವರ್ಷಗಳಿಗೆ ಹೋಲಿಸಿದರೆ ಮೈಸೂರಿಗೆ ಮತ್ತು ಸಮೀಪದ ಪ್ರವಾಸಿ ತಾಣಗಳಿಗೆ ಬುಕಿಂಗ್ ಗಳು ಗಣನೀಯವಾಗಿ ಕುಸಿತ ಕಂಡಿದೆ ಎಂದು ಟೂರ್ ಆಪರೇಟರ್‌ಗಳು ತಿಳಿಸಿದ್ದಾರೆ.

**ಇಳಿಕೆಗೆ ಕಾರಣವೇನು:** ಬೇಸಗೆಯ ತಾಪ ಹೆಚ್ಚಾಗಿರುವುದು ಮತ್ತು ಮುಂಬರುವ ಲೋಕಸಭೆ ಚುನಾವಣೆಯೇ ಪ್ರವಾಸಿಗರ ಸಂಖ್ಯೆಯಲ್ಲಿ ಇಳಿಕೆಗೆ ಕಾರಣ ಎಂದು ಟೂರ್ ಆಪರೇಟರ್ ಗಳು ಅಭಿಪ್ರಾಯಪಟ್ಟಿದ್ದಾರೆ. ಅಷ್ಟೇ ಅಲ್ಲದೆ ಈ ವರ್ಷ ಬೋರ್ಡ್ ಪರೀಕ್ಷೆ ಸಂಬಂಧ ಉಂಟಾಗಿದ್ದ ಗೊಂದಲದ ಕಾರಣ ತಡವಾಗಿ ಈಗ ಪರೀಕ್ಷೆಗಳು ನಡೆಯುತ್ತಿವೆ. ಹಾಗಾಗಿ, ಪೋಷಕರು ಪ್ರವಾಸದ ಯೋಜನೆಗಳನ್ನು ಮುಂದೂಡುತ್ತಿದ್ದಾರೆ.

ಮತ್ತೊಂದೆಡೆ, ಪರೀಕ್ಷೆಗಳು ಮುಗಿದ ನಂತರವೂ ಸರ್ಕಾರಿ ಅಧಿಕಾರಿಗಳು ಮತ್ತು ಉದ್ಯೋಗಿಗಳನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಲಾಗುತ್ತಿದೆ. ಜಿಲ್ಲಾ ಚುನಾವಣಾ ಕಚೇರಿಯ ಅನುಮತಿಯಿಲ್ಲದೆ ಅವರು ಭಾನುವಾರವೂ ತಮ್ಮ ಕೇಂದ್ರ ಕಚೇರಿಯನ್ನು ಬಿಡುವಂತಿಲ್ಲ. ಅಲ್ಲದೆ, ಮಾದರಿ ನೀತಿ ಸಂಹಿತೆ ಉಲ್ಲಂಘನೆ ತಡೆಯಲು ಚುನಾವಣಾ ಅಧಿಕಾರಿಗಳು ಎಲ್ಲೆಡೆ ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿರುವ ಕಾರಣ ಪ್ರವಾಸಿಗರು ಭೇಟಿ ನೀಡಲು ನಿರಾಕರಿಸುತ್ತಿದ್ದಾರೆ. ಪುಟ 2

## ಉಜ್ಜಯಿನಿಯ ಮಹಾಕಾಳೇಶ್ವರ ದೇವಸ್ಥಾನದಲ್ಲಿ ಅಗ್ನಿ ಅವಘಡ
# 13 ಮಂದಿಗೆ ಗಾಯ



**ಉಜ್ಜಯಿನಿ:** ಉಜ್ಜಯಿನಿಯ ಮಹಾಕಾಳೇಶ್ವರ ದೇವಸ್ಥಾನದಲ್ಲಿ ಸೋಮವಾರ ಬೆಳಗ್ಗೆ ಅಗ್ನಿ ಅವಘಡ ಸಂಭವಿಸಿದ್ದು, ಐವರು ಅರ್ಚಕರು ಸೇರಿದಂತೆ ಕನಿಷ್ಠ 13 ಮಂದಿ ಗಾಯಗೊಂಡಿದ್ದಾರೆ. ಹೋಳಿ ಹಬ್ಬದ ಅಂಗವಾಗಿ ದೇವಾಲಯದ ಗರ್ಭಗುಡಿಯಲ್ಲಿ ಭಸ್ಮ ಆರತಿ ನಡೆಸುತ್ತಿದ್ದಾಗ ಬೆಂಕಿ ಕಾಣಿಸಿಕೊಂಡಿದೆ. ಐವರು ಅರ್ಚಕರು ಮತ್ತು ನಾಲ್ವರು ಭಕ್ತರಿಗೆ ಸುಟ್ಟ ಗಾಯಗಳಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ರವಾನಿಸಲಾಗಿದೆ. ಪುಟ 2

# ಸಿದ್ದರಾಮಯ್ಯ ಕಾಮನ್‌ಸೆನ್ಸ್ ಇಲ್ಲದ ಸಿಎಂ



**ಬೀದರ್:** ಎನ್‌ಡಿಆರ್‌ಎಫ್ ಪರಿಹಾರಕ್ಕಾಗಿ ಸರ್ಕಾರ ಸುಪ್ರೀಂನಲ್ಲಿ ಕೇಸ್ ಹಾಕಿರುವುದು ಒಳ್ಳೆಯ ಬೆಳವಣಿಗೆ ಅಲ್ಲ. ಸಿದ್ದರಾಮಯ್ಯನವರ ಈ ನಡೆ ಒಳ್ಳೆಯದಲ್ಲ ಎಂದು ಬೀದರ್‌ನಲ್ಲಿ ಸಿಎಂ ವಿರುದ್ಧ ವಿಪಕ್ಷ ನಾಯಕ ಆರ್.ಅಶೋಕ್ ಗುಡುಗಿದರು. ಸಿದ್ದರಾಮಯ್ಯ ಕಾಮನ್‌ಸೆನ್ಸ್ ಇಲ್ಲದ ಸಿಎಂ. ಮೇ ತಿಂಗಳಲ್ಲಿ ಬರಗಾಲ ಬಂದರೂ ಮೂರು ತಿಂಗಳು ಬಿಟ್ಟು ಘೋಷಿಸಿದ್ದು ಯಾಕೆ? ಮೂರು ತಿಂಗಳೇನು ಕತ್ತೆ ಕಾಯ್ತಿದ್ರಾ? 3 ತಿಂಗಳು ವಿಳಂಬ ಮಾಡದೇ ಇದ್ದಿದ್ರೆ ಕೇಂದ್ರ ಸರ್ಕಾರ ಪರಿಹಾರ ಹಣ ಪಡೆಯಬಹುದಿತ್ತಲ್ಲಾ ಎಂದು ಟಾಂಗ್ ಕೊಟ್ಟರು. ಗ್ಯಾರಂಟಿ ಯೋಜನೆಗಳಿಗೆ ಹಣ ಕೊಟ್ಟು ರಾಜ್ಯ ಸರ್ಕಾರ ದಿವಾಳಿಯಾಗಿದೆ. ಲೋಕಸಭಾ ಚುನಾವಣೆ ಬಳಿಕ ಸರ್ಕಾರ ಬೀದಿಗೆ ಬೀಳುತ್ತೆ. ಬೊಮ್ಮಾಯಿ 25 ಸಾವಿರ ಕೋಟಿ ರೂ. ಉಳಿತಾಯ ಬಜೆಟ್‌ನಿಂದ ಸರ್ಕಾರ ಬದುಕಿದೆ. ಇಲ್ಲದಿದ್ದರೆ ಸಿದ್ದರಾಮಯ್ಯ ಆರು ತಿಂಗಳ ಹಿಂದೆಯೇ ಬೀದಿಗೆ ಬರುತ್ತಿದ್ದರು ಎಂದು ಕಿಡಿಕಾರಿದರು. ಲೋಕಸಭಾ ಚುನಾವಣೆಯಲ್ಲಿ ಸಚಿವರು ಸ್ಪರ್ಧಿಸುತ್ತಾರೆ ಅಂತಾ ಹೇಳಿದ್ರು. ಆದರೆ ಅವರು ಸೋತರೆ ಮಂತ್ರಿ ಸ್ಥಾನ ಹೋಗಲಿದೆ ಎಂಬ ಟಾಸ್ಕ್ ಕೊಟ್ಟಿದ್ದರು. ಹೀಗಾಗಿ ಬೀದರ್‌ನಿಂದ ಚಾಮರಾಜನಗರದವರೆಗೂ ಒಬ್ಬ ಮಂತ್ರಿಯೂ ಸ್ಪರ್ಧಿಸಲಿಲ್ಲ. ಕಾಂಗ್ರೆಸ್‌ಗೆ ವಿಧಿ ಇರದೇ, ಗತಿ ಇಲ್ಲದೇ ಮಂತ್ರಿ ಮಕ್ಕಳಿಗೆ ಮತ್ತು ಸೊಸೆಯಂದಿರಿಗೆ ಟಿಕೆಟ್ ಕೊಟ್ಟಿದ್ದು. ಕಾಂಗ್ರೆಸ್ ಯೋಗ್ಯತೆಗೆ ಯಾರು ಕಾರ್ಯಕರ್ತರೇ ಸಿಗಲಿಲ್ವಾ ಎಂದು ಲೇವಡಿ ಮಾಡಿದರು.

# ಬೈಕ್‌ಗಳ ನಡುವೆ ಮುಖಾಮುಖಿ ಡಿಕ್ಕಿ, ಸವಾರರು ಸ್ಥಳದಲ್ಲೇ ಸಾವು

**ಮೈಸೂರು:** ಎರಡು ಬೈಕ್‌ಗಳ ನಡುವೆ ಮುಖಾಮುಖಿ ಡಿಕ್ಕಿಯಾಗಿ ಇಬ್ಬರು ಬೈಕ್ ಸವಾರರು ಸ್ಥಳದಲ್ಲೇ ಸಾವಿಗೀಡಾದ ಘಟನೆ ಜಿಲ್ಲೆಯ ಟಿ.ನರಸೀಪುರ ತಾಲ್ಲೂಕಿನ ಹೆಳವರಹುಂಡಿ ಬಳಿ ನಡೆದಿದೆ. ಅಪಘಾತದಲ್ಲಿ ಬೈಕ್‌ನ ಹಿಂಬದಿ ಸವಾರರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಟಿ.ನರಸೀಪುರದ ಆದಿಬೆಟ್ಟಹಳ್ಳಿಯ ನಾಗರಾಜು (35) ಹಾಗೂ ಗುಂಡ್ಲುಪೇಟೆ ತಾಲ್ಲೂಕಿನ ಬಿಳಿಗಿರಿ (30) ಮೃತ ದುರ್ದೈವಿಗಳು ಎಂದು ತಿಳಿದು ಬಂದಿದೆ. ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡವರನ್ನು ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ.

**ಹೆದ್ದಾರಿಯಲ್ಲಿ ಸರಣಿ ಅಪಘಾತ:** ಬೆಂಗಳೂರು-ಮೈಸೂರು ಹಳೇ ಹೆದ್ದಾರಿಯಲ್ಲಿ ಸರಣಿ ಅಪಘಾತ ಸಂಭವಿಸಿದ್ದು, ರಾಮನಗರ ಸಮೀಪದ ಕಾಮತ್ ಹೋಟೆಲ್ ಬಳಿ ಮೂರ್ನಾಲ್ಕು ಬೈಕ್‌ಗಳು ಬಿದ್ದು, ಸವಾರರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು, ಸ್ಥಳೀಯರು ಅಂಬುಲೆನ್ಸ್‌ನಲ್ಲಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ರಸ್ತೆಯಲ್ಲಿ ಅವೈಜ್ಞಾನಿಕವಾಗಿ ಡಾಂಬರ್ ಹಾಕಿರುವುದೇ ಈ ಅಪಘಾತಕ್ಕೆ ಕಾರಣ ಎಂದು ಸ್ಥಳೀಯರು ದೂರಿದ್ದಾರೆ.

# ಬೆಳಗಾವಿಯಲ್ಲಿ ಶೆಟ್ಟರ್, ಚಿಕ್ಕಬಳ್ಳಾಪುರ ಸುಧಾಕರ್, ಉ.ಕನ್ನಡದಲ್ಲಿ ಕಾಗೇರಿ ಸ್ಪರ್ಧೆ

**ನವದೆಹಲಿ:** ಲೋಕಸಭಾ ಚುನಾವಣೆಗೆ ಬಿಜೆಪಿಯು ಅಭ್ಯರ್ಥಿಗಳ ಐದನೇ ಪಟ್ಟಿ ಬಿಡುಗಡೆ ಮಾಡಿದ್ದು, ಕರ್ನಾಟಕದ ನಾಲ್ಕು ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಘೋಷಿಸಿದೆ.

ಬೆಳಗಾವಿಯಿಂದ ಜಗದೀಶ್ ಶೆಟ್ಟರ್, ರಾಯಚೂರು- ರಾಜಾ ಅಮರೇಶ್ವರ ನಾಯಕ್, ಉತ್ತರ ಕನ್ನಡ- ವಿಶ್ವೇಶ್ವರ ಹೆಗಡೆ ಕಾಗೇರಿ, ಚಿಕ್ಕಬಳ್ಳಾಪುರದಿಂದ ಡಾ. ಕೆ.ಸುಧಾಕರ್ ಅವರಿಗೆ ಟಿಕೆಟ್ ನೀಡಿದೆ.

ಚಿತ್ರದುರ್ಗ ಕ್ಷೇತ್ರದ ಟಿಕೆಟ್ ಅನ್ನು ಬಿಜೆಪಿ ಕಾಯ್ದಿರಿಸಿದೆ. ಕ್ಷೇತ್ರದಲ್ಲಿ ಟಿಕೆಟ್‌ಗಾಗಿ ಹಾಲಿ ಸಂಸದ ಎ.ನಾರಾಯಣ ಸ್ವಾಮಿ ವರ್ಸಸ್ ಜನಾರ್ದನ ಸ್ವಾಮಿ ಮಧ್ಯೆ ತೀವ್ರ ಪೈಪೋಟಿ ಇದೆ. ಜನಾರ್ದನ ಸ್ವಾಮಿ ಪರ ಸಂಘ ಪರಿವಾರ ನಿಂತಿದೆ. ಇದರ ಮಧ್ಯೆ, ಗೋವಿಂದ ಕಾರಜೋಳ ಹೆಸರು ಕೂಡ ಕೇಳಿಬರುತ್ತಿದೆ. ಹೀಗಾಗಿ ಪಕ್ಷದ ಯಾರಿಗೆ ಮಣೆ ಹಾಕುತ್ತದೆ ಎಂಬುದು ಕುತೂಹಲ ಮೂಡಿಸಿದೆ.

ಇತ್ತ ಉತ್ತರ ಕನ್ನಡ ಕ್ಷೇತ್ರದಲ್ಲಿ ನಿರೀಕ್ಷೆಯಂತೆ ಅನಂತ್ ಕುಮಾರ್ ಹೆಗಡೆಗೆ ಟಿಕೆಟ್ ಮಿಸ್ ಆಗಿದೆ. ಕ್ಷೇತ್ರದಲ್ಲಿ ಕಾರ್ಯಕರ್ತರಿಂದಲೇ ಹೆಗಡೆ ವಿರುದ್ಧ ಆಕ್ರೋಶ ವ್ಯಕ್ತವಾಗಿತ್ತು. ಹೀಗಾಗಿ ಅವರ ಬದಲಿಗೆ ವಿಧಾನಸಭಾ ಮಾಜಿ



ಸಭಾಧ್ಯಕ್ಷ ಕಾಗೇರಗೆ ಈ ಬಾರಿ ಪಕ್ಷ ಮಣೆ ಹಾಕಿದೆ.

ಚಿಕ್ಕಬಳ್ಳಾಪುರಕ್ಕೆ ಹೈಕಮಾಂಡ್ ಕೋಟಾದಲ್ಲಿ ಟಿಕೆಟ್ ಹಂಚಿಕೆ ಮಾಡಲಾಗಿದೆ. ಡಾ. ಕೆ.ಸುಧಾಕರ್‌ಗೆ ಟಿಕೆಟ್ ಹೈಕಮಾಂಡ್ ಕೋಟಾದಲ್ಲಿ ನೀಡಿದೆ ಎನ್ನಲಾಗಿದೆ. ಸ್ಥಳೀಯವಾಗಿ ಸುಧಾಕರ್ ಪ್ರಭಾವ ಮತ್ತು ಬಿಜೆಪಿ ಕೋಟೆ ಎಂಬ ಲೆಕ್ಕಾಚಾರದಲ್ಲಿ ಟಿಕೆಟ್ ನೀಡಲಾಗಿದೆ.

ಇನ್ನು ಬೆಳಗಾವಿಯಲ್ಲಿ ಹಾಲಿ ಸಂಸದೆ ಮಂಗಳಾ ಅಂಗಡಿ ಬದಲು ಜಗದೀಶ್ ಶೆಟ್ಟರ್‌ಗೆ ಪಕ್ಷ ಮಣೆ ಹಾಕಿದೆ. ಸ್ಥಳೀಯರ ವಿರೋಧದ ಮಧ್ಯೆಯೂ ಕಾಂಗ್ರೆಸ್ ಬಿಟ್ಟು ಬಿಜೆಪಿಗೆ ವಾಪಸ್ ಆಗಿದ್ದ ಜಗದೀಶ್ ಶೆಟ್ಟರ್‌ಗೆ ಬೆಳಗಾವಿ ಟಿಕೆಟ್ ನೀಡಲಾಗಿದೆ. ಯಡಿಯೂರಪ್ಪ ಒತ್ತಾಯದ ಮೇರೆಗೆ ಶೆಟ್ಟರ್‌ಗೆ ಟಿಕೆಟ್ ಸಿಕ್ಕಿದೆ. ಸ್ಥಳೀಯ ನಾಯಕರ ಜೊತೆ ಮಾಜಿ ಸಿಎಂ ಯಡಿಯೂರಪ್ಪ ಸಮಾಲೋಚನೆಗೆ ನಿರ್ಧಾರ ಮಾಡಿದ್ದಾರೆ. ಮುಂದಿನ ವಾರವೇ ಬೆಳಗಾವಿ ಸಂಧಾನ ಕಸರತ್ತು ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

# ಪೊಲೀಸರಿಂದ ಸ್ಥಳ ಮಹಜರು ಸೋನು ಗೌಡ ಇದ್ದ ಕಾರಿಗೆ ಜನರ ಮುತ್ತಿಗೆ

**ರಾಯಚೂರು:** ಕಾನೂನು ಬಾಹಿರವಾಗಿ ಮಗುವನ್ನ ದತ್ತು ತೆಗೆದುಕೊಂಡು ಪೊಲೀಸ್ ವಶದಲ್ಲಿರುವ ಸೋನು ಶ್ರೀನಿವಾಸಗೌಡರನ್ನು ಬೆಂಗಳೂರಿನ ಬ್ಯಾಡರಳ್ಳಿ ಪೊಲೀಸರು ನಿನ್ನೆ ರಾಯಚೂರಿನ ಮಸ್ಕಿ ತಾಲೂಕಿನ ಕಾಚಾಪುರಕ್ಕೆ ಕರೆದುಕೊಂಡು ಬಂದ ಸ್ಥಳ ಮಹಜರು ಮಾಡಿದ್ದಾರೆ. ಬಾಲಕಿ ಚಿಕ್ಕಪ್ಪನ ಮನೆಗೆ ಬಂದ ಪೊಲೀಸರು ಕೆಲವೇ ಕ್ಷಣದಲ್ಲಿ ಮಾಹಿತಿ ಕಲೆಹಾಕಿ ಅವಸರದಲ್ಲಿ ಗ್ರಾಮದಿಂದ ಹೊರನಡೆದರು. ಈ ವೇಳೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದು, ಸೋನು ಗೌಡ ಇದ್ದ ಕಾರಿಗೆ ಗ್ರಾಮಸ್ಥರು ಮುತ್ತಿಗೆ ಹಾಕಿದ್ದಾರೆ.

ಸ್ಥಳ ಮಹಜರು ಮಾಡಲು ಪೊಲಿಸರು ಭೇಟಿ ನೀಡಿದ ಬಳಿಕ ಸೋನು ಗೌಡ ಜೊತೆ ಮಾತನಾಡಬೇಕು ಅಂತ ಗ್ರಾಮಸ್ಥರು ಗಲಾಟೆ ಮಾಡಿದರು. ಪೊಲೀಸ್ ಕಾರಿಗೆ ಮುತ್ತಿಗೆ ಹಾಕಿ ಸೋನು ಗೌಡರನ್ನು ನೋಡಲು ನೂಕುನುಗ್ಗಲು ಮಾಡಿದರು. ಗ್ರಾಮಸ್ಥರು ಹಾಗೂ ಬಾಲಕಿ ಸಂಬಂಧಿಕರಿಂದ ಮಾಹಿತಿ ಪಡೆದ ಪೊಲೀಸರು ಸುಮಾರು ಇಪ್ಪತ್ತು ನಿಮಿಷಗಳಲ್ಲಿ ಸ್ಥಳ ಮಹಜರು ಮುಗಿಸಿ ವಾಪಸ್ ತೆರಳಿದ್ದಾರೆ.

ಈ ಮಧ್ಯೆ ಮಾಧ್ಯಮದೊಂದಿಗೆ ಮಾತನಾಡಿರುವ ಮಗುವಿನ ಚಿಕ್ಕಪ್ಪ ಸೋನುಗೌಡ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಮಗುವನ್ನ ನಾವು ದತ್ತು ನೀಡಿಲ್ಲ, ಆಕೆ ನಮಗೆ ಯಾವುದೇ ಹಣದ ಸಹಾಯ ಮಾಡಿಲ್ಲ. ನಮ್ಮ ಮಗಳನ್ನು ಓದಿಸುತ್ತೇನೆ. ಚೆನ್ನಾಗಿ ಸಾಕುತ್ತೇನೆ ಎಂದು ಹೇಳಿ ಕರೆದುಕೊಂಡು ಹೋಗಿದ್ದಾರೆ. ಈಗ ದತ್ತು ತೆಗೆದುಕೊಂಡಿದ್ದೇನೆ ಅಂತ ಹೇಳಿರುವುದು ಸರಿಯಲ್ಲ ಅಂತ ಆಕ್ರೋಶ ವ್ಯಕ್ತಪಡಿಸಿದರು.



# ಮತ್ತೆ ಜನರ ಸೇವೆ ಮಾಡಲಿ ಎಂದು ಭಗವಂತ ಕಾಪಾಡಿದ್ದಾನೆ

**ಬೆಂಗಳೂರು:** ಮೂರನೇ ಬಾರಿ ಹೃದಯ ಶಸ್ತ್ರಚಿಕಿತ್ಸೆ ನಡೆದಿದ್ದು, ಮತ್ತೆ ಜನರ ಸೇವೆ ಮಾಡಲಿ ಎಂದು ಭಗವಂತ ನನ್ನನ್ನು ಕಾಪಾಡಿದ್ದಾನೆ ಎಂದು ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ಹೇಳಿದ್ದಾರೆ.



ಚೆನ್ನೈನ ಅಪೋಲೋ ಆಸ್ಪತ್ರೆಯಲ್ಲಿ ಹೃದಯ ಶಸ್ತ್ರಚಿಕಿತ್ಸೆ ನಡೆದಿ ಇಂದು ಡಿಸ್ಚಾರ್ಜ್ ಆಗಿದ್ದ ಕುಮಾರಸ್ವಾಮಿ ವಿಶೇಷ ವಿಮಾನದಲ್ಲಿ ಬೆಂಗಳೂರಿನ ಹೆಚ್‌ಎಎಲ್‌ಗೆ ಬಂದಿಳಿದು ಜೆಪಿ ನಗರದ ನಿವಾಸಕ್ಕೆ ತೆರಳಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ಹಿಂದೆ ಎರಡು ಬಾರಿ ಹೃದಯ ಶಸ್ತ್ರಚಿಕಿತ್ಸೆಯಲ್ಲಿ ಲೋಪವಾಗಿತ್ತು, ಈಗ ಮತ್ತೆ ಚಿಕಿತ್ಸೆ ಪಡೆದಿದ್ದೇನೆ ಎಂದಿದ್ದಾರೆ.

ನಾಡಿನಾದ್ಯಂತ ಅಭಿಮಾನಿಗಳು, ಹಿತೈಷಿಗಳು ದೇವರಿಗೆ ಪ್ರಾರ್ಥನೆ ಮಾಡಿದ್ದಾರೆ. ಅವರ ಪ್ರಾರ್ಥನೆ ಫಲ ಕೊಟ್ಟಿದೆ. ಚಿಕಿತ್ಸೆ ಬಳಿಕ, ವೈದ್ಯರು ನನ್ನ ಬಳಿ ಚರ್ಚೆ ಮಾಡಿದರು. ವೈದ್ಯರು ಸಾಯಿಬಾಬಾನ ಭಕ್ತರಾಗಿದ್ದು, ಸಾಯಿಬಾಬಾನಿಗೆ ಪೂಜೆ ಸಲ್ಲಿಸಿ ಆಪರೇಷನ್ ನೆರವೇರಿಸಿದ್ದಾರೆ. ನಾನು ಆಪರೇಷನ್ ಮಾಡಿಲ್ಲ, ಸಾಯಿಬಾಬಾನೇ ಆಪರೇಷನ್ ಮಾಡಿದ್ದು ಎಂದು ವೈದ್ಯರು ಹೇಳಿದರು. ಮತ್ತೊರ್ವ ವೈದ್ಯ, ಹಂಗೇರಿಯಾದವರು, ನನಗೆ ಮರುಜನ್ಮ ನೀಡಿದ್ದಾರೆ ಎಂದು ಅವರು ಹೇಳಿಕೊಂಡಿದ್ದಾರೆ.

ಲೋಕಸಭಾ ಚುನಾವಣೆಗೆ ನನ್ನ ಕೈಲಾದ ರೀತಿ ಪ್ರಚಾರದಲ್ಲಿ ತೊಡಗಿಕೊಳ್ಳುತ್ತೇನೆ. ಎನ್‌ಡಿಎ ಅಭ್ಯರ್ಥಿಗಳ ಪರ ಚುನಾವಣಾ ಪ್ರಚಾರದಲ್ಲಿ ನಡೆಸುತ್ತೇನೆ. ವೈದ್ಯರು ಮೂರ್ನಾಲ್ಕು ದಿನಗಳ ಕಾಲ ವಿಶ್ರಾಂತಿ ಮಾಡಲು ಹೇಳಿದ್ದಾರೆ. ಇನ್ನೆರೆಡು ದಿನಗಳಲ್ಲಿ ಮಂಡ್ಯ ಅಭ್ಯರ್ಥಿ ಯಾರೆಂಬುದು ಫೈನಲ್ ಆಗಲಿದೆ ಎಂದಿದ್ದಾರೆ.

ಕೇಂದ್ರ ತೆರಿಗೆ ಹಣ ಕೊಡುತ್ತಿಲ್ಲ ಎಂದು ಸುಪ್ರೀಂ ಕೋರ್ಟ್‌ಗೆ ಹೋಗುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ನಮ್ಮ ದುಡ್ಡು, ನಮ್ ತೆರಿಗೆ ಅನ್ನೋದೆಲ್ಲ ಡ್ರಾಮಾ, ಇದೊಂದು ಸ್ಟಂಟ್. ಇದನ್ನು ಬಿಟ್ಟು ಸಿಎಂ ಕೆಲಸ ಮಾಡ್ಬೇಕು ಎಂದಿದ್ದಾರೆ.

ಬಳಿಕ ಮನೆ ಬಳಿ ಸೇರಿದ್ದ ಜೆಡಿಎಸ್ ಕಾರ್ಯಕರ್ತರನ್ನ ಮಾತನಾಡಿಸಿ ಅವರು ವಿಶ್ರಾಂತಿಗೆ ತೆರಳಿದ್ದಾರೆ. ನೂರಾರು ಕಾರ್ಯಕರ್ತರು ಭೇಟಿ ನೀಡುವ ನಿರೀಕ್ಷೆ ಇದ್ದು, ಜೆಪಿನಗರದ ನಿವಾಸದ ಬಳಿ ಸ್ಪೀಕರ್ ಅಳವಡಿಕೆ ಮಾಡಲಾಗಿದೆ. ಸ್ಪೀಕರ್ ಮೂಲಕ ಮಂಡ್ಯ ಕಾರ್ಯಕರ್ತರು, ಮುಖಂಡರೊಂದಿಗೆ ಅವರು ಮಾತಾಡಲಿದ್ದಾರೆ.

# ವಿಜಯಪುರ ಕೋಲ್ಡ್ ಬ್ಲಡ್ ಮರ್ಡರ್ ಕೇಸ್ ವರ್ಷದ ಬಳಿಕ ಪ್ರಕರಣ ಭೇದಿಸಿದ ಪೊಲೀಸರು

**ವಿಜಯಪುರ:** ಒಂದು ವರ್ಷದ ಹಳೆಯ ಕೋಲ್ಡ್ ಬ್ಲಡ್ ಮರ್ಡರ್ ಕೇಸ್ ಅನ್ನು ಭೇದಿಸುವಲ್ಲಿ ವಿಜಯಪುರ ಪೊಲೀಸರು ಯಶಸ್ವಿಯಾಗಿದ್ದಾರೆ. ಒಂದು ವರ್ಷದ ಹಿಂದೆ ನಡೆದಿದ್ದ ತಾಯಿ ಮಗನ ಡಬಲ್ ಮರ್ಡರ್ ಪ್ರಕರಣ ಬೇಧಿಸಿ, ಕೊಲೆಗೆ ಕಾರಣನಾದ ಆರೋಪಿಯನ್ನ ಬಂಧಿಸಿದ್ದಾರೆ.



**ಏನಿದು ಕೇಸ್?:** ಮೈಸೂರು ಮೂಲದ ಶ್ರುತಿ ಹಾಗೂ ಆಕೆಯ 13 ವರ್ಷದ ಮಗ ರೋಹನ್ ಒಂದು ವರ್ಷದ ಹಿಂದೆ ಹತ್ಯೆಯಾಗಿದ್ದರು. 2023ರ ಮಾರ್ಚ್ 13 ರಂದು ಕೊಲೆ ನಡೆದಿತ್ತು. ವಿಜಯಪುರದ ಸಾಗರ್ ನಾಯಕ್ ಎಂಬಾತನಿಂದ ಕೊಲೆ ನಡೆದಿತ್ತು. ಸಾಗರ್ ಇಬ್ಬರನ್ನೂ ಕ್ರೂರವಾಗಿ ಕೊಂದು ಎರಡೂ ಶವಗಳನ್ನ ಆಕೆಯದ್ದೇ ಲಗೇಜ್ ಬ್ಯಾಗ್‌ನಲ್ಲಿ ತುಂಬಿ ಮಹಾರಾಷ್ಟ್ರ ಗಡಿಯ ಸಿದ್ದಾಪುರ ಗ್ರಾಮದ ಹೊರವಲಯದ ಬಾವಿಗೆ ಬಿಸಾಡಿದ್ದ.

**ಫೇಸ್‌ಬುಕ್‌ನಲ್ಲಿ ಪರಿಚಯವಾಗಿದ್ದ ಗೆಳತಿ:** ಕೊಲೆ ಆರೋಪಿ ಸಾಗರ್ ಮೈಸೂರಿನಲ್ಲಿದ್ದಾಗ ಫೇಸ್‌ಬುಕ್ ಮೂಲಕ ಶ್ರುತಿಯ ಪರಿಚಯವಾಗಿತ್ತು. ಪರಿಚಯ ಪ್ರೀತಿಗೆ ತಿರುಗಿತ್ತು, 13 ವರ್ಷದ ಮಗ ಇರೋ ಆಂಟಿ ಬಲೆಗೆ ಬಿದ್ದಿದ್ದ ಸಾಗರ್. ಬಳಿಕ ಆಕೆಯ ನಡತೆ ಮೇಲೆ ಸಂಶಯಗೊಂಡು ಆಕೆಯನ್ನ ಬಿಟ್ಟು ವಿಜಯಪುರಕ್ಕೆ ಬಂದಿದ್ದ. ಶ್ರುತಿ ಸಹ ಸಾಗರ್‌ನನ್ನ ಹುಡುಕಿಕೊಂಡು 2023ರ ಮಾರ್ಚ್ 13 ರಂದು ಮಗ ರೋಹಿತ್‌ನೊಂದಿಗೆ ಲಗೇಜ್ ಸಮೇತ ವಿಜಯಪುರಕ್ಕೆ ಬಂದಿದ್ದಳು. ಆಗ ನಗರದ ಸಿಂದಗಿ ರಸ್ತೆಯ ಫೋರ್‌ವೇ ಲಾಡ್ಜ್‌ವೊಂದರಲ್ಲಿ ಶ್ರುತಿ ಹಾಗೂ ಆಕೆಯ ಮಗನನ್ನ ಸಾಗರ್ ಉಳಿಸಿದ್ದ. ನಂತರ ಲಾಡ್ಜ್‌ನಲ್ಲಿ ಗಲಾಟೆಯಾಗಿ ಅಲ್ಲೇ ಶ್ರುತಿಯನ್ನ ಕುತ್ತಿಗೆ ಹಿಸುಕಿ ಕೊಂದು ಹಾಕಿದ್ದ. ಕೊಲೆಗೆ ಬಾಲಕ ಸಾಕ್ಷಿಯಾಗುತ್ತಾನೆ ಅಂತಾ ರೋಹಿತ್‌ನನ್ನೂ ಕೊಲೆ ಮಾಡಿದ್ದ. ನಂತರ ಶ್ರುತಿ ಮೈಸೂರಿನಿಂದ ತಂದಿದ್ದ ಲಗೇಜ್ ಬ್ಯಾಗ್ ನಲ್ಲಿಯೇ ಅವರ ಶವಗಳನ್ನ ಪ್ಯಾಕ್ ಮಾಡಿ ಸಿದ್ದಾಪುರ ಬಾವಿಯಲ್ಲಿ ಬಿಸಾಡಿದ್ದ. ಇದಾದ ಒಂದು ವಾರದ ಬಳಿಕ ಬ್ಯಾಗ್‌ಗಳು ಮೇಲಕ್ಕೆ ತೇಲಿ ಬಂದಿದ್ದವು. ಈ ಬ್ಯಾಗ್‌ಗಳನ್ನು ಪೊಲೀಸರು ಪರಿಶೀಲನೆ ನಡೆಸಿದಾಗ ತಾಯಿ-ಮಗನ ಶವ ಪತ್ತೆಯಾಗಿತ್ತು. ಶವಗಳು ಕೊಳೆತ ಸ್ಥಿತಿಯಲ್ಲಿದ್ದ ಕಾರಣ ಗುರುತು ಪತ್ತೆಯಾಗಿರಲಿಲ್ಲ. ಸಣ್ಣ ಸುಳಿವೂ ಇಲ್ಲದೇ ಪ್ರಕರಣ ಬಾಕಿ ಉಳಿದಿತ್ತು. ಕಳೆದ ಫೆಬ್ರವರಿಯಲ್ಲಿ ಶ್ರುತಿ ಸಂಬಂಧಿಕರು ಮೈಸೂರಿನಲ್ಲಿ ಮಿಸ್ಸಿಂಗ್ ಕೇಸ್ ದಾಖಲಿಸಿದ್ದರು. ಮೈಸೂರಿನ ಮಿಸ್ಸಿಂಗ್ ಕೇಸ್ ಹಾಗೂ ವಿಜಯಪುರದ ಡಬಲ್ ಮರ್ಡರ್ ಕೇಸ್‌ನಲ್ಲಿ ಸಿಕ್ಕ ವಸ್ತುಗಳಿಗೆ ಸಾಮ್ಯತೆ ಕಂಡುಬಂದಿತ್ತು. ಬಳಿಕ ಪ್ರಕರಣ ಕೈಗೆತ್ತಿಕೊಂಡ ವಿಜಯಪುರ ಗ್ರಾಮೀಣ ಠಾಣೆ ಪೊಲೀಸರು ಆರೋಪಿ ಸಾಗರ್‌ನನ್ನ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಕಟ್ಟುನಿಟ್ಟಿನ ಕ್ರಮ

ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಲಾಗಿದ್ದು ಸಿಸಿಟಿವಿ ಕ್ಯಾಮರಾ ಮೂಲಕ ಪರೀಕ್ಷಾ ಅವ್ಯವಹಾರಗಳ ಬಗ್ಗೆ ನಿಗಾ ಇಡಲಾಗುತ್ತಿದೆ. ನಿರ್ದೇಶಕರು ಮತ್ತು ಸಹನಿರ್ದೇಶಕರ ವೃಂದದ ಅಧಿಕಾರಿಗಳನ್ನು ಜಿಲ್ಲಾ ಮೇಲುಸ್ತುವಾರಿ ಅಧಿಕಾರಿಗಳನ್ನಾಗಿ ನೇಮಕ ಮಾಡಲಾಗಿದೆ.

ಡಯಟ್ ಪ್ರಾಂಶುಪಾಲರನ್ನು ಆಯಾ ಜಿಲ್ಲೆಗೆ ಜಿಲ್ಲಾ ವೀಕ್ಷಕರಾಗಿ ನೇಮಕ ಮಾಡಲಾಗಿದೆ. ಇಲಾಖೆಯ ವಿವಿಧ ಹಂತದ ಅಧಿಕಾರಿಗಳನ್ನು ಪರೀಕ್ಷಾ ಕೇಂದ್ರಗಳಿಗೆ ಸ್ಥಾನಿಕ ಜಾಗೃತ ದಳದ ಅಧಿಕಾರಿಗಳನ್ನಾಗಿ ನೇಮಿಸಲಾಗಿದ್ದು ಪರೀಕ್ಷೆಯು ಮಾರ್ಚ್ 25 ರಿಂದ ಏಪ್ರಿಲ್ 6 ರವರೆಗೆ ಬೆಳಿಗ್ಗೆ 10:15 ರಿಂದ ಮಧ್ಯಾಹ್ನ 1:30 ರವರೆಗೆ ನಡೆಯಲಿದೆ. ವಿದ್ಯಾರ್ಥಿಗಳು ಕನ್ನಡ, ಆಂಗ್ಲ, ಹಿಂದಿ, ತೆಲುಗು, ತಮಿಳು, ಉರ್ದು ಮತ್ತು ಮರಾಠಿ ಸೇರಿ ಒಟ್ಟು ಏಳು ಮಾಧ್ಯಮಗಳಲ್ಲಿ ಪರೀಕ್ಷೆ ಬರೆಯಲು ಅವಕಾಶ ನೀಡಲಾಗಿದೆ.

ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಬಿಸಿಯೂಟ

ಎಸ್‌ಎಸ್ ಎಲ್‌ಸಿ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕಾರ್ಯಕ್ಕೆ ಯಾವುದೇ ಅಡಚಣೆಯಾಗದಂತೆ ಬಿಸಿಯೂಟದ ವ್ಯವಸ್ಥೆ ಕಲ್ಪಿಸಲಾಗಿದೆ. ಪರೀಕ್ಷೆ ಬರೆಯುವ ಎಲ್ಲಾ ವಿದ್ಯಾರ್ಥಿಗಳಿಗೆ ಮಧ್ಯಾಹ್ನ ಬಿಸಿಯೂಟ ವಿತರಣೆಗೆ ಸಿದ್ದತೆ ಮಾಡಿಕೊಳ್ಳಲಾಗಿದೆ. ಹಾಗೂ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬಿಎಂಟಿಸಿ ಮತ್ತು ಕೆಎಸ್‌ಆರ್‌ಟಿಸಿ ಉಚಿತ ಬಸ್ ಪ್ರಯಾಣ ಒದಗಿಸಲಾಗಿದೆ.

## ಅರಣ್ಯದಲ್ಲಿ ಪವಾಡ

ನಡೆದಿದೆ. ನೀರಿನ ದಾಹ ನೀಗಿಸಿಕೊಳ್ಳಲು ಕುರಿಗಾಯಿ ಬೆಟ್ಟದ ಮೇಲೆ ಮೂರಡಿ ನೆಲ ತೋಡಿದ್ದಕ್ಕೆ ನೀರು ಜಿನುಗುತ್ತಿದೆ. ಇದು ಬೆಟ್ಟದ ಒಡೆಯ ಬಸವೇಶ್ವರನ ಪವಾಡ ಎನ್ನುತ್ತಿದ್ದಾರೆ ಗ್ರಾಮಸ್ಥರು. ಕುರಿಗಾಹಿಗಳ ಬಾಯಿ ಹರಕೆಯಿಂದ ಬೆಟ್ಟದ ಮೇಲೆ ತೋಡಿದ ಮೂರಡಿ ಗುಂಡಿಯಲ್ಲಿ ಸಿಹಿಯಾದ ನೀರು ಬಂದಿದೆ. ಈ ಬಾರಿ ಬರಗಾಲದಿಂದ ಸಾವಿರ ಅಡಿ ಬೋರ್ ಕೊರೆಸಿದರೂ ಒಂದು ತೊಟ್ಟು ನೀರು ಬರುತ್ತಿಲ್ಲಾ. ಆದರೆ ಬೆಟ್ಟದ ಮೇಲೆ ನೀರು ಬಂದಿರುವುದು ಪವಾಡ ಅಂತಿದ್ದಾರೆ ಗ್ರಾಮಸ್ಥರು. ಈ ವಿಸ್ಮಯ ನೋಡಲು ತಂಡೋಪತಂಡವಾಗಿ ಸುತ್ತಮುತ್ತಲಿನ ಗ್ರಾಮಸ್ಥರು ಬರುತ್ತಿದ್ದಾರೆ. ಗಂಗೆಗೆ ಅರಿಶಿನ, ಕುಂಕುಮ ಹಚ್ಚಿ, ಹಣ್ಣು ಕಾಯಿ ನೈವೇದ್ಯ ಮಾಡಿ ಪೂಜೆ ಮಾಡುತ್ತಿದ್ದಾರೆ. ಜೊತೆಗೆ ನೀರನ್ನು ಬಾಟಲಿಯಲ್ಲಿ ತುಂಬಿಕೊಂಡು ಮನೆಗೆ ತೆಗೆದುಕೊಂಡು ಹೋಗುತ್ತಿದ್ದಾರೆ. ಅಲ್ಲದೇ ಈ ನೀರಿನಲ್ಲಿ ವಿಶೇಷ ಶಕ್ತಿಯಿದೆ ಎಂದು ಮಾತನಾಡುತ್ತಿದ್ದಾರೆ. 10 ಸಾವಿರಕ್ಕೂ ಅಧಿಕ ಹೆಕ್ಟೇರ್ ಮಿಸಲು ಅರಣ್ಯ ಪ್ರದೇಶದಲ್ಲಿ ಈ ವಿಸ್ಮಯ ನಡೆದಿದೆ.

ಈ ಅರಣ್ಯದಲ್ಲಿ ಕೃಷ್ಣ ಮೃಗ, ಜಿಂಕೆ, ಸಾರಂಗ, ಹಂದಿ ಸೇರಿದಂತೆ ವಿವಿಧ ವನ್ಯಜೀವಿ ಜೀವಿಸುತ್ತಿವೆ. ಮೂಕ ಪ್ರಾಣಿಗಳ ರೋಧನೆ ನೋಡಲಾರದೆ ಗಂಗೆ ಪ್ರತ್ಯಕ್ಷವಾಗಿದ್ದಾಳೆ! ಈ ನೀರಿನ ಸೆಲೆಯನ್ನು ಅಭಿವೃದ್ಧಿ ಪಡೆಸಿ ನೀರು ಸಂಗ್ರಹಿಸಿ ವನ್ಯ ಜೀವಿಗಳಿಗೆ ನೀರು ಒದಗಿಸಬೇಕು ಎಂದು ಅರಣ್ಯ ಅಧಿಕಾರಿಗಳನ್ನು ಒತ್ತಾಯ ಮಾಡುತ್ತಿದ್ದಾರೆ. ಒಟ್ಟಾರೆ ಹನಿ ನೀರಿಗೂ ಪರದಾಡುತ್ತಿರುವ ಸಂದರ್ಭದಲ್ಲಿ ನೀರು ಮೂರು ಅಡಿಯಲ್ಲಿ ಬೆಟ್ಟದ ಮೇಲೆ ಜಿನುಗುತ್ತಿರುವುದು ಪವಾಡವೇ ಸರಿ. ಅದೇನೆ ಇರಲಿ ಅರಣ್ಯ ಅಧಿಕಾರಿಗಳು ಇದನ್ನು ಅಭಿವೃದ್ಧಿ ಪಡಿಸಬೇಕು ವನ್ಯಜೀವಿಗಳ ನೀರಿನ ಬವಣೆ ನೀಗಿಸಬೇಕು ಎನ್ನುವುದು ಸುತ್ತಮುತ್ತಲಿನ ಗ್ರಾಮಸ್ಥರ ಆಗ್ರಹ.

## ಪಲ್ಲವಿ ಡೆಂಪೊಗೆ ಟಿಕೆಟ್

ಪಲ್ಲವಿ ಡೆಂಪೊ ಮಹಿಳಾ ಕೈಗಾರಿಕೋದ್ಯಮಿ, ಡೆಂಪೊ ಇಂಡಸ್ಟ್ರೀಸ್ ನ ಕಾರ್ಯನಿರ್ವಾಹಕ ನಿರ್ದೇಶಕಿ ಕೂಡ. ಅವರು ಗೋವಾದಲ್ಲಿ ಉದ್ಯಮಿ ಹಾಗೂ ಶಿಕ್ಷಣತಜ್ಞರಾಗಿ ಗುರುತಿಸಿಕೊಂಡಿದ್ದಾರೆ. 49 ವರ್ಷದ ಪಲ್ಲವಿ ರಸಾಯನ ಶಾಸ್ತ್ರದಲ್ಲಿ ಪದವಿ ಹಾಗೂ ಎಂಐಟಿ ಪುಣೆಯಲ್ಲಿ ಎಂಬಿಎ ಮಾಡಿದ್ದಾರೆ. ಅವರಿಗೆ ಟಿಕೆಟ್ ನೀಡಲಾಗಿರುವ ದಕ್ಷಿಣ ಗೋವಾ ಕ್ಷೇತ್ರದಲ್ಲಿ ಕಾಂಗ್ರೆಸ್ ನಾಯಕ ಫ್ರಾನ್ಸಿಸ್ಕೊ ಸರ್ದಿನ್ಹಾ ಪ್ರತಿನಿಧಿಸುತ್ತಿದ್ದಾರೆ.

ಬಿಜೆಪಿ ಈ ಕ್ಷೇತ್ರದಲ್ಲಿ ಎರಡು ಬಾರಿ ಮಾತ್ರ ಗೆದ್ದಿದೆ 1962ರಿಂದ ಈ ಕ್ಷೇತ್ರದಲ್ಲಿ ಬಿಜೆಪಿ ಎರಡು ಬಾರಿ ಮಾತ್ರ ಗೆಲುವು ಸಾಧಿಸಿದೆ. 20 ವಿಧಾನಸಭಾ ಕ್ಷೇತ್ರಗಳನ್ನು ಒಳಗೊಂಡಿರುವ ದಕ್ಷಿಣ ಗೋವಾ ಕ್ಷೇತ್ರವು ಅಂದಿನಿಂದ ಮಹಾರಾಷ್ಟ್ರವಾದಿ ಗೋಮಾಂತಕ್ ಪಕ್ಷ, ಯುನೈಟೆಡ್ ಗೋವಾನ್ಸ್ ಪಕ್ಷ ಮತ್ತು ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ನಡುವೆ ಸ್ಪರ್ಧೆ ಏರ್ಪಡುತ್ತಿತ್ತು.

ಬಿಜೆಪಿಯು 1999 ಮತ್ತು 2014ರ ಚುನಾವಣೆಯಲ್ಲಿ ಮಾತ್ರ ಈ ಸ್ಥಾನವನ್ನು ಗೆದ್ದಿದೆ, ಆದರೆ ಪಕ್ಷವು ಅದನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಪಲ್ಲವಿ 2012 ರಿಂದ 2016 ರವರೆಗೆ ಗೋವಾ ವಿಶ್ವವಿದ್ಯಾಲಯಕ್ಕೆ ಸಂಯೋಜಿತವಾಗಿರುವ ಅಕಾಡೆಮಿಕ್ ಕೌನ್ಸಿಲ್‌ನ ಸದಸ್ಯರಾಗಿ ಸೇವೆ ಸಲ್ಲಿಸಿದ್ದಾರೆ.

ಲೋಕಸಭಾ ಚುನಾವಣೆ ಘೋಷಣೆಯಾಗಿದೆ. ಏಪ್ರಿಲ್ 19ಕ್ಕೆ ಶುರುವಾಗಲಿರುವ ಚುನಾವಣೆ ಜೂನ್ 1ರವರೆಗೆ ನಡೆಯಲಿದ್ದು, ಜೂನ್ 4ಕ್ಕೆ ಫಲಿತಾಂಶ ಹೊರಬರಲಿದೆ.

## ಕಣಕ್ಕಿಳಿಸಿದ ಬಿಜೆಪಿ

ಲೋಕಸಭೆ ಚುನಾವಣೆ ಪಶ್ಚಿಮ ಬಂಗಾಳದ 42 ಸಂಸದೀಯ ಕ್ಷೇತ್ರಗಳಲ್ಲಿ ಲೋಕಸಭಾ ಚುನಾವಣೆಯು ಏಳು ಹಂತಗಳಲ್ಲಿ ನಡೆಯಲಿದ್ದು, ಇದು ಏಪ್ರಿಲ್ 19 ರಂದು ಪ್ರಾರಂಭವಾಗಿ ಜೂನ್ 1 ರಂದು ಮುಕ್ತಾಯಗೊಳ್ಳಲಿದೆ. ಮತಗಳ ಎಣಿಕೆ ಜೂನ್ 4 ರಂದು ನಡೆಯಲಿದೆ.

**ಹಂತ 1 (ಏಪ್ರಿಲ್ 19):** ಕೂಚ್‌ಬೆಹಾರ್, ಅಲಿಪುರ್‌ದುವಾರ್ ಮತ್ತು ಜಲ್ಪೈಗುರಿ ಹಂತ 2 (ಏಪ್ರಿಲ್ 26): ಡಾರ್ಜಿಲಿಂಗ್, ರಾಯಗಂಜ್ ಮತ್ತು ಬಲೂರ್‌ಘಾಟ್ ಹಂತ 3 (ಮೇ 7): ಮಲ್ದಹಾ ಉತ್ತರ, ಮಲ್ದಹಾ ದಕ್ಷಿಣ, ಜಂಗಿಪುರ ಮತ್ತು ಮುರ್ಷಿದಾಬಾದ್ ಹಂತ 4 (ಮೇ 13): ಬಹರಂಪುರ್, ಕೃಷ್ಣನಗರ, ರಾಣಾಘಾಟ್, ಬರ್ಧಮಾನ್ ಪುರ್ಬಾ, ಬರ್ಧಮಾನ್-ದುರ್ಗಾಪುರ, ಅಸನ್ಸೋಲ್, ಬೋಲ್ಪುರ್ ಮತ್ತು ಬಿರ್ಭೂಮ್ ಹಂತ 5 (ಮೇ 20): ಬಂಗಾವ್, ಬರಾಕ್‌ಪುರ, ಹೌರಾ, ಉಲುಬೇರಿಯಾ, ಶ್ರೀರಾಂಪುರ, ಹೂಗ್ಲಿ ಮತ್ತು ಆರಂಬಾಗ್ ಹಂತ 6 (ಮೇ 25): ತಮ್ಲುಕ್, ಕಂಠಿ, ಘಟಾಲ್, ಜಾರ್ಗ್ರಾಮ್, ಮೇದಿನಿಪುರ್, ಪುರುಲಿಯಾ, ಬಂಕುರಾ ಮತ್ತು ಬಿಷ್ಣುಪುರ್ ಹಂತ 7 (ಜೂನ್ 1): ದಮ್ ದಮ್, ಬರಾಸತ್, ಬಸಿರ್ಹತ್, ಜಯನಗರ, ಮಥುರಾಪುರ, ಡೈಮಂಡ್ ಹಾರ್ಬರ್, ಜಾದವ್‌ಪುರ, ಕೋಲ್ಕತ್ತಾ ದಕ್ಷಿಣ ಮತ್ತು ಕೋಲ್ಕತ್ತಾ ಉತ್ತರ. 2019 ರ ಲೋಕಸಭೆ ಚುನಾವಣೆಯಲ್ಲಿ ಆಡಳಿತಾರೂಢ ತೃಣಮೂಲ ಕಾಂಗ್ರೆಸ್ (ಟಿಎಂಸಿ) 22 ಸ್ಥಾನಗಳನ್ನು ಗಳಿಸಿದರೆ, ಭಾರತೀಯ ಜನತಾ ಪಕ್ಷ (ಬಿಜೆಪಿ) ರಾಜ್ಯದ 42 ಸಂಸದೀಯ ಸ್ಥಾನಗಳಲ್ಲಿ 18 ಸ್ಥಾನಗಳನ್ನು ಗೆದ್ದಿದೆ. ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ (ಐಎನ್‌ಸಿ) ಕೇವಲ ಎರಡು ಸ್ಥಾನಗಳಿಗೆ ಸೀಮಿತವಾಗಿತ್ತು.

## ಹೊಡೆಯಬೇಕು

**ಅಭಿವೃದ್ಧಿ ಕೆಲಸ ಮಾಡದ ಕೇಂದ್ರ ಸರ್ಕಾರ:** ಲೋಕಸಭೆ ಚುನಾವಣೆ ಬಂದಿದೆ. ಮತ್ತೆ ಬಿಜೆಪಿಯವರು ಸುಳ್ಳು ಹೇಳಿಕೊಂಡು ಮತ ಕೇಳಲು ಬರುತ್ತಿದ್ದಾರೆ. ಅವರಿಗೆ ಮತ ಕೇಳಲು ನಾಚಿಕೆ ಆಗಬೇಕು. ನಮ್ಮ ಸರ್ಕಾರ ಮತ್ತೆ ಅಸ್ತಿತ್ವಕ್ಕೆ ಬಂದರೆ ಪ್ರತಿವರ್ಷ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡಿ, ಯುವಕರಿಗೆ ಉದ್ಯೋಗ ನೀಡುವುದಾಗಿ ಮೋದಿ ಹೇಳಿದ್ದರು. ಆದರೆ, ಯುವಕರಿಗೆ ಉದ್ಯೋಗ ನೀಡಿಲ್ಲ ಎಂದು ತಂಗಡಗಿ ಹೇಳಿದ್ದಾರೆ.

**ನುಡಿದಂತೆ ನಡೆದಿದೆ ನಮ್ಮ ಸರ್ಕಾರ:** ಕರ್ನಾಟಕದಲ್ಲಿ ನಮ್ಮ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿದೆ. ನಾವು ಅಧಿಕಾರಕ್ಕೆ ಬಂದರೆ ಐದು ಗ್ಯಾರಂಟಿ ಯೋಜನೆ ಜಾರಿಗೊಳಿಸುತ್ತೇವೆ ಎಂದು ಹೇಳಿದ್ದೆವು. ಅದೇ ರೀತಿ ಐದು ಗ್ಯಾರಂಟಿ ಯೋಜನೆ ಜಾರಿ ಮಾಡಿದ್ದೇವೆ. ಇದು ಕಾಂಗ್ರೆಸ್ ಮತ್ತು ಬಿಜೆಪಿ ಸರ್ಕಾರಕ್ಕೆ ಇರುವ ವ್ಯತ್ಯಾಸ ಎಂದು ತಂಗಡಗಿ ಹೇಳಿದ್ದಾರೆ.

ಲೋಕಸಭೆ ಚುನಾವಣೆ ಸಮೀಪಿಸುತ್ತಿದ್ದಂತೆಯೇ ರಾಜಕೀಯ ನಾಯಕರ ಹೇಳಿಕೆಗಳು, ಆರೋಪ-ಪ್ರತ್ಯಾರೋಪಗಳು ಬಿರುಸಾಗಿವೆ. ಈ ಮಧ್ಯೆ, ಪ್ರಧಾನಿ ಮೋದಿ ಬಗ್ಗೆ ತಂಗಡಗಿ ನೀಡಿರುವ ಹೇಳಿಕೆಗೆ ಬಿಜೆಪಿ ನಾಯಕರಿಂದ ಆಕ್ಷೇಪಗಳು ವ್ಯಕ್ತವಾಗಲು ಆರಂಭವಾಗಿದೆ. ಈ ಹಿಂದೆ ಉತ್ತರ ಕನ್ನಡ ಸಂಸದ ಅನಂತಕುಮಾರ್ ಹೆಗಡೆ ಸಿಎಂ ಸಿದ್ದರಾಮಯ್ಯ ಬಗ್ಗೆ ಏಕವಚನ ಬಳಸಿ ನಿಂದಿಸಿದ್ದು ರಾಜ್ಯದಾದ್ಯಂತ ತೀವ್ರ ಚರ್ಚೆಗೆ ಗ್ರಾಸವಾಗಿತ್ತು. ಇದೀಗ ತಂಗಡಗಿ ಹೇಳಿಕೆ ವಿವಾದ ಸೃಷ್ಟಿಸುವ ಸಾಧ್ಯತೆ ಇದೆ.

## 13 ಮಂದಿಗೆ ಗಾಯ

ಭಸ್ಮ ಆರತಿ ವೇಳೆ ಮಹಾಕಾಲ್‌ಗೆ ಗುಲಾಲ್ ಅರ್ಪಿಸುವ

## ಮೊದಲನೇ ಪುಟದಿಂದ...

ವೇಳೆ ಇದ್ದಕ್ಕಿದ್ದಂತೆ ಬೆಂಕಿ ಹೊತ್ತಿಕೊಂಡಿತು. ಧೂಳೇಂದಿ ಎಂಬ ಕಾರಣಕ್ಕೆ ಗರ್ಭಗುಡಿಯಲ್ಲಿ ಕವರ್ ಹಾಕಲಾಗಿದ್ದು, ಬೆಂಕಿ ತಗುಲಿ ಅರ್ಚಕರು ಮತ್ತು ಭಕ್ತರ ಮೇಲೆ ಬಿದ್ದಿದೆ ಎಂದು ಅರ್ಚಕ ಆಶಿಶ್ ಪೂಜಾರಿ ಹೇಳಿದ್ದಾರೆ. ಎಂದರು.

ಗರ್ಭಗೃಹದಲ್ಲಿ ಭಸ್ಮ ಆರತಿ ವೇಳೆ ಬೆಂಕಿ ಕಾಣಿಸಿಕೊಂಡಿದೆ. ಘಟನೆಯಲ್ಲಿ 13 ಮಂದಿ ಗಾಯಗೊಂಡಿದ್ದಾರೆ, ಅವರ ವೈದ್ಯಕೀಯ ಚಿಕಿತ್ಸೆ ನಡೆಯುತ್ತಿದೆ ಎಂದು ಜಿಲ್ಲಾ ಅಧಿಕಾರಿ ನೀರಜ್ ಕುಮಾರ್ ಸಿಂಗ್ ಹೇಳಿದ್ದಾರೆ. ದೇವಸ್ಥಾನದಲ್ಲಿ ಭಸ್ಮೃತಿಯ ಪ್ರಧಾನ ಅರ್ಚಕ ಸಂಜಯ್ ಗುರು, ವಿಕಾಸ್ ಪೂಜಾರಿ, ಮನೋಜ್ ಪೂಜಾರಿ, ಅಂಶ್ ಪುರೋಹಿತ್, ಸೇವಕ ಮಹೇಶ್ ಶರ್ಮಾ ಮತ್ತು ಚಿಂತಾಮನ್ ಗೆಹ್ಲೋಟ್ ಸೇರಿದಂತೆ ಹಲವರು ಗಾಯಗೊಂಡಿದ್ದಾರೆ.

ಈ ವೇಳೆ ಸಿಎಂ ಮೋಹನ್ ಯಾದವ್ ಅವರ ಪುತ್ರ ಹಾಗೂ ಪುತ್ರಿ ಕೂಡ ದೇವಸ್ಥಾನದಲ್ಲಿ ಹಾಜರಿದ್ದರು. ಇಬ್ಬರೂ ಭಸ್ಮೃತಿಯನ್ನು ನೋಡಲು ಹೋಗಿದ್ದರು. ಇಬ್ಬರೂ ಸುರಕ್ಷಿತವಾಗಿದ್ದಾರೆ. ಘಟನೆಯ ಬಗ್ಗೆ ಮಾಹಿತಿ ಲಭಿಸಿದ ತಕ್ಷಣ ಜಿಲ್ಲಾಧಿಕಾರಿ ನೀರಜ್ ಸಿಂಗ್ ಮತ್ತು ಎಸ್ಪಿ ಪ್ರದೀಪ್ ಶರ್ಮಾ ಆಸ್ಪತ್ರೆಗೆ ಆಗಮಿಸಿದರು. ವಿಶ್ವವಿಖ್ಯಾತ ಜ್ಯೋತಿರ್ಲಿಂಗ ಮಹಾಕಾಳೇಶ್ವರ ದೇವಸ್ಥಾನದಲ್ಲಿ ಅಂದು ಸಾವಿರಾರು ಭಕ್ತರು ಸೇರಿದ್ದರು. ಬೆಂಕಿ ಹೊತ್ತಿಕೊಂಡ ನಂತರ ಕೆಲವರು ಅಗ್ನಿಶಾಮಕ ಯಂತ್ರಗಳ ಮೂಲಕ ಬೆಂಕಿಯನ್ನು ನಿಯಂತ್ರಿಸಿದರು.

## ಸಂಖ್ಯೆಯಲ್ಲಿ ಭಾರೀ ಇಳಿಕೆ!

**ಚಾಮುಂಡಿ ಬೆಟ್ಟಕ್ಕಿಲ್ಲ ಸಮಸ್ಯೆ:** ಪ್ರವಾಸಿಗರ ಸಂಖ್ಯೆಯಲ್ಲಿ ಇಳಿಕೆಯಾದರೂ ಚಾಮುಂಡಿ ಬೆಟ್ಟಕ್ಕೆ ಬರುವವರ ಸಂಖ್ಯೆಯಲ್ಲಿ ಇಳಿಕೆಯಾಗಿಲ್ಲ ಎಂದು ಸ್ಥಳೀಯ ಮಾಧ್ಯಮವೊಂದು ವರದಿ ಮಾಡಿದೆ. ಆದರೆ, ಇತರ ಪ್ರವಾಸಿ ಕೇಂದ್ರಗಳಾದ ಮೃಗಾಲಯ, ಕೃಷ್ಣರಾಜ ಸಾಗರ (ಕೆಆರ್‌ಎಸ್) ಅಣೆಕಟ್ಟು, ಕಾರಂಜಿ ಕೆರೆ, ರಂಗನತಿಟ್ಟು ಪಕ್ಷಿಧಾಮ, ಶ್ರೀರಂಗಪಟ್ಟಣ, ಮೇಲುಕೋಟೆ, ಟಿಪ್ಪು ಅರಮನೆ, ನಿಮಿಷಾಂಬ ಸೇರಿದಂತೆ ಮೈಸೂರಿನ ಎಲ್ಲಾ ಪ್ರವಾಸಿ ತಾಣಗಳ ಪ್ರವಾಸಿಗರ ಸಂಖ್ಯೆಯಲ್ಲಿ ಗಣನೀಯ ಕುಸಿತವಾಗಿದೆ.

ಮೈಸೂರು ಅರಮನೆಗೆ ಸಾಮಾನ್ಯವಾಗಿ ಪ್ರತಿನಿತ್ಯ 5,000 ಪ್ರವಾಸಿಗರು ಭೇಟಿ ನೀಡುತ್ತಾರೆ. ಆದರೆ, ಈ ವಾರಾಂತ್ಯದಲ್ಲಿ ಭೇಟಿ ನೀಡಿದವರ ಸಂಖ್ಯೆ ಕೇವಲ 2,500 ಇತ್ತು. ಈಗ ಕೇವಲ ಶೇ 30 ರಷ್ಟು ಹೋಟೆಲ್ ಕೊಠಡಿಗಳು ಮಾತ್ರ ಬುಕ್ ಆಗಿವೆ. ಶೇ 70 ರಷ್ಟು ಕೊಠಡಿಗಳು ಖಾಲಿ ಇವೆ ಎಂದು ಪ್ರವಾಸೋದ್ಯಮ ಕ್ಷೇತ್ರದ ಮೂಲಗಳನ್ನು ವರದಿ ಉಲ್ಲೇಖಿಸಿದೆ.

## ಹಲವು ಕಾರಣ!

ಮಾಡಲಿಲ್ಲ. ತನಗೂ ವಿಧಾನಸಭಾ ಚುನಾವಣೆಗೂ ಸಂಬಂಧ ಇಲ್ಲ ಎಂಬಂತೆ ಮನೆಯಲ್ಲಿಯೇ ಉಳಿದುಕೊಂಡಿದ್ದರು. ಅಷ್ಟೇ ಅಲ್ಲದೆ ಕಾರವಾರ ಹಾಗೂ ಶಿರಸಿ ಬಿಜೆಪಿ ಅಭ್ಯರ್ಥಿ ಸೋಲಿಸಲು ಅನಂತ ಕುಮಾರ ಹೆಗಡೆ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬೆಂಬಲಿಸಿದರು ಎಂಬ ಆರೋಪ ಜಿಲ್ಲೆಯಲ್ಲಿದೆ.

ವಿಧಾನಸಭಾ ಚುನಾವಣೆ ಪ್ರಚಾರಕ್ಕೆಂದು ಸ್ವತಃ ಪ್ರಧಾನಿ ನರೇಂದ್ರ ಮೋದಿಯವರು ಅಂಕೋಲಾಗೆ ಬಂದರೂ ಸಹಿತ ಪ್ರಧಾನಿ ಸ್ವಾಗತಕ್ಕೆ ಬಾರದೆ ಮನೆಯಲ್ಲಿ ಉಳಿದುಕೊಂಡಿದ್ದರು.

ಉತ್ತರ ಕನ್ನಡ ಜಿಲ್ಲೆಯ ಸಿದ್ದಾಪೂರ ತಾಲೂಕಿನ ಹಲಗೇರಿ ಗ್ರಾಮದಲ್ಲಿ ಕಾರ್ಯಕರ್ತರ ಸಭೆಯನ್ನು ಉದ್ದೇಶಿಸಿ ಮಾತನಾಡುವಾಗ, ಹಿಂದೂತ್ವ ರಾಷ್ಟ್ರೀಯತೆ ಬಗ್ಗೆ ಭಾಷಣ ಮಾಡುವ ಭರದಲ್ಲಿ ಸಂವಿಧಾನ ತಿದ್ದುಪಡಿ ಬಗ್ಗೆ ನೀಡಿರುವ ಹೇಳಿಕೆ ಬಿಜೆಪಿ ಪಕ್ಷಕ್ಕೆ ಭಾರಿ ಮುಜುಗರ ಉಂಟು ಮಾಡಿತ್ತು.

ಹೌದು ಅಬಕಿ ಬಾರ್ ಚಾರಸೊ ಪಾರ ಎಂಬ ಮೋದಿ ಮಾತಿನ ಗುಟ್ಟು ಬಿಚ್ಚಿಟ್ಟಿದ್ದ ಹೆಗಡೆ. ಸಂವಿಧಾನ ತಿದ್ದುಪಡಿ ಮಾಡಲು ನಮಗೆ 400 ಸೀಟಿನ ಅವಶ್ಯಕತೆ ಇದೆ. ಅದಕ್ಕಾಗಿ ಮೋದಿ ಈ ಬಾರಿ 400 ಸೀಟು ಗೆಲ್ಲಿಸುವ ಗುರಿ ಹೊಂದಿದ್ದಾರೆ ಎಂದು ಹೇಳಿದ್ದರು. ಈ ಬಗ್ಗೆ ರಾಹುಲ್ ಗಾಂಧಿ ಕೂಡ ಟ್ವೀಟ್ ಮಾಡಿ ಆಕ್ರೋಶ ವ್ಯಕ್ತಪಡಿಸಿದರು.

ಆರು ಬಾರಿ ಗೆಲುವು ಸಾಧಿಸಿರುವ ಅನಂತ ಕುಮಾರ ಹೆಗಡೆ ಜಿಲ್ಲೆಯಲ್ಲಿ ಒಂದೇ ಒಂದು ಅಭಿವೃದ್ಧಿ ಕಾರ್ಯ ಮಾಡಿಲ್ಲ, ಇನ್ನೂ ಅಭಿವೃದ್ಧಿ ಮಾಡುವುದು ನನ್ನ ಕೆಲಸವೇ ಅಲ್ಲ ನಮ್ಮದೇನಿದ್ದರೂ ಶಾಸನ ರಚನೆ ಮಾಡುವುದಷ್ಟೆ ನಮ್ಮ ಕೆಲಸ ಎನ್ನುತ್ತಿರುವುದು ಮತಯಾಚಣೆ ಮಾಡಲು ಬಿಜೆಪಿ ಕಾರ್ಯರ್ತರಿಗೂ ಭಾರಿ ಮುಜುಗರ ಉಂಟು ಮಾಡಿತ್ತು.

## ಶುಭ ಸುದ್ದಿ

ಮಾರ್ಚ್ 10 ಮತ್ತು 19 ರ ನಡುವೆ ಆನ್‌ಲೈನ್ ಪಾವತಿ ವ್ಯವಸ್ಥೆಯನ್ನು ತಾಂತ್ರಿಕವಾಗಿ ಅಪ್‌ಗ್ರೇಡ್ ಮಾಡಲಾಗಿತ್ತು. ಆ ಸಂದರ್ಭದಲ್ಲಿ ತಾಂತ್ರಿಕ ದೋಷಗಳಿಂದಾಗಿ ಅನೇಕ ಗ್ರಾಹಕರಿಗೆ ಪಾವತಿ ಸಾಧ್ಯವಾಗಿರಲಿಲ್ಲ. ಇದನ್ನು ಪರಿಗಣಿಸಿ ಮಾರ್ಚ್ ತಿಂಗಳ ತಡವಾದ ವಿದ್ಯುತ್ ಬಿಲ್ ಪಾವತಿ ಮೇಲೆ ಯಾವುದೇ ವಿಳಂಬ ಶುಲ್ಕವನ್ನು ವಿಧಿಸಲಾಗುವುದಿಲ್ಲ ಎಂದು ಬೆಸ್ಕಾಂ ಹೇಳಿದೆ.

ಮಾರ್ಚ್ 20 ರಂದು ಆನ್‌ಲೈನ್ ಪಾವತಿ ಸೇವೆಗಳು ಪುನರಾರಂಭಗೊಂಡಿದ್ದರೂ ಸಹ ಎಂಟು ದಿನಗಳ ಅಡಚಣೆಯಿಂದಾಗಿ ಬಿಲ್ ಪಾವತಿಗೆ ಭಾರೀ ರಷ್ ಕಂಡುಬಂದಿದೆ. ಆದ್ದರಿಂದ, ಕೆಲವು ಗ್ರಾಹಕರು ತೊಂದರೆಗಳನ್ನು ಎದುರಿಸಿದ್ದಾರೆ. ಗ್ರಾಹಕರು ತಮ್ಮ ಬಿಲ್‌ಗಳನ್ನು ಮಾರ್ಚ್ 30 ರವರೆಗೆ ಪಾವತಿಸಬಹುದು ಮತ್ತು ಯಾವುದೇ ದಂಡ ಅಥವಾ ತಡವಾದ ಪಾವತಿಗಾಗಿ ಶುಲ್ಕವನ್ನು ವಿಧಿಸಲಾಗುವುದಿಲ್ಲ ಎಂದು ಬೆಸ್ಕಾಂ ಹೇಳಿರುವುದಾಗಿ 'ಟೈಮ್ಸ್ ಆಫ್ ಇಂಡಿಯಾ' ವರದಿ ಮಾಡಿದೆ. ಬೆಸ್ಕಾಂ ಅಡಿಯಲ್ಲಿ ಬರುವ ರಾಮನಗರ, ಚಿತ್ರದುರ್ಗ, ದಾವಣಗೆರೆ, ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ ಮತ್ತು ಬೆಂಗಳೂರು ನಗರ ಜಿಲ್ಲೆಗಳ ಗ್ರಾಹಕರು ವಿದ್ಯುತ್ ಬಿಲ್ ಪಾವತಿ ವಿಳಂಬವಾದರೆ ವಿಳಂಬ ಪಾವತಿ ಶುಲ್ಕ ಪಾವತಿಸಬೇಕಾಗಿಲ್ಲ.

## ಸಂಸದ

ಹದಗೆಟ್ಟಿತ್ತು, ಬಳಿಕ ಆಸ್ಪತ್ರೆಗೆ ದಾಖಲಿಸಿದಾಗ ಅವರು ಕೀಟನಾಶಕ ಸೇವಿಸಿದ್ದು ತಿಳಿದುಬಂದಿದೆ. ತಪಾಸಣೆಯ ನಂತರ ಅವರನ್ನು ಐಸಿಯುಗೆ ದಾಖಲಿಸಲಾಗಿದ್ದು, ವೆಂಟಿಲೇಟರ್‌ನಲ್ಲಿ ಇರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ನಂತರ ಅವರನ್ನು ಆಂಬ್ಯುಲೆನ್ಸ್‌ನಲ್ಲಿ ಇಬ್ಬರು ವೈದ್ಯರು ಮತ್ತು ಅವರ ಕುಟುಂಬ ಸದಸ್ಯರೊಂದಿಗೆ ಮಧ್ಯಾಹ್ನ 2.30 ರ ಸುಮಾರಿಗೆ ಕೊಯಮತ್ತೂರಿನ ಖಾಸಗಿ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಡಿಎಂಕೆ ನಾಯಕ ದುರೈ ವೈಕೋ ಆಸ್ಪತ್ರೆಗೆ ಭೇಟಿ ನೀಡಿದ್ದು, ಗಣೇಶಮೂರ್ತಿ ಅವರ ಸ್ಥಿತಿ ಚಿಂತಾಜನಕವಾಗಿದ್ದು, ಇಸಿಎಂಒ ಚಿಕಿತ್ಸೆಯಲ್ಲಿದೆ ಎಂದು ಹೇಳಿದ್ದಾರೆ.

ಸಚಿವ ಎಸ್.ಮುತ್ತುಸಾಮಿ, ಮೊಡಕುರಿಚಿಯ ಬಿಜೆಪಿ ಶಾಸಕ ಡಾ.ಸಿ.ಸರಸ್ವತಿ, ಎಐಎಡಿಎಂಕೆಯ ಕೆ.ವಿ.ರಾಮಲಿಂಗಂ ಮುಂತಾದ ರಾಜಕೀಯ ಮುಖಂಡರು ಆಸ್ಪತ್ರೆಗೆ ಧಾವಿಸಿ ಗಣೇಶಮೂರ್ತಿ ಅವರ ಆರೋಗ್ಯ ವಿಚಾರಿಸಿದರು. ಅವರ ಈ ನಿರ್ಧಾರಕ್ಕೆ ಕಾರಣವೇನೆಂಬುದು ತಿಳಿದುಬಂದಿಲ್ಲ.

ಲೋಕಸಭಾ ಚುನಾವಣೆ ಘೋಷಣೆಯಾಗಿದ್ದು, ಏಪ್ರಿಲ್ 19ರಿಂದ ಆರಂಭವಾಗಿ ಜೂನ್ 1ರವರೆಗೆ ಒಟ್ಟು 7 ಹಂತಗಳಲ್ಲಿ ಚುನಾವಣೆ ನಡೆಯಲಿದೆ, ಜೂನ್ 4ರಂದು ಫಲಿತಾಂಶ ಹೊರಬರಲಿದೆ.

## ಸಂಭ್ರಮ

ಹೋಳಿ ಕೇವಲ ಹಬ್ಬ ಮಾತ್ರವಲ್ಲದೇ ವಸಂತ ಮಾಸದ ಆಗಮನವನ್ನೂ ಸೂಚಿಸುತ್ತದೆ.

ಪುರಾಣದ ಕಥೆ ಏನು?

ದಕ್ಷಿಣ ಭಾರತದಲ್ಲಿ ವಿಭಿನ್ನ ಆಚರಣೆಯ ಮೂಲಕ ಹೋಳಿ ಹಬ್ಬವನ್ನು ಆಚರಿಸಲಾಗುತ್ತದೆ. ಅದಕ್ಕೆ ಸಂಬಂಧಿಸಿದಂತೆ ಕಾಮದೇವನ ಕಥೆಯು ಬೆಸೆದುಕೊಂಡಿದೆ. ಶಿವನ ಮೂರನೇ ಕಣ್ಣಿನಿಂದ ಬಂದ ಬೆಂಕಿಯಿಂದ ಕಾಮದೇವ ಆಹುತಿಯಾದನು. ಜಗತ್ತನ್ನು ಉಳಿಸಲು ಶಿವನ ಕಣ್ಣಿನ ಬೆಂಕಿಗೆ ತಾನೇ ಆಹುತಿಯಾಗುವುದರ ಮೂಲಕ ಕಾಮದೇವ ತ್ಯಾಗ ಮಾಡಿದ ಎಂದು ಹೇಳಲಾಗುತ್ತದೆ. ಈ ಸನ್ನಿವೇಶದ ಹಿನ್ನೆಲೆ ಹೋಳಿ ಹಬ್ಬವನ್ನು ಆಚರಿಸುತ್ತಾರೆ. ದಕ್ಷಿಣ ಭಾರತದಲ್ಲಿ ಕಾಮ ದೇವನ ಪ್ರತಿರೂಪವನ್ನು ಸುಡುವ ಆಚರಣೆಯ ಮೂಲಕ ಹೋಳಿ ಆಚರಣೆ ಮಾಡುತ್ತಾರೆ.

ಹೋಳಿ ಹಬ್ಬದ ಹಿಂದೆ ಅನೇಕ ಕಥೆ ಹಾಗೂ ಉಪಕಥೆಗಳು ಬೆಸೆದುಕೊಂಡಿವೆ. ಅದರಲ್ಲಿ ಪ್ರಹ್ಲಾದನ ಕಥೆಯೂ ಸೇರಿಕೊಂಡಿದೆ. ಪ್ರಹ್ಲಾದ ಹುಟ್ಟಿನಿಂದಲೇ ಮಹಾನ್ ವಿಷ್ಣುವಿನ ಭಕ್ತನಾಗಿದ್ದ. ನಿತ್ಯವೂ ವಿಷ್ಣು ದೇವರ ಆರಾಧನೆ ಹಾಗೂ ಪೂಜೆ ಮಾಡುವುದರ ಮೂಲಕವೇ ಜ್ಞಾನವನ್ನು ಪಡೆದುಕೊಳ್ಳುತ್ತಿದ್ದ. ಆದರೆ ಅವನ ತಂದೆ ಹಿರಣ್ಯ ಕಶಿಪು ಬಹಳ ಅಹಂಕಾರಿ ಮತ್ತು ಕ್ರೂರ ರಾಜನಾಗಿದ್ದ. ಅವನು ತಾನೇ ದೈವಶಕ್ತಿಗಿಂತ ಶ್ರೇಷ್ಠ, ತನ್ನನ್ನೇ ಎಲ್ಲರೂ ಆರಾಧಿಸಬೇಕು ಎಂದು ತನ್ನ ಪ್ರಜೆಗೆ ಆದೇಶ ಹೊರಡಿಸಿದ್ದ. ಆದರೆ ಅವನ ಮಗ ಪ್ರಹ್ಲಾದ ಮಾತ್ರ ತಂದೆಯನ್ನು ಆರಾಧಿಸದೆ ವಿಷ್ಣು ದೇವರ ಆರಾಧನೆಯನ್ನು ಮಾಡುತ್ತಿದ್ದ. ಅದನ್ನು ಸಹಿಸದ ಹಿರಣ್ಯ ಕಶಿಪು ಮಗನಿಗೆ ಸರಿಯಾಗಿ ಪಾಠ ಕಲಿಸಬೇಕು, ಅವನ ಚಿಂತನೆಗಳನ್ನು ಬದಲಿಸಬೇಕು ಎಂದು ಬಯಸಿದ. ಅದರಂತೆಯೇ ಸಾಕಷ್ಟು ಕ್ರಮದಲ್ಲಿ ಅವನಿಗೆ ವಿಷ್ಣು ಆರಾಧನೆ ಮಾಡದಂತೆ ಹೇಳಿದನು. ಆದರೆ ವಿಷ್ಣುವಿನ ಪರಮ ಭಕ್ತನಾದ ಪ್ರಹ್ಲಾದ ವಿಷ್ಣುವಿನ ಆರಾಧನೆಯನ್ನು ಬಿಟ್ಟರೆ ಬೇರಾವ ವ್ಯಕ್ತಿಯ ಆರಾಧನೆಯನ್ನು ಮಾಡೆನು ಎಂದು ಹೇಳಿದನು.

ಪುಟ್ಟ ಹುಡುಗನಾದ ಈ ಪ್ರಹ್ಲಾದನಿಗೆ ಇನ್ಯಾವ ಬಗೆಯಲ್ಲೂ ಬುದ್ಧಿ ಹೇಳಲು ಸಾಧ್ಯವಿಲ್ಲ. ಏನಿದ್ದರೂ ಅವನನ್ನು ಸಾಯಿಸುವುದೊಂದೇ ಮಾರ್ಗ ಎಂದುಕೊಂಡ. ಅಂತೆಯೇ ಪ್ರಹ್ಲಾದನನ್ನು ಸಾಯಿಸಲು ಹಿರಣ್ಯ ಕಶಿಪು ಸಾಕಷ್ಟು ವಿಧಾನವನ್ನು ಅನುಸರಿಸಿದ. ಆದರೆ ಯಾವುದೂ ಫಲಕಾರಿಯಾಗಲಿಲ್ಲ. ಅವುಗಳನ್ನು ಕಂಡ ಹಿರಣ್ಯ ಕಶಿಪು ಅತ್ಯಂತ ಕೋಪಗೊಂಡ. ನಂತರ ತನ್ನ ತಂಗಿಯಾದ ಹೋಲಿಕಾಳನ್ನು ಕರೆಸಿದ. ಹೋಲಿಕಾ ತನ್ನ ತೊಡೆಯ ಮೇಲೆ ಯಾರು ಕುಳಿತುಕೊಳ್ಳುತ್ತಾರೋ ಅವರು ಸುಟ್ಟು ಹೋಗಬೇಕು ಎನ್ನುವ ವರವನ್ನು ಪಡೆದುಕೊಂಡಿದ್ದಳು. ಹಾಗಾಗಿ ಪ್ರಹ್ಲಾದನನ್ನು ಅವಳ ತೊಡೆಯ ಮೇಲೆ ಕುಳ್ಳಿರಿಸಿಕೊಳ್ಳಲು ಹಿರಣ್ಯ ಕಶಿಪು ಹೇಳಿದನು. ಅಣ್ಣನ ಮಾತಿನಂತೆ ಹೋಲಿಕಾ ಪ್ರಹ್ಲಾದನನ್ನು ತನ್ನ ತೊಡೆಯ ಮೇಲೆ ಕೂರಿಸಿಕೊಂಡಳು. ಆ ಸಮಯದಲ್ಲಿ ಪ್ರಹ್ಲಾದನು ಹರಿಯನ್ನು ಧ್ಯಾನಿಸುತ್ತಲೇ ಕುಳಿತನು. ಆ ಸಮಯದಲ್ಲಿ ಹೋಲಿಕಾ ಬೆಂಕಿಯಲ್ಲಿ ಸುಟ್ಟು ಹೋದಳು. ಪ್ರಹ್ಲಾದನು ಬೆಂಕಿಯಿಂದ ಹೊರ ಬಂದನು. ಈ ಹಿನ್ನೆಲೆಯಲ್ಲಿಯೇ ಹೋಳಿಯ ಹಬ್ಬವನ್ನು ಆಚರಿಸಲಾಯಿತು ಎಂದು ಹೇಳಲಾಗುವುದು.

ಹೀಗೆ ದೇಶದ ವಿವಿಧೆಡೆ ಹೋಳಿ ಹಬ್ಬಕ್ಕೆ ಸಂಬಂಧಿಸಿದ ಅನೇಕ ಕಥೆಗಳಿವೆ. ಒಂದೊಂದು ರಾಜ್ಯದಲ್ಲಿ ಒಂದೊಂದು ಹೆಸರಿನಲ್ಲಿ ಹೋಳಿ ಹಬ್ಬವನ್ನು ಆಚರಿಸುತ್ತಾರೆ.

# ನಿಖಿಲ್ ಅಥವಾ ಹೆಚ್‌ಡಿಕೆ ಇಬ್ಬರಲ್ಲಿ ಒಬ್ಬರ ಸ್ಪರ್ಧೆ ಫಿಕ್ಸ್!

**ಮಂಡ್ಯ:** ಸಕ್ಕರೆ ನಾಡು ಮಂಡ್ಯ ಲೋಕಸಭಾ ಕ್ಷೇತ್ರವನ್ನು ಬಿಜೆಪಿ ಅಧಿಕೃತವಾಗಿ ಜೆಡಿಎಸ್‌ಗೆ ಬಿಟ್ಟು ಕೊಟ್ಟಿದೆ. ಇದೀಗ ಜೆಡಿಎಸ್ ನಿಂದ ಮೈತ್ರಿ ಅಭ್ಯರ್ಥಿಯಾಗಿ ಹೆಚ್.ಡಿ ಕುಮಾರಸ್ವಾಮಿ ಅಥವಾ ನಿಖಿಲ್ ಕುಮಾರಸ್ವಾಮಿ ಇಬ್ಬರಲ್ಲಿ ಯಾರು ಸ್ಪರ್ಧೆ ಮಾಡ್ತಾರೆ ಅನ್ನೋ ಕುತೂಹಲಕ್ಕೆ ಇಂದೇ ತೆರೆ ಬೀಳುವ ಸಾಧ್ಯತೆ ಇದೆ.

ಇಷ್ಟು ದಿನಗಳ ಕಾಲ ಜೆಡಿಎಸ್ ನಾಯಕರು ಮಂಡ್ಯ ಲೋಕಸಭಾ ಕ್ಷೇತ್ರದ ಬಿಜೆಪಿ-ಜೆಡಿಎಸ್ ಮೈತ್ರಿ ಟಿಕೆಟ್ ನಮಗೆ ಬೇಕು ಎಂದು ಒತ್ತಾಯಿಸುತ್ತಿದ್ದರು. ಮತ್ತೊಂದು ಕಡೆ ಹಾಲಿ ಸಂಸದೆ ಸುಮಲತಾ ಅಂಬರೀಶ್ ನನಗೆ ಸಿಗುತ್ತೆ ಎಂಬ ವಿಶ್ವಾಸದಲ್ಲಿದ್ದರು. ಇದೀಗ ಅಂತಿಮವಾಗಿ ಬಿಜೆಪಿ ಜೆಡಿಎಸ್‌ಗೆ ಮಂಡ್ಯವನ್ನು ಬಿಟ್ಟು ಕೊಟ್ಟಿರೋದಾಗಿ ಅಧಿಕೃತ ಆದೇಶ ಮಾಡಿದೆ. ಇದೀಗ ಜೆಡಿಎಸ್‌ನಿಂದ ಮೈತ್ರಿ ಅಭ್ಯರ್ಥಿ ಯಾರು ಎಂಬ ಪ್ರಶ್ನೆಗಳು ಎದ್ದಿವೆ.

ಮಂಡ್ಯ ಜಿಲ್ಲೆಯ ಎಲ್ಲಾ ಜೆಡಿಎಸ್ ನಾಯಕರು ಹಾಗೂ ಕಾರ್ಯಕರ್ತರು ಕುಮಾರಸ್ವಾಮಿ ಅಥವಾ ನಿಖಿಲ್ ಇಬ್ಬರಲ್ಲಿ ಒಬ್ಬರು ಅಭ್ಯರ್ಥಿಯಾಗಿ ಕಣಕ್ಕಿಳಿಯಬೇಕು ಅಂತ ಒತ್ತಾಯಿಸುತ್ತಿದ್ದರು. ಇದಕ್ಕೆ ಕುಮಾರಸ್ವಾಮಿ ಅವರೂ ಮಾರ್ಚ್ 25ಕ್ಕೆ ಘೋಷಣೆ ಮಾಡುವುದಾಗಿ ತಿಳಿಸಿದ್ದರು. ಮಂಡ್ಯ ಜಿಲ್ಲೆಯ ನಾಯಕರ ಹಾಗೂ ಕಾರ್ಯಕರ್ತರ ಆಗ್ರಹಕ್ಕೆ ಮಣಿದು ಕುಮಾರಸ್ವಾಮಿ ಅವರು ಮಂಡ್ಯದಿಂದ ಸ್ಪರ್ಧೆಗೆ ಒಪ್ಪಿದ್ರು. ಆದ್ರೆ, ಇದೀಗ ಚನ್ನಪಟ್ಟಣದ ಜೆಡಿಎಸ್ ಕಾರ್ಯಕರ್ತರು ಕುಮಾರಸ್ವಾಮಿ ಅವರು ರಾಮನಗರ ಬಿಟ್ಟು ಹೋಗಬಾರದು. ನಿಖಿಲ್ ಅವರು ಮಂಡ್ಯದಿಂದ ಸ್ಪರ್ಧೆ ಮಾಡಲಿ ಎಂದು ಒತ್ತಾಯ ಮಾಡಿದ್ದಾರೆ. ಹೀಗಾಗಿ ಕುಮಾರಸ್ವಾಮಿ ಹಾಗೂ ನಿಖಿಲ್ ಇಬ್ಬರಲ್ಲಿ ಯಾರು ಅಭ್ಯರ್ಥಿ ಆಗುತ್ತಾರೆ ಎಂಬ ಗೊಂದಲ ಉಂಟಾಗಿದ್ದು, ಇಂದೇ ತೆರೆ ಬೀಳುವ ಸಾಧ್ಯತೆಗಳಿವೆ.

# ಮಹಿಳೆಯರಿಗೆ ಕಾಯಕ ಯೋಗಿ ಪ್ರಶಸ್ತಿ ಪ್ರದಾನ

**ಮೈಸೂರು:** ಕಾಯಕ ಫೌಂಡೇಷನ್ ವತಿಯಿಂದ ದಿ ಇನ್ ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಸಭಾಂಗಣದಲ್ಲಿ ವಿಶ್ವ ಮಹಿಳಾ ದಿನಾಚರಣೆ ಅಂಗವಾಗಿ ಮೂವರು ಮಹಿಳಾ ಸಾಧಕರಿಗೆ ಕಾಯಕ ಯೋಗಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಸಾಲಿಗ್ರಾಮದ ಪ್ರಾಥಮಿಕ ಆರೋಗ್ಯದ ಅರವಳಿಕೆ ತಜ್ಞೆ ಡಾ.ದೇವಿಕಾ, ಚಿಗುರು ಆಶ್ರಮದ ಎಂ.ಎಸ್. ಸುಷಾ, ಸರಸ್ವತಿ ಚಾರಿಟಬಲ್ ಟ್ರಸ್ಟ್ ನಿರ್ದೇಶಕಿ ಸರಸ್ವತಿ, ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ನೇತ್ರಾವತಿ ಅವರಿಗೆ ಕಾಯಕಯೋಗಿ ಪ್ರಶಸ್ತಿಯನ್ನು ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷೆ ಡಾ.ಪುಷ್ಪಾ ಅಮರನಾಥ್ ಪ್ರದಾನ ಮಾಡಲಾಯಿತು. ಬಳಿಕ ಮಾತನಾಡಿದ ಅವರು, ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷೆಯ ಪಂಚ ಗ್ಯಾರಂಟಿಗಳು ಹೆಣ್ಣು ಮಕ್ಕಳ ಕೇಂದ್ರಿತವಾಗಿವೆ. ಹೆಣ್ಣು ಮಕ್ಕಳಿಗೆ ಆರ್ಥಿಕವಾಗಿ ಶಕ್ತಿ ತುಂಬುವ ಯೋಜನೆಗಳನ್ನು ಸಮಾಜದಲ್ಲಿ ವಿರೋಧ ವ್ಯಕ್ತವಾಗುತ್ತಿರುವುದು ವಿಷಾದನೀಯ. ಮಹಿಳೆಯರು ಹಕ್ಕಿಯಂತೆ ಹಾರಾಡುವುದನ್ನು ಪುರುಷ ಪ್ರಧಾನ ವ್ಯವಸ್ಥೆ ಸಹಿಸುತ್ತಿಲ್ಲ ಎಂದರು.

ತಮ ಮನೆಯ ಹೆಣ್ಣು ಮಕ್ಕಳಿಗೆ ಸರ್ಕಾರದ ಸವಲತ್ತು ದೊರೆಯುತ್ತಿದ್ದರೂ ಗಂಡಸ್ಸರು ವಿರೋಧಿಸುತ್ತಾರೆ. ಮನೆಯ ಯಾಜಮಾನನಿಗೆ ಮಾಸಿಕ 2 ಸಾವಿರ ರೂ. ಕೊಟ್ಟಿದ್ದರೆ ಬಹುಶಃ ಆ ಹಣ ಲಿಕ್ಕರ್ ಶಾಪ್‌ನಲ್ಲಿ ಖರ್ಚು ಮಾಡುತ್ತಿದ್ದರು ಎಂದು ತಿಳಿಸಿದರು.



ಯಾವತ್ತೂ ಹೆಣ್ಣು ಮಗಳೊಬ್ಬಳು ಒಬ್ಬಂಟಿಯಾಗಿ ಮಧ್ಯರಾತ್ರಿ ನಿರ್ಭಯವಾಗಿ ನಡೆದುಕೊಂಡು ಹೋದ ದಿನ ಮಹಿಳಾ ದಿನ ಆಚರಣೆಗೆ ಒಂದು ಅರ್ಥ ಬರುತ್ತದೆ. ಕಟ್ಟುಪಾಡುಗಳಿಂದ ಅವಳನ್ನು ಕಟ್ಟಿ ಹಾಕಿದರೆ ಆಚರಣೆಗಳಿಗೆ ಅರ್ಥವಿಲ್ಲ ಎಂದು ಹೇಳಿದರು.

ಹೆಣ್ಣು ಮಕ್ಕಳು ಯಾವುದೇ ಸಂದರ್ಭದಲ್ಲೂ ಕುಗ್ಗಬಾರದು. ಜೀವನದಲ್ಲಿ ಸೋತಾಗಲೂ ಧೈರ್ಯದಿಂದ ಮುನ್ನಡೆಯಬೇಕು. ಅವಕಾಶಗಳನ್ನು ಯಾರೂ ಸೃಷ್ಟಿಸಿ ಕೊಡುವುದಿಲ್ಲ. ಯಾವುದೇ ಕ್ಷೇತ್ರದಲ್ಲಿ ಸಾಧಿಸಲು ತಾವೇ ಸ್ವಯಂ ಪ್ರಯತ್ನ ಮಾಡಬೇಕು. ಯಾರ ಮೇಲೂ ಅವಲಂಬಿತರಾಗದೇ ಮುನ್ನಗ್ಗಬೇಕು ಎಂದು ನುಡಿದರು.

ಮನೆಯಿಂದಲೇ ಹೆಣ್ಣು-ಗಂಡು ತಾರತಮ್ಯ ನಿವಾರಣೆಯಾಗಬೇಕು. ಪೋಷಕರು ಗಂಡು ಮಕ್ಕಳಿಗೆ ಒಂದು ಹೆಣ್ಣು ಮಕ್ಕಳಿಗೆ ಮತ್ತೊಂದು ವಾತವರಣ ನಿರ್ಮಿಸಬಾರದು. 6 ಗಂಟೆಯ ನಂತರ ಹೆಣ್ಣು ಮಕ್ಕಳು ಯಾಕೇ ಮನೆಯಿಂದ ಹೊರಗೆ ಹೋಗುವಂತಿಲ್ಲ? ಪ್ರತಿ ಹೆಣ್ಣು ಮಗುವಿಗೂ ಸಮಾನ ಅವಕಾಶ ದೊರೆಯಬೇಕು ಎಂದು ಹೇಳಿದರು.

ಮಹಿಳೆಯರು ಯಾವುದೇ ಕ್ಷೇತ್ರದಲ್ಲೂ ಪುರುಷರ ನಡುವೆ ಹೋರಾಟ ಮಾಡುತ್ತಿದ್ದಾರೆ. ಇವತ್ತು ಮಹಿಳೆಯರು ಎಲ್ಲ ರಂಗದಲ್ಲೂ ಸಾಧನೆ ಮಾಡುತ್ತಿದ್ದಾರೆ. ಪುರುಷರಿಗಿಂತ ಕಡಿಮೆ ಇಲ್ಲದಂತೆ ಸಾಧಿಸಿದ್ದಾರೆ. ಕಾಯಕಯೋಗಿ ಪ್ರಾದೇಶಿಕ ದಿನಪತ್ರಿಕೆಯ ಸಂಪಾದಕಿ ಬಿ.ಕೆ. ಅರುಣಜ್ಯೋತಿ ಅವರ ಕಾರ್ಯ ಪ್ರಶಂಸನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾಯಕ ಪತ್ರಿಕೆ ಸಂಪಾದಕಿ ಬಿ.ಕೆ. ಅರುಣಜ್ಯೋತಿ ಅಧ್ಯಕ್ಷತೆ ವಹಿಸಿದ್ದರು. ವಿಜಯಲಕ್ಷ್ಮೀ ನಾಯಕ್ ಮಹಿಳಾ ಸಬಲೀಕರಣ ವಿಷಯ ಕುರಿತು ಉಪನ್ಯಾಸ ನೀಡಿದರು. ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆಯ ಜಿಲ್ಲಾಧ್ಯಕ್ಷ ಅಬ್ದುಲ್ ಮಲ್ಲಿಕ್, ಹುಣಸೂರು ತಾಲೂಕು ಅಧ್ಯಕ್ಷ ಜಯರಾಮೇಗೌಡ, ಉಪ ಪ್ರಾಂಶುಪಾಲ ಮೋಕ್ಷಾಮಾಲಾ, ಕಾಯಕಯೋಗಿ ದಿನ ಪತ್ರಿಕೆ ಜಿಲ್ಲಾವರದಿಗಾರ ಅನಂತ್ ಕುಮಾರ್ ಮುಂತಾದವರಿದ್ದರು.

## ಎಸ್‌ಎಸ್‌ಎಲ್‌ಸಿ ಟ್ಯೂಷನ್ ಕ್ಲಾಸ್ ಸಮಾರೋಪ

**ಹುಳಿಯಾರು:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮಹಿಳಾ ಜ್ಞಾನ ವಿಕಾಸ ಕಾರ್ಯಕ್ರಮದ ಅಡಿಯಲ್ಲಿ ಹುಳಿಯಾರಿನ ಕನಕದಾಸ ವಿದ್ಯಾಸಂಸ್ಥೆಯಲ್ಲಿ ಜನವರಿ ಮಾಹೆಯಿಂದ ಆಯೋಜಿಸಿದ್ದ 10 ನೇ ತರಗತಿಯ ವಿದ್ಯಾರ್ಥಿಗಳಿಗೆ ಟ್ಯೂಷನ್ ಕ್ಲಾಸ್ ಸಮಾರೋಪ ಕಾರ್ಯಕ್ರಮವು ಶನಿವಾರ ಜರುಗಿತು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪರೀಕ್ಷೆಯನ್ನು ನಿರ್ಭಯವಾಗಿ ಬರೆಯುವಂತೆಯೂ ಮುಖ್ಯವಾಗಿ ಗಮನಿಸಬೇಕಾದ ಅಂಶದ ಬಗ್ಗೆ ಮಾಹಿತಿ ನೀಡಲಾಯಿತು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಚಂದ್ರಶೇಖರ್, ವಲಯದ ಮೇಲ್ವಿಚಾರಕಿ ಚೈತ್ರ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಸುನಿತಾ, ಶಿಕ್ಷಕರಾದ ಪ್ರಕಾಶ್, ಉಮೇಶ್, ಭಾಗ್ಯ, ಆಶಾರಾಣಿ, ಸೇವಾಪ್ರತಿನಿಧಿ ಯಶೋಧಮ್ಮ ಹಾಜರಿದ್ದರು.



ಹುಳಿಯಾರಿನ ಕನಕದಾಸ ಪ್ರೌಢಶಾಲೆಯಲ್ಲಿ ಧರ್ಮಸ್ಥಳ ಯೋಜನೆಯಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಟ್ಯೂಷನ್ ಕ್ಲಾಸ್ ಸಮಾರೋಪದಲ್ಲಿ ಮುಖ್ಯ ಶಿಕ್ಷಕ ಚಂದ್ರಶೇಖರ್ ಮಾತನಾಡಿದರು.

## ಚುಂಚಶ್ರೀಗಳ ಆಶೀರ್ವಾದ ಪಡೆದ ಮನ್ಸೂರ್ ಅಲಿಖಾನ್

**ಮಂಡ್ಯ:** ಕೆ.ಆರ್.ಪೇಟೆಯ ಸುಪುತ್ರ ರಾಜ್ಯ ಸಭೆಯ ಮಾಜಿ ಉಪ ಸಭಾಪತಿಗಳು ಹಾಗೂ ಕೇಂದ್ರದ ಮಾಜಿ ಸಚಿವ ಕೆ. ರೆಹಮಾನ್ ಖಾನ್ ಅವರ ಸುಪುತ್ರ ಕೃಷ್ಣರಾಜಪೇಟೆಯ ಮೊಮ್ಮಗ ಯುವನಾಯಕ, ಸಂಘಟನಾಚತುರ ಕೆ.ಮನ್ಸೂರ್ ಅಲಿಖಾನ್ ಅವರನ್ನು ಕಾಂಗ್ರೆಸ್ ಪಕ್ಷದ ಹೈಕಮಾಂಡ್ ಮುಂಬರುವ ಲೋಕಸಭಾ ಚುನಾವಣೆಗೆ ಬೆಂಗಳೂರು ಸೆಂಟ್ರಲ್ ಕ್ಷೇತ್ರದ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಲು ಕಾಂಗ್ರೆಸ್ ಹೈ ಕಮಾಂಡ್ ಘೋಷಣೆ ಮಾಡಿರುವ ಹಿನ್ನೆಲೆಯಲ್ಲಿ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠಕ್ಕೆ ಭೇಟಿ ನೀಡಿ ಶ್ರೀ ನಿರ್ಮಲಾನಂದನಾಥ ಶ್ರೀಗಳ ಆಶೀರ್ವಾದ ಪಡೆದರು. ಮಾಜಿ ಶಾಸಕರಾದ ಕೆ.ಬಿ.ಚಂದ್ರಶೇಖರ್, ಬಿ.ಪ್ರಕಾಶ್,ಕಾಂಗ್ರೆಸ್ ನಾಯಕರಾದ ವಿಜಯ್ ರಾಮೇಗೌಡ, ಬಿ. ಎಲ್.ದೇವರಾಜು, ಕಿಕ್ಕೇರಿ ಸುರೇಶ್, ಬಿ. ನಾಗೇಂದ್ರ ಕುಮಾರ್, ಹರಳಹಳ್ಳಿ ವಿಶ್ವನಾಥ್, ಸಿ.ಡಿ.ಗಂಗಾಧರ್, ಕೊಡಿಮಾರನಹಳ್ಳಿ ದೇವರಾಜು, ಚೇತನಾ ಮಹೇಶ್, ಡಿ. ಪ್ರೇಮಕುಮಾರ್, ಕೆ.ಸಿ. ಮಂಜುನಾಥ್, ಹೆಚ್. ಎನ್. ಪ್ರವೀಣ್, ಪುರಸಭೆ ಮಾಜಿ ಅಧ್ಯಕ್ಷ ಕೆ. ಗೌಸ್ ಖಾನ್ ಮತ್ತಿತರರು ಉಪಸ್ಥಿತರಿದ್ದರು.



## ಹುಳಿಯಾರಿನಲ್ಲಿ ಶಾಂತಿ ಸುವ್ಯವಸ್ಥೆ ಜಾಗೃತಿಗಾಗಿ ಪಥಸಂಚಲನ

ಹುಳಿಯಾರು: ಲೋಕಸಭಾ ಚುನಾವಣೆ ಬಗ್ಗೆ ಮತದಾರರಲ್ಲಿ ಜಾಗೃತಿ ಮೂಡಿಸಲು ಸಿಆರ್‌ಪಿಎಫ್ ತುಕಡಿ ಶನಿವಾರ ಹುಳಿಯಾರು ಪಟ್ಟಣಕ್ಕೆ ಆಗಮಿಸಿತ್ತು. ಹುಳಿಯಾರು ಪೊಲೀಸ್ ಠಾಣೆ ಸರ್ಕಲ್‌ನಿಂದ ಹುಳಿಯಾರಿನ ಪ್ರಮುಖ ಬೀದಿಗಳಲ್ಲಿ ಪಥಸಂಚಲನ ಆರಂಭಿಸಿತು. ಕಡ್ಡಾಯವಾಗಿ ಮತದಾನ ಮಾಡುವಂತೆ ಅರಿವು ಮೂಡಿಸಲಾಯಿತು. ಪಥಸಂಚಲನಕ್ಕೆ ಚಾಲನೆ ನೀಡಿ ಚಿಕ್ಕನಾಯಕನಹಳ್ಳಿ ಸಿಪಿಐ ಮುನಿಕೃಷ್ಣ ಮಾತನಾಡಿ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಸಾರ್ವಜನಿಕರ ಆತಂಕ ದೂರು ಮಾಡುವ ಉದ್ದೇಶದಿಂದ ಶಾಂತಿ ಸುವ್ಯವಸ್ಥೆಗೆ ರಕ್ಷಣಾ ಪಡೆ ಸನ್ನದ್ಧವಾಗಿದೆ ಎಂದು ತೋರ್ಪಡಿಸುವ ಉದ್ದೇಶದಿಂದ ಪಥ ಸಂಚಲನ ಆಯೋಜಿಸಲಾಗಿದೆ ಎಂದು ಹೇಳಿದರು. ಚುನಾವಣೆ ನಡೆಯಲಿರುವ ಪ್ರದೇಶದಲ್ಲಿ ಅಚ್ಚುಕಟ್ಟಾಗಿ ನಡೆಸುವ ಉದ್ದೇಶವಿದೆ. ಅಶಾಂತಿ, ಅಹಿತಕರ ಘಟನೆ ಹಾಗೂ ಇನ್ನಿತರ ಗಲಾಟೆಗಳಿಗೆ ಆಸ್ಪದಗಳಿಲ್ಲದಂತೆ ನೋಡಿಕೊಳ್ಳಬೇಕಾಗುತ್ತದೆ. ಹೀಗಾಗಿ ವಿವಿಧೆಡೆ ನಿಯೋಜನೆಗೊಂಡ ರಕ್ಷಣಾ ತಂಡಗಳ ಉಪಸ್ಥಿತಿ ಬಗ್ಗೆ ಸಾರ್ವಜನಿಕರಿಗೆ ತಿಳಿಯ ಪಡಿಸುವುದಕ್ಕಾಗಿ ಪಥಸಂಚಲನದ ಮೂಲಕ ಜಾಗೃತಿ ಮೂಡಿಸುವ ಕೆಲಸ ಮಾಡಲಾಗುತ್ತದೆ ಎಂದರು.

ಕಾನೂನು ಉಲ್ಲಂಘನೆಯಾಗಲಿ, ಅಹಿತಕರ ಘಟನೆಗಳಲ್ಲಿ ಭಾಗಿಯಾಗಲಿ ಅಥವಾ ವಿವಿಧ ರೀತಿಯಲ್ಲಿ ತೊಂದರೆ ಕೊಡುವ ವ್ಯಕ್ತಿಯ ವಿರುದ್ಧ ಕಾನೂನು ರಿತ್ಯ ಕ್ರಮಕ್ಕೆ ಮುಂದಾಗಬೇಕಾಗುತ್ತದೆ. ಸುವ್ಯವಸ್ಥಿತವಾಗಿ ಚುನಾವಣಾ ಪ್ರಕ್ರಿಯೆ ನಡೆಸುವ ಉದ್ದೇಶದಿಂದ ಅಗತ್ಯಕ್ರಮಕ್ಕೆ ಇಲಾಖೆ ಮುಂದಾಗಿರುತ್ತದೆ ಎಂದು ಹೇಳಿದರು. ಹುಳಿಯಾರು ಪಿಎಸ್‌ಐ ಬಸವರಾಜು, ಸಿಬ್ಬಂದಿಗಳಾದ ನಾಗಭೂಷಣ್, ಜಗದೀಶ್, ಚೇತು, ಮಂಜುನಾಥ್, ಜಾಫರ್, ಗೋಣಿಸ್ವಾಮಿ, ಶಿವಕುಮಾರ್, ಸುನೀಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



### ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ

# ಎರಡು ಕ್ಷೇತ್ರ ಗೆಲ್ಲುವುದು ಖಚಿತ

**ಮೈಸೂರು:** ಮೈಸೂರು-ಕೊಡಗು, ಚಾಮರಾಜನಗರ ಲೋಕಸಭಾ ಕ್ಷೇತ್ರಗಳಲ್ಲಿ ನಾವು ಗೆಲ್ಲುವುದು ಖಚಿತ. ಇವೆರಡನ್ನೂ ಸೇರಿಸಿ ಕನಿಷ್ಠ 20 ಕ್ಷೇತ್ರಗಳಲ್ಲಿ ಗೆದ್ದೇ ಗೆಲ್ಲುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಖಚಿತವಾಗಿ ನುಡಿದರು.

ಮೈಸೂರು-ಕೊಡಗು ಮತ್ತು ಚಾಮರಾಜನಗರ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಮೂರು ಜಿಲ್ಲೆಗಳ ವ್ಯಾಪ್ತಿಯ ಸಚಿವರು, ಮಾಜಿ ಸಚಿವರು, ಶಾಸಕರು, ಮಾಜಿ ಶಾಸಕರು, ಜಿಲ್ಲಾ ಮುಖಂಡರು, ಬೋರ್ಡ್ ಅಧ್ಯಕ್ಷರುಗಳು, ಬ್ಲಾಕ್ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಸಭೆಯಲ್ಲಿ ಮಾತನಾಡಿದರು.

ಇವೆರಡೂ ಕಾಂಗ್ರೆಸ್ ಕ್ಷೇತ್ರಗಳು. ಮತ್ತೆ ನಮ್ಮ 'ಕೈ'ಗೆ ಬರಲೇಬೇಕು. ಬರುತ್ತವೆ. ಹಿಂದಿನ ಬಾರಿ ಕೆಲವು ಕಾರಣಗಳಿಂದಾಗಿ ಅತ್ಯಂತ ಕಡಿಮೆ ಮತಗಳಿಂದ ನಮಗೆ ಹಿನ್ನಡೆಯಾಗಿತ್ತು. ಆದರೆ ಈ ಬಾರಿ ಬಿಜೆಪಿ ಪರವಾದ ಯಾವ ಕಾರಣಗಳೂ ಇಲ್ಲ. ರಾಜ್ಯದಲ್ಲಿ ಬಿಜೆಪಿ ವಿರೋಧಿಯಾದ ಅಲೆ ಜೋರಾಗಿದೆ. ಬಿಜೆಪಿಯ ಬೆಲೆ ಏರಿಕೆಯಿಂದ ಸಂಕಷ್ಟಕ್ಕೆ ತುತ್ತಾಗಿದ್ದ ರಾಜ್ಯದ ಎಲ್ಲಾ ಕುಟುಂಬಗಳಿಗೆ ಕಾಂಗ್ರೆಸ್ ಗ್ಯಾರಂಟಿಗಳು ನೆಮ್ಮದಿ ತರಿಸಿರುವುದನ್ನು ನಾಡಿನ ಜನತೆ ಹೃದಯಪೂರ್ವಕವಾಗಿ ಒಪ್ಪಿಕೊಂಡಿದ್ದಾರೆ ಎಂದರು.

ನಾವು ನಡೆಸಿರುವ ಹಲವು ಸಮೀಕ್ಷೆಗಳಲ್ಲಿ ಮೈಸೂರು, ಚಾಮರಾಜನಗರ ಕ್ಷೇತ್ರಗಳಲ್ಲಿ ಗೆಲ್ಲುವುದೂ ಸೇರಿ 20 ಕ್ಷೇತ್ರಗಳಲ್ಲಿ ನಾವು ಗೆಲ್ಲುವುದು ಖಚಿತ ಎನ್ನುವ ವರದಿಗಳು ಬಂದಿವೆ. ಹೀಗಾಗಿ ಒಗ್ಗಟ್ಟಿನಿಂದ ಕೆಲಸ ಮಾಡಿದರೆ ಕಾಂಗ್ರೆಸ್ ಪರವಾದ ಅಭೂತಪೂರ್ವ ಫಲಿತಾಂಶ ಹೊರಗೆ ಬರಲಿದೆ ಎಂದು ವಿಶ್ವಾಸದಿಂದ ನುಡಿದರು.

ಹತ್ತು ವರ್ಷ ಅಧಿಕಾರ ಮಾಡಿದ ಮೋದಿ ಸರ್ಕಾರಕ್ಕೆ ಜನರಿಗೆ ತೋರಿಸಲು ಒಂದೇ ಒಂದು ಕೆಲಸವನ್ನೂ ಮಾಡಿಲ್ಲ. ಹೀಗಾಗಿ ಶ್ರೀರಾಮನ ಹೆಸರಲ್ಲಿ ಮತ ಕೇಳುವಂತಾಗಿದೆ. ರಾಮ ಸರ್ವರಿಗೂ ಸೇರಿದವನು. ನನ್ನ ಹೆಸರಲ್ಲೇ ರಾಮ ಇದೆ ಎಂದರು.

ಹತ್ತು ವರ್ಷ ಕೇಂದ್ರದಲ್ಲಿ ಅಧಿಕಾರ ನಡೆಸಿದ ಬಿಜೆಪಿಯವರಿಗೆ ಜನರ ಬಳಿ ಹೋಗಲು ಮುಖ ಇಲ್ಲ. ಏಕೆಂದರೆ ಈ ಹತ್ತು ವರ್ಷಗಳಲ್ಲಿ ಬಿಜೆಪಿ ಜನರಿಗೆ ತೋರಿಸಲು ಒಂದೇ ಒಂದು ಕೆಲಸವನ್ನೂ ಮಾಡಿಲ್ಲ. ಅದಕ್ಕೇ ಕೇವಲ ಮೋದಿಯವರ ಮುಖ ತೋರಿಸಿ ಚುನಾವಣೆ ಮಾಡ್ತೀವಿ ಎಂದು ಬಿಜೆಪಿ ಹೆಣಗಾಡುತ್ತಿದೆ. ವಿಧಾನಸಭಾ ಚುನಾವಣೆಯಲ್ಲಿ ಮೋದಿ ಪ್ರಚಾರ ಮಾಡಿದ ಎಲ್ಲಾ ಕ್ಷೇತ್ರಗಳಲ್ಲೂ ಕಾಂಗ್ರೆಸ್ 50-60 ಸಾವಿರ ಮತಗಳ ಅಂತರದಿಂದ ಗೆಲುವು ಸಾಧಿಸಿದೆ ಎಂದರು.



- » ಮೋದಿ ಆಶ್ವಾಸನೆಗಳ ಗತಿ ಏನಾಯ್ತು: ಸಿದ್ದು ಪ್ರಶ್ನೆ
- » ಮೋದಿಯವರು ವಿದೇಶದಿಂದ ಕಪ್ಪು ಹಣ ತರ್ತೀವಿ ಅಂದ್ರು- ತಂದ್ರಾ?
- » ಎಲ್ಲರ ಅಕೌಂಟಿಗೆ 15 ಲಕ್ಷ ಹಾಕ್ತೀವಿ ಅಂದ್ರು. ಹಾಕಿದ್ರಾ?
- » ವರ್ಷಕ್ಕೆ ಎರಡು ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀವಿ ಅಂದ್ರು. ಮಾಡಿದ್ರಾ?
- » ರೈತರ ಆದಾಯ ದುಪ್ಪಟ್ಟು ಮಾಡ್ತೀವಿ ಅಂದ್ರು, ದುಪ್ಪಟ್ಟಾಯ್ತಾ?
- » ಅಚ್ಚೇ ದಿನ್ ಆಯೆಗಾ ಅಂದ್ರು, ಬಂತಾ ಅಚ್ಚೆ ದಿನ್?
- » ಮೇಕ್ ಇನ್ ಇಂಡಿಯಾ ಅಂದ್ರು, ಆಯ್ತಾ?

ಹೀಗಾಗಿ ಬಿಜೆಪಿ ಸುಳ್ಳುಗಳ ಮೊರೆ ಹೋಗಿದೆ. ನನ್ನ ಬಗ್ಗೆ, ನಮ್ಮ ನಾಯಕರ ಬಗ್ಗೆ, ನಮ್ಮ ಪಕ್ಷದ ಬಗ್ಗೆ ಸರಣಿ ಸುಳ್ಳುಗಳನ್ನು ಹೇಳುತ್ತಾ, ಸುಳ್ಳುಗಳ ಆಧಾರದಲ್ಲೇ ಚುನಾವಣೆ ಮಾಡುತ್ತಿದೆ ಎಂದು ಟೀಕಿಸಿದರು.

ಸಮಾಜದಲ್ಲಿರುವ ಅಸಮಾನತೆ ಹೋಗಬೇಕು. ಆದರೆ ಬಿಜೆಪಿ ಜಾತಿ, ಧರ್ಮದ ಹೆಸರಿನಲ್ಲಿ ಸಮಾಜವನ್ನು ಒಡೆಯುತ್ತಿದೆ. ಸಮಾಜದಲ್ಲಿ ಬಿರುಕು ಮೂಡಿದಷ್ಟೂ ಅಸಮಾನತೆ ಬೆಳೆಯುತ್ತದೆ ಎಂದರು.

ಶ್ರೀರಾಮಚಂದ್ರ, ಸೀತಾ , ಲಕ್ಷ್ಮಣ ಎಲ್ಲರೂ ನಮಗೆ ಪೂಜ್ಯರು. ಈಗ ಬಿಜೆಪಿ ಕೇವಲ ಜೈ ಶ್ರೀರಾಮ್ ಕೂಗುತ್ತದೆ. ನಾನು ಜೈ ಸೀತಾರಾಮ್ ಎಂದು ನಿರಂತರವಾಗಿ ಕೂಗುತ್ತೇವೆ. ನನ್ನ ಹೆಸರಿನಲ್ಲೇ ರಾಮ ಇದೆ ಎಂದರು.

ನಮ್ಮ ಕಾಂಗ್ರೆಸ್ ಸರ್ಕಾರದ ಕಾರ್ಯಕ್ರಮಗಳು ಎಲ್ಲಾ ಜಾತಿ, ಎಲ್ಲಾ ಧರ್ಮದವರಿಗೂ ಸಿಗುತ್ತಿದೆ. ನಾವು ನುಡಿದಂತೆ ನಡೆದಿದ್ದೇವೆ. ಬಿಜೆಪಿ ಮತ್ತು ನರೇಂದ್ರ ಮೋದಿ ಹೇಳಿದ್ದರಲ್ಲಿ ಒಂದನ್ನೂ ಮಾಡಿಲ್ಲ ಎಂದು ಅವರ ವಿಫಲ ಅಶ್ವಾಸನೆಗಳ ಪಟ್ಟಿಯನ್ನೇ ನೀಡಿದರು.

**ಸೆಕ್ಯುಲರ್ ಏನಾಯ್ತು?:** ಮೋದಿ ಪ್ರಧಾನಿಯಾದರೆ ದೇಶ ಬಿಟ್ಟು ಹೋಗ್ತೀನಿ ಅಂದಿದ್ದ ದೇವೇಗೌಡರು, ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟುತ್ತೀನಿ ಎಂದಿದ್ದ ದೇವೇಗೌಡರು ಈಗ ಬಿಜೆಪಿ ಜತೆ ಸೇರಿದ್ದಾರೆ.

ತಮ್ಮ ಅಳಿಯ ಮಂಜುನಾಥ್ ಅವರನ್ನು ಬಿಜೆಪಿಗೆ ಕಳಿಸಿದ್ದಾರೆ. ಮೊದಲು ನೀನು ಹೋಗಿರು, ಆಮೇಲೆ ನಾವೂ ಬರ್ತೀವಿ ಎನ್ನುವ ರೀತಿ ಅಳಿಯನನ್ನು ಬಿಜೆಪಿಗೆ ಕಳಿಸಿದ್ದಾರೆ. ಅದಕ್ಕೇ ತಮ್ಮ ಪಕ್ಷದ ಹೆಸರಿನಲ್ಲಿರುವ ಜಾತ್ಯತೀತ ಪದವನ್ನು ತೆಗೆದುಹಾಕುವುದು ಉತ್ತಮ ಎಂದು ಸಲಹೆ ನೀಡಿದರು.

**ನಮ್ಮ ಪಾಲು ಕೇಳೋಕೆ ಸುಪ್ರೀಂಕೋರ್ಟ್ ಗೆ ಹೋಗಬೇಕಾಯ್ತು:** ರಾಜ್ಯಕ್ಕೆ ಬರಗಾಲ ಬಂದು ಐದು ತಿಂಗಳಾದರೂ ರಾಜ್ಯಕ್ಕೆ ಬರಬೇಕಾದ ರಾಜ್ಯದ ಪಾಲಿನ ಬರ ಪರಿಹಾರ ಒಂದೇ ಒಂದು ರೂಪಾಯಿ ಬಂದಿಲ್ಲ, ಮೊದಲು ರಾಜ್ಯದ ಜನರಿಗೆ ಅಕ್ಕಿ ಕೊಡ್ತೀವಿ. ದುಡ್ಡು ತಗೊಂಡು ಅಕ್ಕಿ ಕೊಡಿ ಅಂದರೂ ಕೊಡಲಿಲ್ಲ.

ಈಗ ರಾಜ್ಯದ ಪಾಲಿನ ಬರ ಪರಿಹಾರ ನಮಗೆ ಕೊಡಿ ಎಂದರೂ ಕೊಡುತ್ತಿಲ್ಲ. ನಮ್ಮ ತೆರಿಗೆ ಹಣಕ್ಕೆ ಬೆಲೆ ಇಲ್ಲವಾ? ನಮ್ಮ ರಾಜ್ಯದ ಜನರ ಬೇಡಿಕೆಗೆ ಬೆಲೆ ಇಲ್ಲವಾ? ಎಂದು ಸಿದ್ದರಾಮಯ್ಯ ಪ್ರಶ್ನಿಸಿದರು.

ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ತನ್ವೀರ್ ಸೇಠ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಪುಷ್ಪಾ ಅಮರನಾಥ್, ಆಶ್ರಯ ಯೋಜನೆ ಅಧ್ಯಕ್ಷರಾದ ಮಾಜಿ ಶಾಸಕ ಯತೀಂದ್ರ ಸಿದ್ದರಾಮಯ್ಯ, ಮೈಸೂರು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಲಕ್ಷ್ಮಣ್ ಸೇರಿ ಮೂರು ಜಿಲ್ಲೆಗಳ ಎಲ್ಲಾ ಶಾಸಕರುಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ನುಡಿದಂತೆ ನಡೆದ ಕಾಂಗ್ರೆಸ್ ಗೆಲ್ಲಲಿದೆ

**ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುತ್ತದೆ ಎಂಬ ವಿಶ್ವಾಸವಿದ್ದು, ಈ ಬಾರಿ ರಾಜ್ಯದ 20 ಲೋಕಸಭಾ ಕ್ಷೇತ್ರಗಳಲ್ಲಿ ಜಯಗಳಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಮೈಸೂರಿನ ವಿಮಾನನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿ, ಅಭ್ಯರ್ಥಿ ಆಯ್ಕೆಯಲ್ಲಿ ಯಾವುದೇ ಕಗ್ಗಂಟಿಲ್ಲ. ರಾಜ್ಯದ ಉಳಿದ 4 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆಯಾಗುವ ಸಾಧ್ಯತೆ ಇದೆ. ಚಾಮರಾಜನಗರ ಕ್ಷೇತ್ರದ ಅಭ್ಯರ್ಥಿ ಆಯ್ಕೆಗೆ ಯಾವುದೇ ಕಗ್ಗಂಟಿಲ್ಲ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಈ ಬಾರಿ 20 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ. ನಾವು ಬಿಜೆಪಿ ಪಕ್ಷದವರ ಹಾಗೆ 28 ಕ್ಷೇತ್ರಗಳಲ್ಲಿ ಗೆದ್ದೇ ಗೆಲ್ಲುತ್ತೇವೆ ಎಂಬ ಸುಳ್ಳು ಹೇಳುವುದಿಲ್ಲ. ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಿಂದ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಅನುಕೂಲವಾಗಲಿದೆ. ಮೈಸೂರು , ಚಾಮರಾಜನಗರ ಕ್ಷೇತ್ರವನ್ನೂ ಸೇರಿಸಿದಂತೆ ರಾಜ್ಯದ ಎಲ್ಲಾ 28 ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವುದನ್ನು ಕಾಂಗ್ರೆಸ್ ಪ್ರತಿಷ್ಠೆಯಾಗಿ ತೆಗೆದುಕೊಳ್ಳಲಿದೆ ಎಂದರು. ಗ್ಯಾರಂಟಿಯೋಜನೆಗಳು ಕಾಂಗ್ರೆಸ್ ಪಕ್ಷದ ನೆರವಿಗೆ ಬರಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸುತ್ತಾ, ನಮ್ಮ ಸರ್ಕಾರ ನುಡಿದಂತೆ ನಡೆದಿದ್ದು, ಜನರಿಗೆ ನೀಡಿದ ಭರವಸೆಗಳನ್ನು ಅಧಿಕಾರಕ್ಕೆ ಬಂದ ಕೂಡಲೇ ಜಾರಿಗೊಳಿಸಲಾಗಿದೆ. ಗ್ಯಾರಂಟಿಗಳಿಗೆ ಈ ವರ್ಷ 36000 ಕೋಟಿ ಹಾಗೂ ಮುಂದಿನ ವರ್ಷ 52009 ಕೋಟಿ ರೂ.ಗಳನ್ನು ವೆಚ್ಚ ಮಾಡಲಿದ್ದೇವೆ. ಬಿಜೆಪಿಯವರಂತೆ ಸುಳ್ಳು ಹೇಳದೇ , ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದರು. ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಮಾಡಿರುವ ಸಾಧನೆಗಳ ಆಧಾರದ ಮೇಲೆ ಚುನಾವಣೆಯನ್ನು ಎದುರಿಸಲಿದ್ದು, ಜನತೆ ವಿಧಾನಸಭಾ ಚುನಾವಣೆಯಂತೆ ನಮ್ಮ ಪಕ್ಷದ ಕೈ ಹಿಡಿಯಲಿದ್ದಾರೆ. ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುತ್ತದೆ ಎಂಬ ವಿಶ್ವಾಸವಿದೆ ಎಂದರು. ಶಕ್ತಿ ಯೋಜನೆ ಹೊರತುಪಡಿಸಿದರೆ ಯಾವುದೇ ಗ್ಯಾರಂಟಿಗಳು ಜನರಿಗೆ ಸಮರ್ಪಕವಾಗಿ ತಲುಪುತ್ತಿಲ್ಲ ಎಂಬ ಬಿಜೆಪಿಯವರ ಆರೋಪಕ್ಕೆ**



**ಪ್ರತಿಕ್ರಿಯೆ ನೀಡುತ್ತಾ, ಬಿಜೆಪಿಯವರು ನುಡಿದಂತೆ ನಡೆಯಲಿಲ್ಲ. 2018 ರಲ್ಲಿ ಬಿಜೆಪಿಯವರು ನೀಡಿದ 600 ಭರವಸೆಗಳಲ್ಲಿ ಶೇ. 10 ರಷ್ಟನ್ನೂ ಈಡೇರಿಸಲಿಲ್ಲ. ಪ್ರಧಾನಿ ಮೋದಿಯವರೂ ಕೂಡ ಜನರ ಖಾತೆಗಳಿಗೆ 15 ಲಕ್ಷ ರೂ.ಗಳಾಗಲಿ, 20 ಕೋಟಿ ಉದ್ಯೋಗವಾಗಲಿ, ರೈತರ ಆದಾಯ ದ್ವಿಗುಣಗೊಳಿಸುವ ಯಾವುದೇ ಭರವಸೆಗಳನ್ನು ಈಡೇರಿಸಲಿಲ್ಲ. ಅಚ್ಚೇ ದಿನ್ ತರುವ ಭರವಸೆಯನ್ನು ಹುಸಿಗೊಳಿಸಿದ ಮೋದಿಯವರನ್ನು ಜನರು ಯಾಕೆ ನಂಬುತ್ತಾರೆ ಎಂದು ಸಿಎಂ ಪ್ರಶ್ನಿಸಿದರು. ಕುಟುಂಬ ರಾಜಕಾರಣವನ್ನು ವಿರೋಧಿಸುವ ಮುಖ್ಯಮಂತ್ರಿಗಳೇ ತಮ್ಮ ಸಚಿವರ ಕುಟುಂಬದವರಿಗೆ ಈ ಬಾರಿ ಟಿಕೆಟ್ ನೀಡಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡುತ್ತಾ, ಇದು ಕುಟುಂಬ ರಾಜಕಾರಣವಲ್ಲ. ಜನರು ಯಾವ ಅಭ್ಯರ್ಥಿಗೆ ಬೆಂಬಲ ಸೂಚಿಸಬಹುದೆಂಬ ಚಿಂತನೆಯ ಮೇಲೆ ಅವರನ್ನು ಆಯ್ಕೆ ಮಾಡಲಾಗಿದ್ದು, ಜನರ ಅಭಿಪ್ರಾಯಕ್ಕೆ ಮನ್ನಣೆ ನೀಡಲಾಗಿದೆ ಎಂದರು.**

## ಕ್ಯಾಮರಾ ಕಣ್ಗಾವಲಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ



**ಹುಳಿಯಾರು:** ಮಾರ್ಚ್ 25 ರ ಸೋಮವಾರದಿಂದ ನಡೆಯಲಿರುವ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಾಗಿ ತಾಲೂಕಿನಲ್ಲಿ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಬಹುಮುಖ್ಯವಾಗಿ ಸುಗಮ ಹಾಗೂ ಪಾರದರ್ಶಕ ಪರೀಕ್ಷೆ ನಡೆಸುವ ಸಲುವಾಗಿ ಹಾಗೂ ಕಾಪಿ ಹೊಡೆಯುವ ವಿದ್ಯಾರ್ಥಿಗಳ ಮೇಲೆ ಹದ್ದಿನ ಕಣ್ಣಿಡುವ ನಿಟ್ಟಿನಲ್ಲಿ ಪರೀಕ್ಷೆ ನಡೆಯುವ ಪ್ರತಿ ಕೊಠಡಿಗೂ ಸಿಸಿ ಕ್ಯಾಮರ ಅಳವಡಿಸಲಾಗಿದೆ. ಮೊದಲು ಪರೀಕ್ಷಾ ಕೇಂದ್ರ ಹಾಗೂ ಆವರಣದಲ್ಲಿ ಮಾತ್ರ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿತ್ತು. ಪರೀಕ್ಷಾ ಕೊಠಡಿಗಳಲ್ಲಿ ಅಕ್ರಮ ನಡೆಯುವ ಸಾಧ್ಯತೆ ಇರುವುದರಿಂದ ಈ ಬಾರಿ ಕೊಠಡಿಗಳಿಗೂ ಸಿಸಿಟಿವಿ ಕ್ಯಾಮೆರಾ ಅಳವಡಿಸಲು ಸೂಚನೆ ನೀಡಲಾಗಿತ್ತು. ಅದರಂತೆ ತಾಲ್ಲೂಕಿನಲ್ಲಿ ಒಟ್ಟು 2545 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದು ಇದಕ್ಕಾಗಿ 11 ಪರೀಕ್ಷಾ ಕೇಂದ್ರಗಳನ್ನು 108 ಪರೀಕ್ಷಾ ಕೊಠಡಿಗಳನ್ನು ರಚಿಸಲಾಗಿದೆ. ಇಷ್ಟೂ ಕೊಠಡಿಗಳಿಗೂ ಸಿಸಿ ಕ್ಯಾಮರ ಅಳವಡಿಸುವ ಮೂಲಕ ಈ ವರ್ಷ ಸಿಸಿ ಕ್ಯಾಮರ ಕಣ್ಗಾವಲಿನಲ್ಲಿ ಪರೀಕ್ಷೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಕೊಠಡಿಗಳಲ್ಲಿ ಕ್ಯಾಮೆರಾ ಅಳವಡಿಸುವುದರಿಂದ ಕೊಠಡಿಗಳಲ್ಲಿ ಯಾವುದೇ ರೀತಿಯ ಅಕ್ರಮ ಮಾಡಲು ಅವಕಾಶ ಇಲ್ಲದಂತಾಗಿದೆ. ಅಲ್ಲದೆ ಅಧಿಕಾರಿಗಳು ಮತ್ತು ಮೇಲ್ವಿಚಾರಕರು ನಿರ್ಭೀತಿಯಿಂದ ಪರೀಕ್ಷಾ ಕೇಂದ್ರಗಳಲ್ಲಿ ಕೆಲಸ ಮಾಡಲು ಸಾಧ್ಯವಾಗಲಿದೆ. ಪರೀಕ್ಷಾ ಅಕ್ರಮಗಳಿಗೆ ಸಹಕರಿಸುವವರ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಲು ಇದರಿಂದ ಸಾಧ್ಯವಾಗಲಿದೆ. ಹಾಗಾಗಿ ಶಿಕ್ಷಣ ಇಲಾಖೆಯ ಈ ನಿರ್ಧಾರವನ್ನು ಪೋಷಕರು ಪ್ರಶಂಸಿಸುತ್ತಿದ್ದಾರೆ. ಅಳವಡಿಸಿರುವ ಸಿಸಿಟಿವಿಯಿಂದ ಪರೀಕ್ಷಾ ಪ್ರಕ್ರಿಯೆಯನ್ನು ಜಿಲ್ಲೆಯಲ್ಲೇ ಕುಳಿತು ಅಧಿಕಾರಿಗಳು ವೀಕ್ಷಿಸಬಹುದಾಗಿದೆ. ಚಿಕ್ಕನಾಯಕನಹಳ್ಳಿ ತಾಲೂಕಿನ ಎಲ್ಲಾ ಕೇಂದ್ರದ ಚಟುವಟಿಕೆಗಳನ್ನು ಲೈವ್ ವೀಕ್ಷಣೆಗೆ ಚಿಕ್ಕನಾಯಕನಹಳ್ಳಿಯ ಕೆಎಂಎಚ್‌ಪಿಎಸ್ ಶಾಲೆಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಪ್ರತಿ ಸೆಂಟರ್‌ನಲ್ಲೂ ಆರೋಗ್ಯ ಸಿಬ್ಬಂದಿ, ಮೊಬೈಲ್ ಸ್ವಾದೀನಾಧಿಕಾರಿ, ಪರೀಕ್ಷಾ ಕೇಂದ್ರ ಚಲನ ವಲನ ಗಮನಿಸಲು ಸಿಟಿಂಗ್ ಸ್ವಾಡ್, ಪರೀಕ್ಷಾ ಕೇಂದ್ರ ಸುತ್ತಮುತ್ತ 144 ಸೆಕ್ಷನ್ ಜಾರಿ ಮಾಡಿ ಪ್ರತಿ ಪರೀಕ್ಷೆ ಕೇಂದ್ರಕ್ಕೂ ಪೊಲೀಸ್ ಬಂದೋಬಸ್ತ್ ಮಾಡಲಾಗಿದೆ. ಯಾವುದೇ ರೀತಿ ಪರೀಕ್ಷಾ ಅಕ್ರಮ ನಡೆಸಲು ಸಾಧ್ಯವಾಗದಂತೆ ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗಿದೆ ಎನ್ನುತ್ತಾರೆ ಬಿಇಒ ಕಾಂತರಾಜು.



ವಿಜಯಪುರ ಪಟ್ಟಣದ ಶ್ರೀಧರ್ಮರಾಯಸ್ವಾಮಿ ದ್ರೌಪತಮ್ಮನವರ ಕರಗ ಮಹೋತ್ಸವದ ಪ್ರಯುಕ್ತ ಶನಿವಾರದಂದು ಹಸಿ ಕರಗ ಮಹೋತ್ಸವ ಏರ್ಪಡಿಸಲಾಗಿದ್ದು ಕರಗ ಪೂಜಾರಿ ಭೀಮಣ್ಣ ಹಸಿ ಕರಗ ಹೊತ್ತಿದ್ದರು.ಅದಕ್ಕಾಗಿ ಶ್ರೀ ಧರ್ಮರಾಯಸ್ವಾಮಿ ದೇವಾಲಯವನ್ನು ವಿದ್ಯುತ್ ದೀಪಾಲಂಕಾರಗಳಿಂದ ಅಲಂಕರಿಸಿರುವುದು.

# ಕಾಂಗ್ರೆಸ್‌ನಿಂದ ಅನ್ಯಾಯವಾಗಿದೆ; ಬಿಜೆಪಿ ಅಭ್ಯರ್ಥಿ ಬಾಲರಾಜು

**ಹನೂರು:** ನನಗೆ ಕಾಂಗ್ರೆಸ್‌ನಿಂದ ಅನ್ಯಾಯವಾಗಿದೆ. ಜೀತ ಮಾಡಿದ್ದು ಸಾಕಾಯಿತು. ನನ್ನ ಗುರುಗಳು ರಾಜಶೇಖರ್ ಮೂರ್ತಿಯವರು ಸನ್ಮಾನ್ಯ ಯಡಿಯೂರಪ್ಪ ಅವರು ಬಿಜೆಪಿ ನನ್ನ ಕೈ ಹಿಡಿದೇ ಹಿಡಿಯುತ್ತಾರೆ ಎಂಬ ವಿಶ್ವಾಸದಿಂದ ಬಿಜೆಪಿಗೆ ಬಂದೆ. ಕ್ಷೇತ್ರದ ಜನತೆ ನನನ್ನು ಆಶೀರ್ವದಿಸಬೇಕು ಎಂದು ಬಿಜೆಪಿ ಅಭ್ಯರ್ಥಿ ಬಾಲರಾಜು ಅವರು ತಿಳಿಸಿದರು.

ಹನೂರು ಆರ್.ಎಸ್. ದೊಡ್ಡಿ ಗೌರಿ ಶಂಕರ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದ್ದ ಲೋಕಸಭಾ ಚುನಾವಣೆ ಹನೂರು ಬಿಜೆಪಿ ಮಂಡಲ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು , ಈ ದೇಶಕ್ಕೆ ನರೇಂದ್ರ ಮೋದಿ ಯವರ ಅವಶ್ಯಕತೆ ಇದೆ. 2024 ರಲ್ಲಿ ನರೇಂದ್ರ ಮೋದಿ ಪ್ರಧಾನಿ ಆಗಬೇಕು ಎಂಬ ಕನಸು ಇದೆ. ನರೇಂದ್ರ ಮೋದಿ 3 ನೇ ಬಾರಿಗೆ ಪ್ರಧಾನಿ ಆಗಲು ದೇಶದ ಜನತೆ ಕಾತರರಾಗಿದ್ದಾರೆ.

ಭಾರತಕ್ಕೆ ಕಿರೀಟಪ್ರಾಯವಾದ ಜಮ್ಮು ಕಾಶ್ಮೀರಕ್ಕೆ 370 ಕಾಯ್ದೆ ತಂದರು. ಸನ್ಮಾನ್ಯ ನರೇಂದ್ರ ಮೋದಿಯವರು ವಿಶ್ವದಲ್ಲೇ ದೇಶವನ್ನು ಪ್ರಥಮ ಸ್ಥಾನಕ್ಕೆ ಕೊಂಡೊಯ್ಯಲು ಶ್ರಮಿಸಿದ್ದಾರೆ. ಹಲವಾರು ಯೋಜನೆ ಅಡಿ ಜನಪರ ಯೋಜನೆಗಳನ್ನು ನೀಡಿ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಈ ದೇಶದಲ್ಲಿ ಮತ್ತೊಮ್ಮೆ ನರೇಂದ್ರ ಮೋದಿಯವರು ಪ್ರಧಾನಿ ಆಗಬೇಕು ಈ ನಿಟ್ಟಿನಲ್ಲಿ ಈ ಬಾರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾದ ನನ್ನನ್ನು ಬೆಂಬಲಿಸಿ ಗೆಲ್ಲಿಸಿ ಕೊಡಬೇಕೆಂದು ಕೈ ಮುಗಿದು ಮನವಿ ಮಾಡಿದರು.

ನನ್ನ ಆಯ್ಕೆ ಸಂದರ್ಭದಲ್ಲಿ ಚಾಮರಾಜನಗರ ಕ್ಷೇತ್ರ ಎಲ್ಲಾ ಮುಖಂಡರುಗಳು ಒಪ್ಪಿಗೆ ಸೂಚಿಸಿದ್ದಾರೆ. ಮುಖ್ಯವಾಗಿ ಯಡಿಯೂರಪ್ಪ ಅವರನ್ನು ಸ್ಮರಿಸುತ್ತೇನೆ ಎಂದರು. ನಮ್ಮ ತಂದೆಯವರು ನನ್ನನ್ನು ಸಮಾಜ ಸೇವೆಗೆ ಮುಡಿಪಾಗಿಟ್ಟಿದ್ದರು. ನನಗೆ ಸಿಕ್ಕ ಮೂರು ವರ್ಷಗಳ ಅವಧಿಯಲ್ಲಿ ಜನರ ಸೇವೆಯನ್ನು ಮಾಡಿದ್ದೇನೆ ನಂತರವೂ ಸಹ 30 ವರ್ಷಗಳಿಂದಲೂ ಜನರ ಕಷ್ಟ ಸುಖಗಳಿಗೆ ಸ್ಪಂದಿಸಿ ಜನರ ಒಡನಾಟದಲ್ಲಿ ಬೆರೆತು ಎಂದಿಗೂ ಸಹ ನನ್ನ ಕೈಲಾದ ಸೇವೆ ಮಾಡುತ್ತಾ ಬಂದಿದ್ದೇನೆ ಎಂದು ತಿಳಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಮಾಜಿ ಶಾಸಕ ನಿರಂಜನ್ ಕುಮಾರ್ ಅವರು ಮಾತನಾಡಿ ಲೋಕಸಭಾ ಚುನಾವಣೆ ಕೇವಲ ಇನ್ನು ಒಂದು ತಿಂಗಳ ಮಾತ್ರ ಬಾಕಿ ಇದೆ. ಯೋಚನೆ



ಒಂದು ಉತ್ತಮವಾದ ಅಭ್ಯರ್ಥಿಬೇಕು, ಯೋಗ್ಯವಾದ ಅಭ್ಯರ್ಥಿ ಬೇಕು, ಎಲ್ಲರ ಜೊತೆ ಬೆರೆಯುವಂತೆ ಅಭ್ಯರ್ಥಿ ಬೇಕು ಎಂದು ನಿರೀಕ್ಷೆ ಮಾಡಿದ್ದೆವು. ಲೋಕಸಭಾ ಚುನಾವಣೆಯಲ್ಲಿ ಬಾಲರಾಜು ಅವರಂತಹ ಒಳ್ಳೆಯ ಅಭ್ಯರ್ಥಿಯನ್ನ ಕೊಟ್ಟಿದ್ದಾರೆ. ಇದು ದೇಶದ ಚುನಾವಣೆ ಆಗಿದೆ. ಸಿದ್ದರಾಮಯ್ಯ ನುಡಿದಂತೆ ನಡೆದ ಸರ್ಕಾರ ಎಂದು ಹೇಳುತ್ತಿದ್ದಾರೆ. ಬರ ಪರಿಹಾರ ಕೊಡುತ್ತೇನೆ ಎಂದು ಹೇಳಿದ್ದರು, ಇನ್ನು ಕೂಡ ಕೊಟ್ಟಿಲ್ಲ, ಗ್ಯಾರಂಟಿ ಯೋಜನೆಗಳು ವಿಫಲವಾಗಿದ್ದು, ದಲಿತರ ಹಣವನ್ನ ಗ್ಯಾರಂಟಿ ಯೋಜನೆಗಳಿಗೆ ಬಳಸಿಕೊಂಡಿದೆ. ಇದು ದಲಿತ ವಿರೋಧ ಸರ್ಕಾರವಾಗಿದೆ. ಯುವಕರಿಗೆ ಯುವನಿಧಿ ನೀಡುತ್ತೇನೆಂದು ಗ್ಯಾರಂಟಿಯಲ್ಲಿ ಘೋಷಣೆ ಮಾಡಿದರು, ಆದರೆ ಅದು ಕೇವಲ ಒಂದು ವರ್ಷಕ್ಕೆ ಮಾತ್ರ ಸೀಮಿತವಾಗಿದೆ ಎಂದು ಕಾಂಗ್ರೆಸ್ ಸರ್ಕಾರದ ಬಗ್ಗೆ ವ್ಯಂಗ್ಯವಾಡಿದರು . ನರೇಂದ್ರ ಮೋದಿ ಸರ್ಕಾರವು ಹಲವಾರು ಯೋಜನೆಗಳನ್ನು ನೀಡಿ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಈ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಇದೆ. ನರೇಂದ್ರ ಮೋದಿಯವರ ಆಡಳಿತದಲ್ಲಿ ಜಲ ಜೀವನ್ ಮಿಷನ್ ನಲ್ಲೂ ಮನೆ ಮನೆಗೂ ನೀರನ್ನ ಕೊಟ್ಟಿದ್ದಾರೆ. ಬುಲೆಟ್ ರೈಲು ನಮ್ಮ ದೇಶದಲ್ಲಿ ತರುವುದಕ್ಕೆ ಸಿದ್ಧತೆಯಾಗಿದೆ. ಈ ದೇಶದ ಅಭಿವೃದ್ಧಿಗಾಗಿ ಬಿಜೆಪಿ ಬೆಂಬಲಿಸುವ ಮೂಲಕ ಸನ್ಮಾನ್ಯ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಿಯಾಗಬೇಕು ಎಂದು ತಿಳಿಸಿದರು.

ಬಿಜೆಪಿ ಮುಖಂಡರಾದ ಡಾಕ್ಟರ್ ಪ್ರೀತನ್ ನಾಗಪ್ಪ ಅವರು ಮಾತನಾಡಿ ಬಿಜೆಪಿ ಪಕ್ಷ ಒಬ್ಬ ಉತ್ತಮ ನಾಯಕನನ್ನು ಅಭ್ಯರ್ಥಿಯನ್ನಾಗಿ ನೀಡಿರುವುದು ಸಂತಸ ತಂದಿದೆ. ಬಿಜೆಪಿ ಅಭ್ಯರ್ಥಿಯಾದ ಬಾಲರಾಜು ಅವರನ್ನು ಕ್ಷೇತ್ರದ ಮತದಾರರು ಗೆಲ್ಲಿಸುವ ಮೂಲಕ ನರೇಂದ್ರ ಮೋದಿಯವರ ಕೈ ಬಲಪಡಿಸಬೇಕು. ನರೇಂದ್ರ ಮೋದಿಯವರು ಪ್ರತಿಯೊಂದು ಗ್ರಾಮ ಮನೆ ಮನೆಯಲ್ಲಿ ಹಲವಾರು ಯೋಜನೆಯಡಿ ಪ್ರತಿಯೊಬ್ಬ ನಾಗರಿಕರಿಗೂ ಒಂದಲ್ಲ ಒಂದು ರೀತಿ ಸೌಲಭ್ಯಗಳನ್ನು ತಲುಪಿಸುವ ನಿಟ್ಟಿನಲ್ಲಿ ಶ್ರಮಿಸಿದ್ದಾರೆ. ಈ ದೇಶದ ಪ್ರಗತಿಗಾಗಿ ಮತ್ತೊಮ್ಮೆ ಬಿಜೆಪಿ ಆಡಳಿತಕ್ಕೆ ಬರಬೇಕು. ಹಾಗಾಗಿ ಪ್ರತಿಯೊಬ್ಬ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿಯ ಗೆಲುವಿಗೆ ಶ್ರಮಿಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಮಾಜಿ ಶಾಸಕ ನಿರಂಜನ್ ಕುಮಾರ್, ಮಾಜಿ ಶಾಸಕ ಎಸ್ ಮಹೇಶ್, ಮಲ್ಲಿಕಾರ್ಜುನಪ್ಪ , ಡಾಕ್ಟರ್ ಪ್ರೀತನ್ ನಾಗಪ್ಪ, ದತ್ತೇಶ್ ಕುಮಾರ್, ನಿಶಾಂತ್ , ಬಾಬು, ವೆಂಕಟಸ್ವಾಮಿ, ಶಿವಕುಮಾರ್, ವೆಂಕಟೇಶ್, ಹನೂರು ಬಿಜೆಪಿ ಮಂಡಲ ಅಧ್ಯಕ್ಷ ವೃಷಬೇಂದ್ರಸ್ವಾಮಿ, ರಾಮಪುರ ಮಂಡಲ ಅಧ್ಯಕ್ಷ ರಾಜು, ಸಿಂಗಾನಲ್ಲೂರು ನಾಗಲಕ್ಷ್ಮಿ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಮುಖಂಡರು ಹಾಜರಿದ್ದರು.



ವಿಜಯಪುರ ಪಟ್ಟಣದ ಶ್ರೀ ಸೌಮ್ಯಕೃಷ್ಣ ಸ್ವಾಮಿ ಬ್ರಹ್ಮ ರಥೋತ್ಸವದ ಪ್ರಯುಕ್ತ ಶನಿವಾರದಂದು ರಾತ್ರಿ ಶ್ರೀದೇವಿ ಭೂನಿಳಾ ಸಮೇತ ಶ್ರೀ ಸೌಮ್ಯಕೇಶವ ಸ್ವಾಮಿ ರವರ ತಿರುಕಲ್ಯಾಣೋತ್ಸವ ಕಾರ್ಯಕ್ರಮ ನಡೆದಿದ್ದು, ಶ್ರೀ ಸ್ವಾಮಿರವರನ್ನು ಅಲಂಕರಿಸಿರುವುದು.

# ಸರ್ಕಾರಗಳು ಜಾನಪದ ಕಲೆಗಳನ್ನು ಪ್ರೋತ್ಸಾಹಿಸಬೇಕು

**ಬಾಗಲಕೋಟೆ:** ಜನಪದ ಸಂಸ್ಕೃತಿ, ಪರಂಪರೆ ಮರೆತರೆ ಆ ದೇಶಕ್ಕೆ ಬಹಳ ದಿನ ಉಳಿಗಾಲವಿಲ್ಲ. ಸರ್ಕಾರಗಳು ಜಾನಪದ ಕಲೆಗಳನ್ನು ಪ್ರೋತ್ಸಾಹಿಸಬೇಕು. ಜಾನಪದ ಕಲಾವಿದರನ್ನು ಗೌರವಿಸಬೇಕೆಂದು ಕೇಂದ್ರ ಕನ್ನಡ ಸಾಹಿತ್ಯ ಪರಿಷತ್ ಕಾರ್ಯಕಾರಿಣಿ ಸದಸ್ಯ ಜಿ. ಕೆ. ತಳವಾರ ಹೇಳಿದರು.

ನವನಗರದ ಅನು ಮ್ಯೂಜಿಕ್ ಫೌಂಡೇಶನ್‌ನಲ್ಲಿ ಕನ್ನಡ ಜಾನಪದ ಪರಿಷತ್ ತಾಲೂಕು ಮತ್ತು ಜಿಲ್ಲಾ ಘಟಕ ಬಾಗಲಕೋಟೆ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ 9ನೇ ಸಂಸ್ಥಾಪನಾ ದಿನಾಚರಣೆಯನ್ನು ಜಾನಪದ ತ್ರಿಪದಿ ವಾಚಿಸುವ ಮೂಲಕ ಉದ್ಘಾಟಿಸಿ ಮಾತನಾಡಿ, ರಾಜ್ಯದಲ್ಲಿ ಡಾ. ಎಸ್. ಬಾಲಾಜಿ, ಜಿಲ್ಲೆಯಲ್ಲಿ ಡಿ. ಎಂ. ಸಾವಕಾರ ಸಾರಥ್ಯದಲ್ಲಿ ಪರಿಷತ್ ಒಳ್ಳೆಯ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಕಲಾವಿದರಿಗೆ ವೇದಿಕೆ ಕಲ್ಪಿಸುತ್ತಿದೆ ಎಂದರು.

ಕನ್ನಡ ಜಾನಪದ ಪರಿಷತ್ ಜಿಲ್ಲಾಧ್ಯಕ್ಷ ಡಿ. ಎಂ. ಸಾವಕಾರ ಅಧ್ಯಕ್ಷತೆ ವಹಿಸಿ ಮಾತನಾಡಿ, ಬುಡಕಟ್ಟು ಹಾಗೂ ನಾಡಿನ ಜಾನಪದ ಕಲೆ ಸಂಸ್ಕೃತಿಯನ್ನು ಉಳಿಸಲು ಮತ್ತು ಎಲೆಮರೆ ಕಾಯಿಯಂತಿರುವ ಜಾನಪದ ಕಲಾವಿದರನ್ನು ಉಳಿಸಿ ಬೆಳೆಸಲು ಪರಿಷತ್ ಸ್ಥಾಪಿಸಲಾಗಿದೆ ಎಂದು ಹೇಳಿದರು.

ರಾಜ್ಯಾಧ್ಯಕ್ಷ ಡಾ. ಎಸ್. ಬಾಲಾಜಿ ರಾಜ್ಯದಲ್ಲಿ ಮಾತ್ರವಲ್ಲ, ಗಡಿನಾಡಿನಲ್ಲಿ, ಹೊರ ರಾಜ್ಯಗಳಲ್ಲಿಯೂ




ಜಾನಪದ ಕಾರ್ಯಕ್ರಮಗಳನ್ನು ಆಯೋಜಿಸುವ ಕೆಲಸ ಮಾಡುತ್ತಿದ್ದು, 50 ವರ್ಷ ಮೀರಿದ ಎಲೆಮರೆಯ ಕಾಯಿಯಂತಿರುವ ಜಾನಪದ ಕಲಾವಿದರನ್ನು ಗುರ್ತಿಸಿ, ರಾಜ್ಯಮಟ್ಟದಲ್ಲಿ 'ಜಾನಪದ ಪ್ರಪಂಚ ಪ್ರಶಸ್ತಿ' ನೀಡಿ ಗೌರವಿಸುತ್ತಿರುವರು ಎಂದು ಹೇಳಿದರು.

ಕಳೆದ 9 ವರ್ಷಗಳಲ್ಲಿ ರಾಜ್ಯಾದ್ಯಂತ ಸುಮಾರು 8 ಸಾವಿರ ಕಾರ್ಯಕ್ರಮಗಳನ್ನು ಆಯೋಜಿಸಿ ಯಶಸ್ವಿಗೊಳಿಸಲಾಗಿದ್ದು. ಶಾಲೆ, ಕಾಲೇಜುಗಳಲ್ಲಿ ವಿಕಾಸಕ್ಕಾಗಿ ಜಾನಪದ ಕಾರ್ಯಕ್ರಮ ಆಯೋಜಿಸಿ, ಜಾನಪದ ಕಲೆ, ಕಲಾವಿದರ ಪರಿಚಯ, ಗ್ರಾಮೀಣ ಪ್ರದೇಶದಲ್ಲಿ ಹಬ್ಬಗಳ ವೈಶಿಷ್ಟ್ಯ, ಮಹತ್ವವನ್ನು ತಿಳಿಸುವ ಕಾರ್ಯ ಮಾಡಲಿದೆ ಎಂದರು. ರಂಗಕರ್ಮಿ ಎಚ್. ಎನ್. ಶೇಬನ್ನವರ ಸನ್ಮಾನ ಸ್ವೀಕರಿಸಿ ಮಾತನಾಡಿ, ಜನಪದ ಕಲೆ ಮತ್ತು ಸಾಹಿತ್ಯ ನಮ್ಮ ಉಸಿರಾಗಬೇಕು. ಕಲೆ ಉಳಿದರೆ ಕಲಾವಿದರು ಉಳಿಯಲು ಸಾಧ್ಯ. ನಿಜವಾದ ಕಲಾವಿದರಿಗೆ ಮಾಸಾಶನ ದೊರೆಯಬೇಕು. ಅರ್ಹ ಕಲಾವಿದರು ಮಧ್ಯವರ್ತಿಗಳನ್ನು ತಿರಸ್ಕರಿಸಿ, ನೇರವಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಹೋಗಿ ಅರ್ಜಿ ಹಾಕಿ ಸೌಲಭ್ಯ ಪಡೆದುಕೊಳ್ಳಬೇಕೆಂದು ಹೇಳಿದರು. ಹಿರಿಯ ರಂಗಕರ್ಮಿ ಎಚ್. ಎನ್. ಶೇಬನ್ನವರ, ಸಮಾಜ ಸೇವಕ ಸುರೇಶ ವಸ್ತ್ರದ, ಜಾನಪದ ಕಲಾವಿದ ಪುಟ್ಟು ಹಿರೇಮಠ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು. ಜಾನಪದ ಕಲಾವಿದೆ ಪವಿತ್ರಾ ಜಕ್ಕಪ್ಪನವರ, ಶಿಕ್ಷಕ ಎಂ. ಎಸ್. ಕಲಗುಡಿ ಜಾನಪದ ಹಾಡುಗಳನ್ನು ಹಾಡಿ ರಂಜಿಸುವಲ್ಲಿ ಯಶಸ್ವಿಯಾದರು. ಕಜಾಪ ಜಿಲ್ಲಾ ಕಾರ್ಯದರ್ಶಿ ಆರ್. ಬಿ. ನಬಿವಾಲೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಘಟನಾ ಕಾರ್ಯದರ್ಶಿ ಎಸ್. ಬಿ. ಕೋರಿ ಪರಿಚಯಿಸಿದರು. ವೇದಿಕೆ ಮೇಲೆ ಕಜಾಪ ತಾಲೂಕಾಧ್ಯಕ್ಷ ಎಸ್. ಬಿ. ಕಟಗಿ, ಪದಾಧಿಕಾರಿಗಳಾದ ವಿ. ಜಿ. ಪಾಟೀಲ, ಎಸ್. ಬಿ. ಯಾವಗಲ್ ಮಠ, ಸಂಜಯ ನಡುವಿನಮನಿ, ನಾರಾಯಣ ಯಳ್ಳಿಗುತ್ತಿ, ಮುತ್ತು ಅರಕೇರಿ, ಗುರು ಹಿರೇಮಠ, ಪ್ರಶಾಂತ ಪ್ರಭುಕರ, ಮುತ್ತು ಮಾಚಕನೂರ ಮತ್ತಿತರಿದ್ದರು.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ

**ಮೈಸೂರು:** ನಗರದ ವಿನಾಯಕನಗರ ಸರ್ಕಾರಿ ಪ್ರೌಢಶಾಲೆಯಲ್ಲಿಇತ್ತೀಚೆಗೆ 10ನೇ ತರಗತಿ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ಹಾಗೂ ಪ್ರವೇಶ ಪತ್ರ ವಿತರಣೆ ಸಮಾರಂಭವನ್ನುಆಯೋಜಿಸಲಾಗಿತ್ತು.ಈ ಕಾರ್ಯಕ್ರಮದಲ್ಲಿ ಶಾಲೆಗೆ ಸಹಾಯ ನೀಡುವಂತಹ ಹಲವಾರುಗಣ್ಯರು ಭಾಗವಹಿಸಿದ್ದರು.ಪರೀಕ್ಷೆಗೆ ಹಾಜರಾಗುವಎಲ್ಲ ವಿದ್ಯಾರ್ಥಿಗಳಿಗೆ ಶುಭವನ್ನುಕೋರಿದರು.ಲಯನ್ ವೆಂಕಟೇಶ್ ಪ್ರಸಾದ್ ರವರು ಲೇಖನ ಸಾಮಗ್ರಿಗಳನ್ನು ಒದಗಿಸಿದ್ದರು.ಕೆ.ಆರ್. ಯೋಗಾನರಸಿಂಹನ್ (ಮುರುಳಿ) ಎಲ್ಲರಿಗೂ ಪ್ರಸಾದದ ವ್ಯವಸ್ಥೆಯನ್ನು ಕಲ್ಪಿಸಿದ್ದರು. ಎಂ.ಜಿ.ಮಂಜುನಾಥ್ ಶಾರದಪೂಜೆಯನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ಶಾಲೆಗೆ ಸಹಕಾರ ನೀಡಿದ ಪಣೀಶ್, ಮುಖ್ಯಸ್ಥರು, ಎಡಿನ್ ಬ್ರಿಡ್ಜ್ ಫೌಂಡೇಶನ್ ಹಾಗೂ ಗಣೇಶ್ ಮಂಜುನಾಥ್, ಕ್ಲೊಬರ್ ಲ್ಯೂಬ್ರಿಕೇಶನ್‌ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.ಎಸ್‌ಡಿಎಂಸಿ ಅಧ್ಯಕ್ಷ ಸ್ವಾಮಿ, ಶಾಲಾ ಮುಖ್ಯ ಶಿಕ್ಷಕ ಟಿ.ಜೆ.ಆನಂದ್, ಗುರುಪ್ರಸಾದ್.ಡಿ.ಆರ್.ಶೇಷಾಚಲ, ಜಿತಿನ್ ಸಾಲ್ಡಾನಾ, ಶ್ರೀಮತಿ ಜಯಂತಿ, ವೆಂಕಟಾಚಲ, ಬಾಲಸುಬ್ರಹ್ಮಣ್ಯ, ಗಿರೀಶ್, ಕಾಡುಬಸವ ಟ್ರಾವೆಲ್ಸ್ ಮಾಲೀಕ ಬಸವರಾಜು, ಚೇತನ್, ಸುಬ್ರಹ್ಮಣ್ಯ, ಶ್ರೀಮತಿ ಕಾವ್ಯ, ಶಾಲಾ ಶಿಕ್ಷಕರು, ಕಛೇರಿ ಸಿಬ್ಬಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.ಕನ್ನಡ ಭಾಷಾ ಶಿಕ್ಷಕ ಎಸ್. ಆನಂದಕಾರ್ಯಕ್ರಮ ನಿರೂಪಿಸಿದರು.



# ಮಹಿಳೆಯರ ಪಾತ್ರ ಹಿರಿದು

ಮೈಸೂರು: ನಗರದ ಸ್ವರಲೋಕ ಸಾಂಸ್ಕೃತಿಕ ಕಲಾ ವೇದಿಕೆ ವತಿಯಿಂದಇಂದು ಮೈಸೂರಿನ ಪುರಭವನದಲ್ಲಿ ವಿಶ್ವ ಮಹಿಳಾ ದಿನಾಚರಣೆ ಹಾಗೂ ಕರೋಕೆಗಾಯನ ಸ್ಪರ್ಧೆಯನ್ನುಏರ್ಪಡಿಸಲಾಗಿತ್ತು.

ಕಾರ್ಯಕ್ರಮಕ್ಕೆ ಮುಖ್ಯಅತಿಥಿಯಾಗಿ ಆಗಮಿಸಿದ್ದ ಚಲನಚಿತ್ರ ಹಾಸ್ಯನಟಿ ಶ್ರೀಮತಿ ರೇಖಾದಾಸ್‌ಅವರುಜ್ಯೋತಿ ಬೆಳಗಿಸಿ, ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಎಲ್ಲಾ ರಂಗಗಳಲ್ಲಿಯೂ ಮಹಿಳೆಯರಿಗೆ ಸಮಾನ ಸ್ಥಾನವನ್ನು ಸರ್ಕಾರವುಕಲ್ಪಿಸಿದೆ.ಇದುಅತ್ಯಂತ ಹರ್ಷದಾಯಕ ಸಂಗತಿ.ಮಹಿಳೆಯು ನಾಕೂ ಕೋಣೆಗಳ ಮಧ್ಯೆಜೀವನ ನಡೆಸುತ್ತಿದ್ದ ಕಾಲವೊಂದಿತ್ತು. ಆದರೆ ಪ್ರಸ್ತುತ ದಿನಗಳಲ್ಲಿ ಎಲ್ಲಾ ರಂಗಗಳಲ್ಲಿಯೂ ಮಹಿಳೆಯರು ಹೆಚ್ಚಿನ ಸ್ಥಾನವನ್ನು ಪಡೆದಿದ್ದಾರೆ. ರಾಜಕೀಯ, ಚಲನಚಿತ್ರ, ರಂಗಭೂಮಿ, ನೌಕಾಪಡೆ, ವಾಯುಪಡೆ, ವೈದ್ಯಕೀಯ, ವಿಜ್ಞಾನ ಕ್ಷೇತ್ರಗಳಲ್ಲಿ ಹೆಣ್ಣು ಮಕ್ಕಳು ಗಣನೀಯ ಪ್ರಮಾಣದಲ್ಲಿ ಸಾಧನೆ ಮಾಡಿರುವುದುಇದಕ್ಕೆ ಸಾಕ್ಷಿಯಾಗಿದೆ ಎಂದರು. ಈಗಾಗಲೇ ಚಲನಚಿತ್ರ ಹಾಗೂ ರಂಗಭೂಮಿಯಲ್ಲಿ ಸ್ತ್ರೀ ಪಾತ್ರಗಳ ಅಭಿನಯದಿಂದ ಸಮಾಜದಲ್ಲಿಉತ್ತಮವಾದ, ಆರೋಗ್ಯಕರವಾದ ಬದಲಾವಣೆಯನ್ನು ಕಾಣುತ್ತಿದ್ದೇವೆ ಎಂದು ಅಭಿಪ್ರಾಯಪಟ್ಟರು. ಹಿಂದೆ ಚಲನಚಿತ್ರ ಮತು ರಂಗಭೂಮಿ ಕಲೆಗಳಿಗೆ ಹೆಣ್ಣು ಮಕ್ಕಳ ಅಭಿನಯಕ್ಕೆ ಸಂಖ್ಯೆಕಡಿಮೆಇರುತ್ತಿತ್ತು.ಆದರೆ ಇಂದಿನ ಸ್ಪರ್ಧಾಯುಗದಲ್ಲಿ ಪೈಪೋಟಿ ಹೆಚ್ಚಿ, ಮಹಿಳೆಯರು ಭಾಗವಹಿಸುತ್ತಿರುವುದು ಸಂತೋಷವಾಗಿದೆ ಎಂದರು. ತೀರ್ಪುಗಾರರಾಗಿ ಆಗಮಿಸಿದ್ದ ಹಿನ್ನೆಲೆ ಗಾಯಕಿ ಜೋಗಿ ಸುನಿತಾ ಅವರು ಮಾತನಾಡಿ, ಚಲನಚಿತ್ರ ಮತ್ತುಜಾನಪದ ಕ್ಷೇತ್ರಗಳಲ್ಲಿ ಮಹಿಳೆಯರು ಹೆಚ್ಚು ಗಾಯನ, ಸಂಗೀತ, ನೃತ್ಯ ಕ್ಷೇತ್ರಗಳಲ್ಲಿ ಭಾಗವಹಿಸಿರುವುದು ಹೆಮ್ಮೆಯ ವಿಷಯಎಂದರು.ಕಾರ್ಯಕ್ರಮದಅಧ್ಯಕ್ಷತೆಯನ್ನು ಸ್ವರಲೋಕ ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷರಾದ ಹಾಗೂ ಆಯೋಜಕರಾದ ಯಶಸ್ವಿನಿ ಲೋಕೇಶ್ವರ್ ಅವರು ಮಾತನಾಡಿ, ಕರೋಕೆ ಗೀತೆಗಳನ್ನಾಡಿದ ಗಾಯಕ, ಗಾಯಕಿಯರಿಗೆ ಶುಭ ಹಾರೈಸಿದರು. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳೆಯರಾದ ಡಾ.ರೇಖಾಅರುಣ್, ನಳಿನಿ ತಮ್ಮಯ್ಯ, ಇನ್ಸ್‌ಪೆಕ್ಟರ್ ಮಮತಾ ಹಾಗೂ ಧನಲಕ್ಷ್ಮಿ, ಶುಶ್ರೂಷಕಿಕೆ.ಕೆ.ಯಶೋಧ, ರಂಗಭೂಮಿಕಲಾವಿದೆ ಮೇರಿ ವಸಂತ್, ಪ್ರಾಧ್ಯಾಪಕಿ ಪ್ರಿಯಾಂಕರವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಗೌರವ ಅಧ್ಯಕ್ಷರಾದ ಕಲಾವಿದ ಗೋಪಾಲ್‌ರಾವ್, ಉಪಾಧ್ಯಕ್ಷ ಲೋಕೇಶ್ ಕೆ.ಎಸ್., ವಿಜಯಶ್ರೀ, ಪ್ರಧಾನ ಕಾರ್ಯದರ್ಶಿ ಪ್ರಿಯಾಎಸ್. ಕಾರ್ಯದರ್ಶಿ ಕವಿತಾ, ಖಜಾಂಚಿಅಂಕಿತಾ, ಸಂಘಟನಾ ಕಾರ್ಯದರ್ಶಿ ಶಿವರಾಜ್ ಸಿ.ಎಸ್. ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ 153ಕ್ಕೂ ಹೆಚ್ಚು ವಿವಿಧ ಜಿಲ್ಲೆಗಳಿಂದ ಗಾಯಕ, ಗಾಯಕಿಯರು ಕರೋಕೆಗಾಯನದಲ್ಲಿ ಭಾಗವಹಿಸಿದ್ದರು. ಚಲನಚಿತ್ರ ಹಾಸ್ಯನಟಿ ಶ್ರೀಮತಿ ರೇಖಾದಾಸ್‌ಅವರುಜ್ಯೋತಿ ಬೆಳಗಿಸುತ್ತಿರುವುದು. ಚಿತ್ರದಲ್ಲಿಗಾಯಕಿಜೋಗಿ ಸುನಿತಾ, ಸ್ವರಲೋಕ ಸಾಂಸ್ಕೃತಿಕ ವೇದಿಕೆಯಅಧ್ಯಕ್ಷರಾದ ಹಾಗೂ ಆಯೋಜಕರಾದ ಯಶಸ್ವಿನಿ ಲೋಕೇಶ್ವರ್, ಗೌರವಅಧ್ಯಕ್ಷರಾದಕಲಾವಿದಗೋಪಾಲ್‌ರಾವ್, ಉಪಾಧ್ಯಕ್ಷ ಲೋಕೇಶ್‌ಕೆ.ಎಸ್., ವಿಜಯಶ್ರೀ, ಪ್ರಧಾನ ಕಾರ್ಯದರ್ಶಿ ಪ್ರಿಯಾಎಸ್. ಕಾರ್ಯದರ್ಶಿ ಕವಿತಾ, ಖಜಾಂಚಿಅಂಕಿತಾ, ಸಂಘಟನಾ ಕಾರ್ಯದರ್ಶಿ ಶಿವರಾಜ್ ಸಿ.ಎಸ್. ರವರನ್ನುಕಾಣಬಹುದು.



# ರಾಜ್ಯಮಟ್ಟದ ನೆಟ್‌ಬಾಲ್ ಪಂದ್ಯಾವಳಿ ಆಯೋಜನೆ

**ಚಾಮರಾಜನಗರ:** ಚಾಮರಾಜನಗರದಲ್ಲಿ ರಾಜ್ಯಮಟ್ಟದ ನೆಟ್ ಬಾಲ್ ಪಂದ್ಯಾವಳಿಯನ್ನು ಮೇ ತಿಂಗಳಿನಲ್ಲಿ ಆಯೋಜಿಸಲಾಗುವುದು ಎಂದು ನೆಟ್‌ಬಾಲ್ ಅಸೋಸಿಯೇಷನ್‌ನ ಗೌರವಾಧ್ಯಕ್ಷೆ ನರ್ಗಿಸ್‌ಬಾನು ತಿಳಿಸಿದರು.

ಚಾಮರಾಜನಗರ ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್‌ನ ವತಿಯಿಂದ ನಗರದ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಲಾಗಿದ್ದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಮೇ ತಿಂಗಳಿನಲ್ಲಿ ರಾಜ್ಯಮಟ್ಟದ ಪಂದ್ಯಾವಳಿಯನ್ನು ನಡೆಸುವಂತೆ ರಾಜ್ಯ ಮಟ್ಟದ ಅಸೋಸಿಯೇಷನ್‌ನಿಂದ ಚಾಮರಾಜನಗರ ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್‌ಗೆ ಅವಕಾಶ ದೊರೆತಿದೆ. ಅದಕ್ಕೆ ತಕ್ಕಂತೆ ಎಲ್ಲಾ ರೀತಿಯಲ್ಲೂ ರೂಪುರೇಷೆಗಳನ್ನು ಸಿದ್ದಪಡಿಸುವ ಸಲುವಾಗಿ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ ಎಂದರು.

ಚಾಮರಾಜನಗರದಲ್ಲಿ ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್ ಅಸ್ತಿತ್ವಕ್ಕೆ ಬಂದ ನಂತರ ಇದೇ ಮೊದಲ ಬಾರಿಗೆ ರಾಜ್ಯಮಟ್ಟದ ನೆಟ್‌ಬಾಲ್ ಪಂದ್ಯಾವಳಿಯನ್ನು ನಡೆಸುವ ಅವಕಾಶ ಸಿಕ್ಕಿರುವುದು ಸಂತಸದ ವಿಷಯ. ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ನಮ್ಮ ಸಂಘ ಅಸ್ತಿತ್ವಕ್ಕೆ ಬಂದ ನಂತರ ರಾಜ್ಯ ಮಟ್ಟದ ಪಂದ್ಯಾವಳಿಯನ್ನು ನಮ್ಮ ಜಿಲ್ಲೆಯಲ್ಲಿ ಆಯೋಜಿಸಿರುವುದು ಹೆಮ್ಮೆಯ ವಿಚಾರ ಜೊತೆಗೆ ನಮ್ಮ ಸಂಘ ಬೆಳೆವಣಿಗೆಗೂ ಕೂಡಾ ಉತ್ತಮ ಅವಕಾಶ ಎಂದರು.

ಮಧ್ಯಪ್ರದೇಶದ ಇಂದೋರ್ ಕಾರ್ಗಲ್ ಜಿಲ್ಲೆಯ ಬೋರವ ಜವಾಹರ್‌ಲಾಲ್ ನೆಹರೂ ಇನ್ಸಿಟ್ಯೂಟ್‌ನಲ್ಲಿ ಕಳೆದ ಎರಡು




ತಿಂಗಳ ಹಿಂದೆ ನಡೆದ ರಾಷ್ಟ್ರಮಟ್ಟದ ನೆಟ್ ಬಾಲ್ ಪಂದ್ಯಾವಳಿಯಲ್ಲಿ ನಮ್ಮ ಜಿಲ್ಲೆಯ ಕ್ರೀಡಾಪಟುಗಳು ಪ್ರತಿನಿಧಿಸುವ ಮೂಲಕ ಪ್ರಶಸ್ತಿಯನ್ನೂ ಪಡೆದುಕೊಂಡಿದ್ದರು. ಈ ಬಾರಿ ರಾಜ್ಯಮಟ್ಟದ ಪಂದ್ಯಾವಳಿ ನಮ್ಮ ಜಿಲ್ಲೆಯಲ್ಲಿ ಆಯೋಜಿಸುವ ಮೂಲಕ ನಮ್ಮ ಜಿಲ್ಲೆಯ ಕ್ರೀಡಾಪಟುಗಳಿಗೆ ಉತ್ತಮ ಅವಕಾಶ ದೊರಕಿದೆ. ಚಾಮರಾಜನಗರ ಜಿಲ್ಲೆಯಿಂದ ಉತ್ತಮ ಪಂದ್ಯಾವಳಿಯನ್ನು ಆಯೋಜಿಸಲು ಹಲವಾರು ಸದಸ್ಯರು ನೀಡಿರುವಂತಹ ಸಲಹೆಯೊಂದಿಗೆ ರೂಪುರೇಷೆಗಳನ್ನು ಮುಂದಿನ ಹಂತದಲ್ಲಿ ಸಿದ್ದಪಡಿಸಲಾಗುವುದು ಎಂದರು.

ಅಸೋಸಿಯೇಷನ್‌ನ ಅಧ್ಯಕ್ಷರಾದ ವಿ.ಶ್ರೀನಿವಾಸಪ್ರಸಾದ್ ಮಾತನಾಡಿ, ರಾಜ್ಯಾದ್ಯಂತ ನಮ್ಮ ಜಿಲ್ಲೆಗೆ ಬರುವಂತಹ ಕ್ರೀಡಾಪಟುಗಳಿಗೆ ಯಾವುದೇ ಕೊರತೆಗಳು ಆಗದಂತೆ ಊಟ, ವಸತಿ, ಅಂಕಣದ ವ್ಯವಸ್ಥೆ ಸೇರಿದಂತೆ ಎಲ್ಲಾ ವ್ಯವಸ್ಥೆಗಳನ್ನು ಮಾಡುವಂತೆ ಸಲಹೆ ನೀಡಿದರು.

ಸಭೆಯಲ್ಲಿ ಪ್ರಧಾನ ಕಾರ್ಯದರ್ಶಿ ಮಹದೇವಪ್ರಸಾದ್.ಬಿ, ಮಾತನಾಡಿ, ರಾಜ್ಯಮಟ್ಟದ ನೆಟ್‌ಬಾಲ್ ಅಸೋಸಿಯೇಷನ್ ನಿಂದ ಇತ್ತೀಚೆಗೆ ನಡೆದ ಸಭೆಯಲ್ಲಿ ಅಂಡರ್ 19 ಹಾಗೂ ಫಾಸ್ಟ್ 5 ನೆಟ್‌ಬಾಲ್ ಪಂದ್ಯಾವಳಿ ನಡೆಸುವ ಜವಾಬ್ದಾರಿಯನ್ನು ನಮ್ಮ ಜಿಲ್ಲೆಗೆ ನೀಡಿದೆ. ಈ ಸುವರ್ಣಾವಕಾಶವನ್ನು ಬಳಸಿಕೊಂಡು ಜವಾಬ್ದಾರಿಯುತವಾಗಿ ಉತ್ತಮ ರೀತಿಯಲ್ಲಿ ಪಂದ್ಯಾವಳಿಯನ್ನು ನಡೆಸುವ ಮೂಲಕ ಜಿಲ್ಲೆಗೆ ಕೀರ್ತಿ ತರುವುದು ಮುಖ್ಯ ಉದ್ದೇಶವಾಗಿದೆ. ಮುಂದಿನ ದಿನಗಳಲ್ಲಿ ರಾಷ್ಟ್ರಮಟ್ಟದ ಪಂದ್ಯಾವಳಿಗೆ ಅವಕಾಶ ದೊರಕುವ ಸಾಧ್ಯತೆ ಇದೆ ಎಂದರು.

ಈ ಸಂದರ್ಭದಲ್ಲಿ ಖಜಾಂಚಿ ಎಂ.ಸಿ.ಮಹದೇವಸ್ವಾಮಿ, ಸದಸ್ಯರಾದ ಶ್ರೀಧರ್, ಸಂತೋಷ್, ನಾಗೇಂದ್ರ ಸಿ., ರೂಪಾ.ಎಸ್., ಸುರೇಶ್, ಲೋಕೇಶ್, ಮಧುಕುಮಾರ್, ಸೇರಿದಂತೆ ಮತ್ತಿತರರಿದ್ದರು.

## ದೇವನಹಳ್ಳಿಯಲ್ಲಿ 2500 ಕೋಟಿ ರೂ ವೆಚ್ಚದಲ್ಲಿ ಮೆಗಾ ರೈಲ್ವೇ ಟರ್ಮಿನಲ್ ನಿರ್ಮಾಣ

ಬೆಂಗಳೂರು: ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಇರುವ ಬೆಂಗಳೂರು ಹೊರವಲಯದ ದೇವನಹಳ್ಳಿಯಲ್ಲಿ ಸುಮಾರು 2500 ಕೋಟಿ ರೂ ವೆಚ್ಚದಲ್ಲಿ ಮೆಗಾ ರೈಲ್ವೇ ಟರ್ಮಿನಲ್ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಹೌದು.. ನಗರದ ಇತರ ಪ್ರಮುಖ ರೈಲು ನಿಲ್ದಾಣಗಳಲ್ಲಿ ದಟ್ಟಣೆಯನ್ನು ಕಡಿಮೆ ಮಾಡಲು ಬೆಂಗಳೂರು ರೈಲ್ವೆ ವಿಭಾಗವು ನಿರ್ವಹಣಾ ಸೌಲಭ್ಯಗಳೊಂದಿಗೆ ದೇವನಹಳ್ಳಿಯಲ್ಲಿ ದೊಡ್ಡ ಟರ್ಮಿನಲ್ ಅನ್ನು ಯೋಜಿಸುತ್ತಿದೆ. ಇದಕ್ಕೆ ಸುಮಾರು 2,500 ಕೋಟಿ ರೂಪಾಯಿ ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ. ಅದರ ಕಾರ್ಯಸಾಧ್ಯತೆಯ ಅಧ್ಯಯನವು ಬಹುತೇಕ ಪೂರ್ಣಗೊಂಡಿದೆ ಎಂದು ರೈಲ್ವೆ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ಕುರಿತು ರೈಲ್ವೇ ಅಧಿಕಾರಿಯೊಬ್ಬರು ದಿ ನ್ಯೂ ಇಂಡಿಯನ್ ಎಕ್ಸ್ ಪ್ರೆಸ್ ನೊಂದಿಗೆ ಮಾತನಾಡಿದ್ದು, 'ಇದನ್ನು ವಿಕಸಿತ ಭಾರತ ಯೋಜನೆಯಡಿಯಲ್ಲಿ ಕಲ್ಪಿಸಲಾಗಿದೆ. ಸುಮಾರು 200 ಎಕರೆಯಲ್ಲಿ ಈ ರೇಲ್ವೇ ಮೆಗಾ ಟರ್ಮಿನಲ್ ನಿರ್ಮಿಸಲು ಮುಂದಾಗಿದ್ದು, ಭೂಮಿ ಲಭ್ಯತೆ ಕುರಿತು ಕೆಲಸ ಮಾಡುತ್ತಿದ್ದೇವೆ. ಇದು ರೈಲುಗಳನ್ನು ಓಡಿಸಲು ಕನಿಷ್ಠ 10 ಪ್ಲಾಟ್‌ಫಾರ್ಮ್‌ಗಳನ್ನು ಹೊಂದಿರುತ್ತದೆ. ಒಮ್ಮೆ ಸ್ಥಳಾಂತರಗೊಂಡರೆ, ಇದು ಏಖಖ ಬೆಂಗಳೂರು, ಯಶವಂತಪುರ ಮತ್ತು ಬೆಂಗಳೂರು ಕಂಟೋನ್ಮೆಂಟ್ ರೈಲು ನಿಲ್ದಾಣಗಳ ದಟ್ಟಣೆಯನ್ನು ಕಡಿಮೆ ಮಾಡುತ್ತದೆ ಎಂದು ಹೇಳಿದ್ದಾರೆ. ಅಂತೆಯೇ ನಾವು ಅಸ್ತಿತ್ವದಲ್ಲಿರುವ ದೇವನಹಳ್ಳಿ ನಿಲುಗಡೆ ನಿಲ್ದಾಣದಿಂದ 4 ಅಥವಾ 5 ಕಿಮೀ ದೂರದಲ್ಲಿರುವ ಸ್ಥಳವನ್ನು ಹುಡುಕುತ್ತಿದ್ದೇವೆ. ಈ ಯೋಜನೆಯು ರೈಲ್ವೆ ಮಂಡಳಿಯಿಂದ ಅನುಮೋದನೆ ಪಡೆಯಬೇಕಾಗಿದೆ ಮತ್ತು ನಂತರ ಕೇಂದ್ರ ಸಚಿವ ಸಂಪುಟದ ಅನುಮೋದನೆ ಪಡೆಯಬೇಕಿದೆ ಎಂದು ಅವರು ಹೇಳಿದರು. ಇದು ನಗರಕ್ಕೆ ಪ್ರಸ್ತಾಪಿಸಲಾದ 287-ಕಿಮೀ ವೃತ್ತಾಕಾರದ ರೈಲ್ವೆ ಯೋಜನೆಯಲ್ಲಿ ಬರಲಿದ್ದು, ಟರ್ಮಿನಲ್ ನಿರ್ಮಾಣ ಯೋಜನೆ ಜಾರಿ ವಿಳಂಬವಾಗುವುದಿಲ್ಲ. ಸ್ವತಂತ್ರವಾಗಿ ನಿರ್ಮಿಸಲಾಗುವುದು. ಸಮೀಪದ ಇತರ ರೈಲು ನಿಲ್ದಾಣಗಳಿಂದ ಬೈಪಾಸ್ ರೈಲು ಮಾರ್ಗಗಳ ಮೂಲಕ ಟರ್ಮಿನಲ್ ಅನ್ನು ಸಂಪರ್ಕಿಸಲು ಯೋಜನೆ ನಡೆಯುತ್ತಿದೆ ಎಂದು ಅವರು ಹೇಳಿದರು. ಕಳೆದ ವರ್ಷ ನವೆಂಬರ್‌ನಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಘೋಷಿಸಿದ ವೃತ್ತಾಕಾರದ ರೈಲ್ವೆ ಯೋಜನೆಯು ನಿಡವಂಡ, ದೊಡ್ಡಬಳ್ಳಾಪುರ, ದೇವನಹಳ್ಳಿ, ಮಾಲೂರು, ಹೀಲಲಿಗೆ ಮತ್ತು ಸೋಲೂರನ್ನು ಸಂಪರ್ಕಿಸುವ ಮೂಲಕ ನಗರದ ಜನದಟ್ಟಣೆಯನ್ನು ಕಡಿಮೆ ಮಾಡುವ ಗುರಿಯನ್ನು ಹೊಂದಿದೆ. ವೃತ್ತವು ನಿಡ್ವಂಡದಲ್ಲಿ ಕೊನೆಗೊಳ್ಳುತ್ತದೆ. ವೃತ್ತಾಕಾರದ ಯೋಜನೆಯು ಜಾರಿಯಲ್ಲಿರುವಾಗ, ಇಲ್ಲಿಗೆ ರೈಲುಗಳನ್ನು ಸ್ಥಳಾಂತರಿಸುವುದು ತುಂಬಾ ಸುಲಭ. ಪ್ರಸ್ತುತ ಯೋಜನೆಯ ಕಾರ್ಯಸಾಧ್ಯತೆಯ ಅಧ್ಯಯನ ನಡೆಯುತ್ತಿದೆ ಎಂದರು.



# ಜನ ಸಾಮಾನ್ಯರ ಧ್ವನಿಯೇ ಜಾನಪದ ಸಂಪತ್ತು : ಶ್ರೀ ರಂಭಾಪುರಿ ಜಗದ್ಗುರುಗಳು

**ರಂಭಾಪುರಿ ಪೀಠ(ಬಾಳೆಹೊನ್ನೂರು)**

ನೀರು ಅನ್ನ ಮತ್ತು ಒಳ್ಳೆಯವರ ಮಾತು ಜೀವನ ಉನ್ನತಿಗೆ ಅವಶ್ಯಕ. ಭೌತಿಕ ಆಸ್ತಿ ಸಿರಿ ಸಂಪತ್ತು ನಾಶವಾಗಿ ಹೋಗಬಹುದು. ಗ್ರಾಮೀಣ ಜನರ ಬಾಯಿಂದ ಬಂದ ಸಾಹಿತ್ಯವೇ ನಿಜವಾದ ಜಾನಪದ ಸಾಹಿತ್ಯ. ಇವುಗಳಲ್ಲಿರುವ ಆಧ್ಯಾತ್ಮ ಚಿಂತನೆಗಳು ಜೀವನ ಶ್ರೇಯಸ್ಸಿಗೆ ಅಡಿಪಾಯವಾಗಿವೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಭಾನುವಾರ ಶ್ರೀ ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಜಾನಪದ ಹಬ್ಬ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವನ ಬದುಕು ದೀಪದಂತೆ ಪರಿಶುದ್ಧವಾಗಬೇಕು. ಬೆಳಕು ಎಲ್ಲಿ ಬಿದ್ದರೂ ಮಲಿನವಾಗುವುದಿಲ್ಲ. ಈ ದೇಹ ಶಿವನಿರುವ ಶಿವಾಲಯ. ಸೂರ್ಯ ಚಂದ್ರರ ಬೆಳಕು ಬೆಳೆಯುವ ಭೂಮಿ ಮಳೆ ಸುರಿಸುವ ಮೋಡ ಬೀಸುವ ಗಾಳಿ ಯಾವಾಗಲೂ ತಮ್ಮ ಕಾರ್ಯವನ್ನು ಮಾಡುತ್ತಲೆ ಬಂದಿವೆ. ಆದರೆ ನಾ ಮಾಡಿದೆ ಎಂದು ಎಲ್ಲಿಯೂ ಹೇಳಿಲ್ಲ. ಆದರೆ ಮನುಷ್ಯ ಮಾತ್ರ ಎಲ್ಲೆಡೆಯೂ ತನ್ನ ಹೆಸರು ಇರಬೇಕೆಂದು ಬಯಸುತ್ತಾನೆ. ದುರಾಸೆಯಿಂದ ದೂರವಾದಾಗ ಮಾತ್ರ ಈ ದೇಹ ದೇವಾಲಯವಾಗಲು ಸಾಧ್ಯ. ನೋವು ನಲಿವು ಪಾಪ ಪುಣ್ಯ ಸುಖ ದು:ಖ ಯಾರನ್ನೂ ಬಿಟ್ಟಿಲ್ಲ. ಕರಡಿಯನ್ನು ಕಂಬಳಿಯೆಂದು ಹಿಡಿಯಲು ಹೋದರೆ ಆಘಾತ ತಪ್ಪಿದ್ದಲ್ಲ. ಸಂಸಾರವೆಂಬ ಕರಡಿಯನ್ನು ಕೊರಳಿಗೆ ಹಾಕಿಕೊಂಡು ಪಾರಾಗುವುದಕ್ಕೆ ಪ್ರಾರ್ಥನೆಯೊಂದೇ ದಾರಿ. ಬಹಿರಂಗದ ಭೌತಿಕ ಸಂಪತ್ತು ಒಂದಲ್ಲ ಒಂದು ದಿನ ಮನುಷ್ಯನ ಕೈಬಿಟ್ಟು ಹೋಗುತ್ತದೆ. ಮನುಷ್ಯ ಜಾಗೃತನಾಗಿ ಸತ್ಕಾರ್ಯ ಮಾಡಿ ಧರ್ಮವನ್ನು ಸಂಪಾದಿಸಬೇಕು. ಮೌಲ್ಯಾಧಾರಿತ ನೆಮ್ಮದಿಯ ಬದುಕಿಗೆ ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಚಿಂತನೆಗಳು ಎಲ್ಲರಿಗೂ ಆಶಾಕಿರಣವಾಗಿವೆ. ಅರಿತು ಆಚರಿಸಿ ಬದುಕನ್ನು



ಸಾರ್ಥಕಪಡಿಸಿಕೊಳ್ಳಲು ಪ್ರಯತ್ನಿಸುವುದು ಶ್ರೇಯಸ್ಕರ ಎಂದ ಅವರು ಸಾಮಾನ್ಯ ಜನರಿಂದ ಹೊರ ಹೊರಮಮ್ಮಿ ಬಂದ ಜಾನಪದ ಸಂಪತ್ತು ಸರ್ವ ಕಾಲಕ್ಕೂ ಸರ್ವರಿಗೂ ಅನ್ವಯಿಸುತ್ತವೆ. ಜಾನಪದ ಸಾಹಿತ್ಯದಲ್ಲಿರುವ ಆಧ್ಯಾತ್ಮ ಚಿಂತನೆ ನೈತಿಕ ವಿಚಾರ ಧಾರೆ ಬದುಕಿ ಬಾಳುವ ಜನ ಸಮುದಾಯಕ್ಕೆ ಸ್ಫೂರ್ತಿ ತಂದು ಕೊಡುತ್ತವೆ ಎಂದರು.

ಸಮಾರಂಭವನ್ನು ಉದ್ಘಾಟಿಸಿದ ಜಾನಪದ ತಜ್ಞ ಡಾ|| ರಾಮು ಮೂಲಗಿ ಮಾತನಾಡಿ ಜಾನಪದ ಸಾಹಿತ್ಯ ವಿದ್ವಾಂಸರಿಂದ ಬಂದುದಲ್ಲ. ಹಳ್ಳಿಯ ಪರಿಸರದಲ್ಲಿ ಬೆಳೆದು ಸಾಮಾನ್ಯರಿಂದ ಹೊರ ಬಂದುದು ಜಾನಪದ ಸಂಪತ್ತು. ಅದನ್ನು ಬೆಳೆಸುವ ಕಾರ್ಯ ಎಲ್ಲರೂ ಮಾಡಬೇಕಾಗಿದೆ ಎಂದ ಅವರು ಹಲವಾರು ಜಾನಪದ ಗೀತೆಗಳನ್ನು ಪ್ರಸ್ತುಡಪಡಿಸಿದರು.

ತರೀಕೆರೆ ಶಾಸಕ ಡಿ.ಹೆಚ್.ಶ್ರೀನಿವಾಸ ಮಾತನಾಡಿ ಶ್ರೀ ರಂಭಾಪುರಿ ಪೀಠ ಪ್ರಖ್ಯಾತಿ ಹೊಂದಿದೆ. ಸಾವಿರಾರು ವರುಷಗಳ ಇತಿಹಾಸ ಹೊಂದಿದೆ. ಶ್ರೀ ಜಗದ್ಗುರುಗಳ ಮೂಲಕ ಶ್ರೀ ಜಗದ್ಗುರು ರೇಣುಕಾಚಾರ್ಯರನ್ನು ಕಾಣಲು ಸಾಧ್ಯವಾಗಿದೆ. ಶ್ರೀ ಸನ್ನಿಧಿಯವರ ಆದೇಶ ಪಾಲನೆ ಮಾಡುವ ಲಕ್ಷಾಂತರ ಭಕ್ತರು ಇದ್ದಾರೆ. ಸರ್ವ ಸಮುದಾಯದ ಜನತೆ ಶಾಂತಿ ಸೌಹಾರ್ದತೆಯಿಂದ ಬಾಳುವಂತೆ ಆಶೀರ್ವದಿಸುತ್ತಿರುವುದು ನಮ್ಮ ಸೌಭಾಗ್ಯವಾಗಿದೆ ಎಂದರು.

ನೇತೃತ್ವ ವಹಿಸಿದ ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಜೀವನ ಆದರ್ಶಗಳನ್ನು ಮರೆತರೆ ಜೀವನ ಬರಡು. ಹಿರಿಯರ ಆದರ್ಶ ಚಿಂತನಗಳ ನುಡಿ ಜೀವನೋತ್ಸಾಹಕ್ಕೆ ಕಾರಣವಾಗಿವೆ ಎಂದರು.

ಶಿರಕೋಳ ಹಿರೇಮಠದ ಗುರುಸಿದ್ದೇಶ್ವರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ಮಾತನಾಡುತ್ತ ಆರೋಗ್ಯ ಪೂರ್ಣ ಸಮಾಜ ನಿರ್ಮಾಣಕ್ಕೆ ನೈತಿಕ ನೀತಿ ರೀತಿಗಳ ಸದ್ವರ್ತನೆ ಮುಖ್ಯ. ಸನ್ಮಾರ್ಗದ ಸತ್ಪಥದಲ್ಲಿ ಮುನ್ನಡೆಸುವುದೇ ನಿಜವಾದ ಧರ್ಮ ಎಂದರು. ಲಿಂಗಸುಗೂರು ಶ್ರೀ ಮಾಣಿಕ್ಯೇಶ್ವರಿ ಆಶ್ರಮದ ಮಾತಾ ನಂದಿಕೇಶ್ವರಿ ಅಮ್ಮನವರು, ವಾಣಿ ಶ್ರೀನಿವಾಸ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ರಾಯಚೂರು ಮಂಗಳವಾರ ಪೇಟೆ ವೀರಸಂಗಮೇಶ್ವರ ಶಿವಾಚಾರ್ಯ ಸ್ವಾಮಿಗಳು, ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು, ಮೊಳಹಳ್ಳಿಯ ನಿರ್ಮಲಮ್ಮ-ಕೆ.ಶಿವಲಿಂಗಯ್ಯ, ಹುಬ್ಬಳ್ಳಿಯ ಚನ್ನಯ್ಯ ಚನ್ನವೀರಯ್ಯ ಹಿರೇಮಠ ಸಹೋದರರು, ಯಲಿವಾಳದ ಶ್ರೀಕಂಠಗೌಡ್ರು ಹಿರೇಗೌಡ್ರ. ತಿರುಮಲಕೊಪ್ಪದ ವೇ||ಗುರುಸಿದ್ಧಯ್ಯ ಹಿರೇಮಠ ಇವರಿಗೆ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಹರ್ಲಾಪುರದ ಸಾಂಬಯ್ಯ ಹಿರೇಮಠ ಇವರು ಜೀವನದಲ್ಲಿ ಹಾಸ್ಯ ಹೇಗೆ ಹಾಸುಹೊಕ್ಕಾಗಿದೆ ಎಂಬುದನ್ನು ಹಾಸ್ಯ ಪ್ರಸಂಗಗಳೊಂದಿಗೆ ವಿವರಿಸಿದರು. ಚಿಕ್ಕಮಗಳೂರಿನ ನಿವೃತ್ತ ಶಿಕ್ಷಕ ಆರ್.ಷಡಕ್ಷರಿ ಸ್ವಾಗತಿಸಿದರು. ಹುಬ್ಬಳ್ಳಿಯ ಶಿವಸ್ವಾಮಿ ಹಿರೇಮಠ ಇವರಿಂದ ಭಕ್ತಿ ಗೀತೆ ಜರುಗಿತು. ಹುಬ್ಬಳ್ಳಿಯ ಜಿ.ವಿ.ಹಿರೇಮಠ ಮೈಸೂರಿನ ಸಿ.ಹೆಚ್. ರೇಣುಕಾ ಪ್ರಸಾದ್ ನಿರೂಪಿಸಿದರು.

ಮಧ್ಯಾಹ್ನ ಶ್ರೀ ಶಿವಾನಂದ ಎಸ್ಟೇಟಿನಲ್ಲಿ ಪೂಜಾ ಪ್ರಸಾದ ನಡೆಯಿತು. ಸಂಜೆ ಗೋವಿನಕೋವಿ ಬಸವಣ್ಣನ ದೇವಸ್ಥಾನದ ಪ್ರಾಂಗಣದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಕೆಂಡಾರ್ಚನೆ ಜರುಗಿತು.

# ಉತ್ಪ್ರೇಕ್ಷೆಯಿಲ್ಲದ 'ಆಲಿಂಡಿಯಾ ರೇಡಿಯೋ'

**ಬೆಂಗಳೂರು:** ಯಾವುದೇ ಉತ್ಪ್ರೇಕ್ಷೆಗಳಿಲ್ಲದೆ ಮತ್ತು ಯಾವುದೇ ತರಹದ ರಂಜನೆಗಳಿಲ್ಲದೇ ತುಂಬ ನಿಷ್ಠೆಯಿಂದ ಪ್ರಾದೇಶಿಕ ಜನ ಜೀವನ ಸೆರೆ ಹಿಡಿಯುವಲ್ಲಿ 'ಆಲಿಂಡಿಯಾ ರೇಡಿಯೋ' ಸಿನಿಮಾ ಯಶಸ್ವಿಯಾಗಿದೆ ಎಂದು ಚಲನಚಿತ್ರ ರಂಗದ ಹಿರಿಯ ನಿರ್ದೇಶಕ ಗಿರೀಶ ಕಾಸರವಳ್ಳಿ ಹೇಳಿದರು.

ಬೆಂಗಳೂರು ಅಂತಾರಾಷ್ಟ್ರೀಯ ಫಿಲಂ ಫೆಸ್ಟಿವಲ್ ನಲ್ಲಿ ಅತ್ಯುತ್ತಮ ಮೂರನೇ ಚಿತ್ರವೆಂದು ಪ್ರಶಸ್ತಿ ಪಡೆದ 'ಆಲಿಂಡಿಯಾ ರೇಡಿಯೋ' ಸಿನಿಮಾವನ್ನು ನಗರದ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ಪ್ರದರ್ಶನ ನಂತರ ನಡೆದ ಸಂವಾದದಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ಭಾಗದ ಕತೆಗಾರ ಅಮರೇಶ ನುಗಡೋಣಿ ಅವರ ಕಥೆಯನ್ನಾಧರಿಸಿ, ಚಾಮರಾಜನಗರದ ನೆಲದ ಭಾಷೆಯನ್ನು ಸಮರ್ಥವಾಗಿ ಬಳಸಿಕೊಂಡು, ನಿರ್ದೇಶಕ ರಂಗಸ್ವಾಮಿ ಎಸ್. ಯಶಸ್ವಿಯಾಗಿದ್ದಾರೆ ಎಂದು ಶ್ಲಾಘಿಸಿದರು.

ಸಂವಾದದಲ್ಲಿ ಭಾಗವಹಿಸಿದ್ದ ಇನ್ನೋರ್ವ ನಿರ್ದೇಶಕ ಪಿ.ಶೇಷಾದ್ರಿ, ಮಾತನಾಡಿ, ಬಹುದಿನಗಳವರೆಗೆ ಕಾಡುವ ಸಿನಿಮಾ ಇದು. ಈ ಚಿತ್ರಕ್ಕೆ ಇಬ್ಬರು ಹಿರೋಗಳಿದ್ದಾರೆ. ಒಬ್ಬರು ಪಿಚ್ಚಳ್ಳಿ ಶ್ರೀನಿವಾಸ ಮತ್ತು ಇನ್ನೊಬ್ಬರು ನಿರ್ದೇಶಕ ರಂಗಸ್ವಾಮಿ. ಮಂಟೇಸ್ವಾಮಿಯ ಜಾನಪದ ಕಾವ್ಯದ ಸೊಗಡು, ಪ್ರಾದೇಶಿಕ ಭಾಷೆಯ ಬಳಕೆ ಅನನ್ಯವಾಗಿದೆ. ಈ ಮಣ್ಣಿನಿಂದ ಎದ್ದುಬಂದವರಂತೆ ನಟವರ್ಗದವರು ಕಾಣುತ್ತಾರೆ. ಸಂಗೀತ ಚಿತ್ರದುದ್ದಕ್ಕೂ ನದಿಯಾಗಿ ಹರಿಯುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹಿರಿಯ ನಿರ್ದೇಶಕ ಕೇಸರಿ ಹರವೂ, ರಂಗ ತಜ್ಞರಾದ ಸಿ.ಕೆ.




> " ತುಂಬ ಒಳ್ಳೆಯ ಸಿನಿಮಾ. ಪ್ರಾದೇಶಿಕ ಭಾಷೆಯನ್ನು ಚೆನ್ನಾಗಿ ದುಡಿಸಿಕೊಳ್ಳಲಾಗಿದೆ. ಸಾಂಸ್ಕೃತಿಕ ಆವರಣದಲ್ಲಿ ಜನ ಮತ್ತು ಕುಟುಂಬದ ಬದುಕು ಹೆಣೆದುಕೊಂಡ ರೀತಿ, ಗೋಜಲು, ದುರಂತ ಎಲ್ಲವೂ ಎಚ್ಚರಿಕೆಯಿಂದ ಕಟ್ಟಿಕೊಡಲಾಗಿದೆ.
>
> । ಅಗ್ರಹಾರ ಕೃಷ್ಣಮೂರ್ತಿ

ಗುಂಡಣ್ಣ, ಶ್ರೀನಿವಾಸ ಜಿ.ಕಪ್ಪಣ್ಣ, ಮತ್ತು ನಟ, ಪತ್ರಕರ್ತ, ಸಾಹಿತಿಗಳಾದ ಕಲಬುರಗಿಯ ಮಹಿಪಾಲರೆಡ್ಡಿ ಸೇಡಂ ಮಾತನಾಡಿದರು. ಕಥೆಗಾರ ಅಮರೇಶ ನುಗಡೋಣಿ ತಮ್ಮ ಎರಡು ಕತೆಗಳನ್ನು ಬಳಸಿಕೊಂಡಿರುವ ಬಗ್ಗೆ ಕೃತಜ್ಞತೆ ಸಲ್ಲಿಸಿದರು.

ನಿರ್ದೇಶಕ ರಂಗಸ್ವಾಮಿ ಮಾತನಾಡಿ, ಸಂವಾದದಲ್ಲಿ ಪಾಲ್ಗೊಂಡಿದ್ದರು. ರಂಗ ಕಲಾವಿದ ಮಲ್ಲಿಕಾರ್ಜುನ ಮಹಾಮನೆ ಅವರು ಕಾರ್ಯಕ್ರಮ ನಡೆಸಿಕೊಟ್ಟರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಮಾಜಿ ನಿರ್ದೇಶಕ ವಿಶುಕುಮಾರ, ಡಾ.ಬಸವರಾಜ ಸಾದರ, ಲೇಖಕರಾದ ಅಗ್ರಹಾರ ಕೃಷ್ಣಮೂರ್ತಿ, ಎಚ್.ಆರ್.ಸುಜಾತಾ, ಸವಿತಾ ನುಗಡೋಣಿ, ಆರ್.ಜಿ.ಹಳ್ಳಿ ನಾಗರಾಜ್, ಮಂಜು ಪಾಂಡವಪುರ, ಜೀವನ್ಮುಖಿ ಸುರೇಶ, ಡಾ.ಕಲ್ಯಾಣರಾವ ಪಾಟೀಲ, ಪ್ರೊ.ಚಂದ್ರಶೇಖರ ಬಿರಾದಾರ ಭಾಲ್ಕಿ ಇತರರಿದ್ದರು. ನಟ ಗೌತಮ್ ಮೈಸೂರು, ನಿರ್ಮಾಪಕ ಯೋಗಿ ದೇವಗಂಗೆ, ಛಾಯಾಗ್ರಹಣ ಮಾಡಿದ ಅಚ್ಚು ಸುರೇಶ ಸೇರಿದಂತೆ ಅನೇಕರಿದ್ದರು. ಇದಕ್ಕೂ ಮುನ್ನ 'ಆಲಿಂಡಿಯಾ ರೇಡಿಯೋ' ಸಿನಿಮಾ ಪ್ರದರ್ಶಿಸಲಾಯಿತು.

# ಪೂರ್ವ ಪ್ರಾಥಮಿಕ ಶಿಕ್ಷಣ ಮಕ್ಕಳ ಬೆಳವಣಿಗೆಗೆ ಪೂರಕ

**ಮೈಸೂರು:** ನಗರದ ಆಲನಹಳ್ಳಿ ಬಡಾವಣೆಯಲ್ಲಿರುವ ಯುರೋಕಿಡ್ಸ್ ಶಾಲೆಯ ಪ್ರಥಮ ವಾರ್ಷಿಕೋತ್ಸವ ಸಮಾರಂಭಜಗನ್ಮೋಹನ ಆಅರಮನೆಯಲ್ಲಿ ನೆರವೇರಿತು. ಕಾರ್ಯಕ್ರಮಕ್ಕೆಜ್ಯೋತಿ ಬೆಳಗಿಸಿ ಮಾತನಾಡಿದ ಮಂಡ್ಯ ಕೃಷಿ ಸಂಶೋಧನಾಕೇಂದ್ರದ ಭತ್ತದ ತಳಿ ವಿಜ್ಞಾನಿ ಡಾ.ಸಿ.ಎ.ದೀಪಕ್ ಅವರು ಪೂರ್ವ ಪ್ರಾಥಮಿಕ ಶಿಕ್ಷಣ ಮಕ್ಕಳ ಮುಂದಿನ ಬೆಳವಣಿಗೆಗೆ ಪೂರಕ ವಾತಾವರಣವನ್ನು ನಿರ್ಮಿಸುತ್ತದೆ. ಶಾಲಾ ವಾತಾವರಣಕ್ಕೂ ಮೊದಲು ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಮನೆಯನ್ನು ಬಿಟ್ಟು, ಶಾಲೆಗೆ ಬಂದ ಮಕ್ಕಳಿಗೆ ಸ್ವಾವಲಂಬನೆ, ಆಸಕ್ತಿ, ಕಲಿಕೆ, ವಿವಿಧ ಆಟೋಟಗಳು, ಸಹಪಾಠಿಮಕ್ಕಳ ಜೊತೆ ಬೆರೆಯುವುದು ಹೀಗೆ ಹತ್ತು ಹಲವು ಕುತೂಹಲಕಾರಿ ವಿಷಯಗಳನ್ನು ಮನವರಿಕೆ ಮಾಡಿಕೊಡುವುದು ಬಹಳ ಮುಖ್ಯವಾದಉದ್ದೇಶ ಹಾಗೂ ಲಕ್ಷಣವಾಗಿದೆಎಂದು ತಿಳಿಸಿದರು. ಇಂದು ಸ್ಪರ್ಧಾ ಪ್ರಪಂಚದಲ್ಲಿ ಶಿಕ್ಷಣ ಸಂಸ್ಥೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿದ್ದು, ಪೈಪೋಟಿಯನ್ನುಂಟು ಮಾಡುತ್ತಿದೆ.ಆದ್ದರಿಂದ ವಿಷಯಜ್ಞಾನದಜೊತೆಗೆ ನಾವು ಬದುಕುವಕಲೆಯನ್ನು ಕಲಿಸುವುದು, ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು, ಕ್ರಿಯಾಶೀಲತೆಯನ್ನು ಉಂಟುಮಾಡುವುದುಅತ್ಯಗತ್ಯಎಂದು ತಿಳಿಸಿದರು.

ಕಾರ್ಯಕ್ರಮದಅಧ್ಯಕ್ಷತೆಯನ್ನುಯುರೋಕಿಡ್ಸ್‌ನ




ಮುಖ್ಯಸ್ಥರಾದಕೃಷ್ಣೇಗೌಡಅವರು ವಹಿಸಿ ಮಾತನಾಡಿ, ಮಕ್ಕಳ ಬೆಳವಣಿಗೆಗೆ ಶಾಲಾ ವಾರ್ಷಿಕೋತ್ಸವಗಳು ಅಡಿಪಾಯವನ್ನು ಹಾಕುವುದರಜೊತೆಗೆ ಪ್ರತಿಭೆಯನ್ನುಗುರುತಿಸುವಲ್ಲಿ ಮುಖ್ಯವಾಗುತ್ತದೆ ಹಾಗೂಸಾಂಸ್ಕೃತಿಕ ಚಟುವಟಿಕೆಗಳಿಗೆ ಭಾಗವಹಿಸಲುನೆರವಾಗುತ್ತದೆಂದು ತಿಳಿಸಿದರು.

ವೇದಿಕೆಯಲ್ಲಿ ಡಾ.ಯೋಗಿತಾ, ವ್ಯವಸ್ಥಾಪಕರಾದ ಶ್ರೀಮತಿ ಶಿಲ್ಪ ಕೃಷ್ಣೇಗೌಡ, ಮುಖ್ಯ ಶಿಕ್ಷಕರಾದ ಚೈತ್ರ ಉಪಸ್ಥಿತರಿದ್ದರು.ಕಾರ್ಯಕ್ರಮಕ್ಕೆ ಮೌರ್ಯಕೃಷ್ಣೇಗೌಡ ಸ್ವಾಗತಿಸಿದರೆ, ಮುಖ್ಯ ಶಿಕ್ಷಕಿ ಚೈತ್ರ ನಿರೂಪಿಸಿದರು. ವೇದಿಕೆ ಕಾರ್ಯಕ್ರಮದ ನಂತರಚಿಣ್ಣರಿಂದ ಸಾಂಸ್ಕೃತಿಕಕಾರ್ಯಕ್ರಮಅತ್ಯಂತ ಯಶಸ್ವಿಯಾಗಿ ನೆರವೇರಿತು.

# ಸಂಜೆ ಟಿಪ್ಸ್



## ಯಶಸ್ವಿ ನಾರ್ಜೋ ಬೈ ರಿಯಲ್ ಮಿ ಸರಣಿ ಮಾರುಕಟ್ಟೆಗೆ

ಭಾರತದ ಅತ್ಯಂತ ವಿಶ್ವಾಸಾರ್ಹ ಸ್ಮಾರ್ಟ್ ಫೋನ್ ಸೇವಾ ಪೂರೈಕೆದಾರ ರಿಯಲ್ ಮಿ ತನ್ನ ಸೂಪರ್ ಯಶಸ್ವಿ ನಾರ್ಜೋ ಬೈ ರಿಯಲ್ ಮಿ ಸರಣಿಗೆ ಹೊಸ ಸೇರ್ಪಡೆ - ನಾರ್ಜೋ 70 ಪ್ರೊ 5 ಜಿ. ನಾರ್ಜೊ ರಿಯಲ್ ಮಿ ಮೂಲಕ ಸಮಗ್ರ ಬಳಕೆದಾರ ಅನುಭವವನ್ನು ನೀಡುವ ಸ್ಮಾರ್ಟ್ ಫೋನ್ ಗಳ ಸ್ಟೈಲಿಶ್ ಸಾಲನ್ನು ಹೊಂದಿದೆ. ಭಾರತದಲ್ಲಿ 16 ದಶಲಕ್ಷಕ್ಕೂ ಹೆಚ್ಚು ವೇಗವಾಗಿ ಬೆಳೆಯುತ್ತಿರುವ ಬಳಕೆದಾರರನ್ನು ಹೊಂದಿರುವ ನಾರ್ಜೋ ಬೈ ರಿಯಲ್ ಮಿ ಮುಂದಿನ ಪೀಳಿಗೆಯ ಸ್ಮಾರ್ಟ್ ಫೋನ್ ಗಳನ್ನು ಪ್ರತಿನಿಧಿಸುತ್ತದೆ. ಈ ಸಾಧನಗಳನ್ನು ಸುಧಾರಿತ ತಂತ್ರಜ್ಞಾನ ಮತ್ತು ಪ್ರೀಮಿಯಂ ವೈಶಿಷ್ಟ್ಯಗಳೊಂದಿಗೆ ವಿನ್ಯಾಸಗೊಳಿಸಲಾಗಿದೆ, ಇದು ಬಳಕೆದಾರರಿಗೆ ವಕ್ರರೇಖೆಯಲ್ಲಿ ಮುಂದಿರಲು ಮತ್ತು ಅವರ ವ್ಯಕ್ತಿತ್ವವನ್ನು ವ್ಯಕ್ತಪಡಿಸಲು ಸಹಾಯ ಮಾಡುತ್ತದೆ. ಹೊಸ ರಿಯಲ್ ಮಿ ನಾರ್ಜೋ 70 ಪ್ರೊ 5 ಜಿ ಕಡಿಮೆ-ಬೆಳಕಿನ ಛಾಯಾಗ್ರಹಣಕ್ಕಾಗಿ ಉದ್ಯಮದ ಮಾನದಂಡಗಳನ್ನು ಮರುವ್ಯಾಖ್ಯಾನಿಸುವ ಗುರಿಯನ್ನು ಹೊಂದಿದೆ, ಇದು ನಾವೀನ್ಯತೆ ಮತ್ತು ಉತ್ಕೃಷ್ಟತೆಗೆ ರಿಯಲ್ ಮಿ ಯ ಬದ್ಧತೆಯನ್ನು ಮತ್ತಷ್ಟು ಬಲಪಡಿಸುತ್ತದೆ. ರಿಯಲ್ ಮಿ ಮತ್ತು ಅಮೆಜಾನ್ ನಾರ್ಜೋ ಬೈ ರಿಯಲ್ ಮಿ ಸರಣಿಯನ್ನು ತರಲು ಮತ್ತು ಗ್ರಾಹಕರಿಗೆ ವರ್ಧಿತ ಶಾಪಿಂಗ್ ಅನುಭವವನ್ನು ಒದಗಿಸಲು ಕಾರ್ಯತಂತ್ರಾತ್ಮಕವಾಗಿ ತೊಡಗಿಸಿಕೊಂಡಿವೆ. ನಾರ್ಜೋ ಬೈ ರಿಯಲ್ ಮಿ Amazon.in ನಲ್ಲಿ ಪ್ರತ್ಯೇಕವಾಗಿ ಲಭ್ಯವಿದೆ ಮತ್ತು ತನ್ನ ಬಳಕೆದಾರರಿಗೆ ಸುಧಾರಿತ ತಂತ್ರಜ್ಞಾನವನ್ನು ತರಲು ಬದ್ಧವಾಗಿದೆ. ರಿಯಲ್ ಮಿ ಯ ಡ್ಯುಯಲ್ ಪ್ಲಾಟ್ ಫಾರ್ಮ್ ಕಾರ್ಯತಂತ್ರಕ್ಕೆ ಅನುಗುಣವಾಗಿ, ರಿಯಲ್ ಮಿ ಮಾರ್ಚ್ 2023 ರಲ್ಲಿ ಅಮೆಜಾನ್ ನಲ್ಲಿ ತನ್ನ ಮೊದಲ ಆನ್ಲೈನ್ ಸ್ಟೋರ್ ಅನ್ನು ಪ್ರಾರಂಭಿಸಿತು. ಈ ಸ್ಮಾರ್ಟ್ ಫೋನ್ ದೊಡ್ಡ 5000 ಎಂಎಎಚ್ ಬ್ಯಾಟರಿಯನ್ನು ಹೊಂದಿದೆ ಎರಡು ಸ್ಟೋರೇಜ್ ರೂಪಾಂತರಗಳು: 8 ಜಿಬಿ + 128 ಜಿಬಿ, ಬೆಲೆ 19,999 ರೂ ಮತ್ತು 8 ಜಿಬಿ + 256 ಜಿಬಿ, ಬೆಲೆ 21,999 ರೂ.

## ನಿಂಬು ಶುಂಠಿ ರಸಂ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

2 ಕಪ್ ಮಸೂರ್ ದಾಲ್, 2 ಚಮಚ ತುಪ್ಪ, ಅಗತ್ಯಕ್ಕೆ ತಕ್ಕಷ್ಟು ಸಾಸಿವೆ, 1 ಚಮಚ ಜೀರಿಗೆ, 1 ಚಮಚ ಕರಿಮೆಣಸು, 1 - ನಿಂಬೆಹಣ್ಣು, 1 - ಟೊಮೆಟೋ, 3 ಇಂಚುಗಳು ಶುಂಠಿ, 6 - ಹಸಿಮೆಣಸಿನಕಾಯಿ, ಅಗತ್ಯಕ್ಕೆ ತಕ್ಕಷ್ಟು ಕರಿಬೇವು, ಅಗತ್ಯಕ್ಕೆ ತಕ್ಕಷ್ಟು ಅರಿಶಿಣ, 1/2 ಚಮಚ ಉಪ್ಪು

### ಮಾಡುವ ವಿಧಾನ

ಮೊದಲಿಗೆ ತೊಗರಿ ಬೇಳೆಯನ್ನು ಚೆನ್ನಾಗಿ ತೊಳೆದುಕೊಂಡು ಕುಕ್ಕರ್ ಪಾತ್ರೆಗೆ ಸೇರಿಸಿ.ನಂತರ ಸ್ವಲ್ಪ ನೀರು ಮತ್ತು ಅರಿಶಿನ ಸೇರಿಸಿ ಮುಚ್ಚಳವನ್ನು ಮುಚ್ಚಿ.- 5-6 ಸೀಟಿ ಕೂಗಿಸಿಕೊಂಡು ಮೃದುವಾಗಿ ಬೇಯಿಸಿಕೊಳ್ಳಬೇಕು. ಪ್ರತ್ಯೇಕ ಬಾಣಲೆಯಲ್ಲಿ ಕಾಳು ಮೆಣಸು ಮತ್ತು ಜೀರಿಗೆ ಸೇರಿಸಿ ಒಣ ರೂಪದಲ್ಲಿಯೇ ಹುರಿಯಬೇಕು. ನಂತರ ಒರಟಾಗಿ ರುಬ್ಬಿಕೊಳ್ಳಿ. ಒಂದು ಬಾಣಲೆಯಲ್ಲಿ ತುಪ್ಪ ಸೇರಿಸಿ, ಬಿಸಿ ಮಾಡಿ.- ಬಿಸಿಯಾದ ತುಪ್ಪಕ್ಕೆ ಸಾಸಿವೆ ಮತ್ತು ಜೀರಿಗೆ ಸೇರಿಸಿ ಹುರಿಯಿರಿ.ನಂತರ ಹೆಚ್ಚಿಕೊಂಡ ಶುಂಠಿ ಚೂರು, ಹಸಿಮೆಣಸಿನ ಕಾಯಿ, ಕರಿಬೇವಿನ ಎಲೆ ಸೇರಿಸಿ ಹುರಿಯಿರಿ. ಹೆಚ್ಚಿಕೊಂಡ ಟೊಮ್ಯಾಟೋ ಸೇರಿಸಿ, 2-3 ನಿಮಿಷಗಳ ಕಾಲ ಬೇಯಿಸಿ.- ಟೊಮ್ಯಾಟೋ ಚೆನ್ನಾಗಿ ಬೆಂದ ನಂತರ ಬೇಯಿಸಿಕೊಂಡ ತೊಗರಿ ಬೇಳೆಯನ್ನು ಸೇರಿಸಿ, ಚೆನ್ನಾಗಿ ಮಿಶ್ರಗೊಳಿಸಿ. ಒರಟಾಗಿ ರುಬ್ಬಿಕೊಂಡ ಕಾಳು ಮೆಣಸಿನ ಪುಡಿ ಮತ್ತು ರುಚಿಗೆ ತಕ್ಕಷ್ಟು ಉಪ್ಪನ್ನು ಸೇರಿಸಿ 4-5 ನಿಮಿಷಗಳ ಕಾಲ ಕುದಿಸಿ.- ಕುದಿ ಬಂದ ಬಳಿಕ ಉರಿಯನ್ನು ಆರಿಸಿ, ನಿಂಬೆ ರಸವನ್ನು ಸೇರಿಸಿ.

## ನಟಿ ಶ್ರೀಲೀಲಾ ಡ್ಯಾನ್ಸ್ ಮೆಚ್ಚಿಕೊಂಡ ಕ್ರಿಕೆಟಿಗ ರವಿಚಂದ್ರನ್ ಅಶ್ವಿನ್



ಭಾರತದಲ್ಲಿ ಮೊನ್ನೆಯಿಂದ 2024 ಐಪಿಎಲ್ ಫೀವರ್ 17ನೇ ಸೀಸನ್ ತುಂಬಾ ಜೋರಾಗಿಯೇ ಇದ್ದು, ಈ ಬಾರಿ ಚೆನ್ನೈ ಮತ್ತು ಆರ್ಸಿಬಿ ಮಧ್ಯೆ ಪಂದ್ಯ ಅದ್ದೂರಿಯಾಗಿ ಪ್ರಾರಂಭವಾಗಿದೆ. ಇವತ್ತು ಆರ್. ಅಶ್ವಿನ್ ತಂಡವಾದ ರಾಜಸ್ಥಾನ್ ರಾಯಲ್ಸ್ ಗೆಲುವಿನೊಂದಿಗೆ ಟೂರ್ನಿಯನ್ನು ಪ್ರಾರಂಭ ಮಾಡಿದೆ. ಪಂದ್ಯಕ್ಕೂ ಮುಂಚೆ ನಡೆದ ಯೂಟ್ಯೂಬ್ ಚಾನೆಲ್ಲೊಂದರ ಸಂದರ್ಶನದಲ್ಲಿ ಕ್ರಿಕೆಟಿಗ ರವಿಚಂದ್ರನ್ ಅಶ್ವಿನ್ ಸ್ಯಾಂಡಲ್ವುಡ್ ನಟಿಯೊಬ್ಬರ ಬಗ್ಗೆ ಮಾತನಾಡಿದ್ದಾರೆ. ಈ ವಿಡಿಯೋ ಸದ್ಯ ಸಖತ್ ವೈರಲ್ ಆಗಿದೆ. ಅಂದಹಾಗೆ ಅಶ್ವಿನ್ ಚಂದನವನದ ಜನಪ್ರಿಯ ನಟಿ ಶ್ರೀಲೀಲಾ ಬಗ್ಗೆ ಹೇಳುತ್ತಾ, ಆಕೆಯ ಡ್ಯಾನ್ಸ್ ಅನ್ನು ಮೆಚ್ಚಿಕೊಂಡಿದ್ದಾರೆ. ಕೆಲವು ದಿನಗಳ ಹಿಂದೆ ತೆರೆಗೆ ಅಪ್ಪಳಿಸದ ಗುಂಟೂರು ಖಾರಂನಲ್ಲಿ ಮಾಡಿದ ಡ್ಯಾನ್ಸ್ ನೋಡಿ ಹೊಗಳಿದ್ದಾರೆ. ನಟಿ ಶ್ರೀಲೀಲಾ ಗುಂಟೂರು ಖಾರಂ ಸಿನಿಮಾದಲ್ಲಿ ನಟ ಮಹೇಶ್ ಬಾಬು ಜೊತೆಗೆ ನಾಯಕಿಯಾಗಿ ನಟಿಸಿದ್ದರು. ಈ ಚಿತ್ರವು ಬಾಕ್ಸ್ ಆಫೀಸ್ನಲ್ಲಿ ಅಷ್ಟಾಗಿ ಕಮಾಲ್ ಮಾಡದೇ ಇದ್ದರೂ ಆದರೆ ಈ ಹಾಡು ಮಾತ್ರ ಸಖತ್ ಸದ್ದು ಮಾಡಿತ್ತು. ಇದೀಗ ಗುಂಟೂರು ಖಾರಂ ಅಶ್ವಿನ್ ಜಾಲಿ ಮತ್ತು ಮನರಂಜನೆಯಾಗಿದೆ. ಅದರಲ್ಲಿಯೂ ನಟಿ ಶ್ರೀಲೀಲಾ ಕುರ್ಚಿನಿ ಮಡತಪಟ್ಟಿ ಸಾಂಗ್ನಲ್ಲಿಯ ಡ್ಯಾನ್ಸ್ ನನಗೆ ಇಷ್ಟವಾಯಿತು ಎಂದು ಅಶ್ವಿನ್ ಹೇಳಿದ್ದಾರೆ. ಭಾರತ ಕ್ರಿಕೆಟ್ ತಂಡದ ಸ್ಟಾರ್ ಆಫ್ ಸ್ಪಿನ್ನರ್ ಆರ್ ಅಶ್ವಿನ್ ಕುರ್ಚಿನಿ ಮಡತಪಟ್ಟಿ ಹಾಡಿನಲ್ಲಿ ಶ್ರೀಲೀಲಾ ಡ್ಯಾನ್ಸ್ ತುಂಬಾನೇ ಅದ್ಭುತವಾಗಿದೆ. ನನಗೆ ಅವರ ನೃತ್ಯ ಹುಚ್ಚು ಹಿಡಿಸುವುದರ ಜೊತೆಗೆ ಹಾಡಿನ ಮೇಕಿಂಗ್ ಸಹ ಬಹಳ ಇಷ್ಟವಾಯಿತು. ಅಲ್ಲದೇ ನಟ ಮಹೇಶ ಬಾಬು ಕೂಡ ಗುಂಟೂರು ಖಾರಂ ಸಿನಿಮಾದಲ್ಲಿ ಸಹ ಒಳ್ಳೆಯ ಡ್ಯಾನ್ಸ್ ಮಾಡಿದ್ದಾರೆ. ಅವರೊಬ್ಬರು ಒಳ್ಳೆಯ ನೃತ್ಯಗಾರರು ಎಂದಿದ್ದಾರೆ.



## ಆರೋಗ್ಯವಾಗಿರಲು ಬಾದಾಮಿ ಸೇವಿಸಿ



### ಹೆಲ್ತ್ ಟಿಪ್ಸ್

ಬಾಯಿಗೆ ರುಚಿಯಾಗಿರುವ ಬಾದಾಮಿಯನ್ನು ಹಾಗೆಯೇ ಅಥವಾ ಗೋಡಂಬಿ, ದ್ರಾಕ್ಷಿಯೊಂದಿಗೆ ಬೆರೆಸಿ ತಿನ್ನಬಹುದು. ಇತರೆ ಖಾದ್ಯಗಳಲ್ಲಿ ಬಳಸಬಹುದು. ಹೆಚ್ಚಿನವರು ಬಾದಾಮಿ ತಿಂದರೆ ಒಳ್ಳೆಯದು ಎಂದು ಮಾತ್ರ ಗೊತ್ತು ಆದರೆ ನಮ್ಮ ದೇಹಕ್ಕೆ ಯಾವ ರೀತಿಯಲ್ಲಿ ಆರೋಗ್ಯ ಎಂಬುವುದು ಗೊತ್ತಿಲ್ಲ. ಬಾದಾಮಿ ಆರೋಗ್ಯಕ್ಕೆ ಏಕೆ ಒಳ್ಳೆಯದೆಂದರೆ ಅದರಲ್ಲಿ ವಿಟಮಿನ್ ಮತ್ತು ಖನಿಜಾಂಶಗಳು ಹಾಗೂ ಫೈಬರ್ ಹೇರಳವಾಗಿವೆ. ಅಷ್ಟೇ ಅಲ್ಲ ಇ ವಿಟಮಿನ್, ಡಿ ವಿಟಮಿನ್ ಹಾಗೂ ಪೊಟ್ಯಾಷಿಯಂ, ಮೆಗ್ನೀಷಿಯಂ, ಕ್ಯಾಲ್ಸಿಯಂನಂತಹ ಖನಿಜಾಂಶಗಳು ಹೆಚ್ಚಿನ ಪ್ರಮಾಣದಲ್ಲಿವೆ. ಇನ್ನು ಇದು ಓಮೆಗಾ 6 ಆಸಿಡ್ ಮಿಶ್ರಿತ ಕೊಬಿನಾಂಶ ಹೊಂದಿರುವುದರಿಂದ ಮೆದುಳಿನ ಸಮರ್ಪಕ ಕಾರ್ಯನಿರ್ವಹಣೆ ಮತ್ತು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಲು ಸಹಕಾರಿಯಾಗಿದೆ. ಜತೆಗೆ ಬುದ್ದಿಮತ್ತೆ ಹೆಚ್ಚಿಸುತ್ತದೆ ಎಂಬುದರಲ್ಲಿ ಎರಡು ಮಾತಿಲ್ಲ. ಬಾದಾಮಿ ಎಣ್ಣೆಯನ್ನೂ ಬಳಸಬಹುದಾಗಿದೆ. ಚರ್ಮದ ಆರೋಗ್ಯಕ್ಕೆ ಉತ್ತಮವಾಗಿದ್ದು, ಅತ್ಯುತ್ತಮ ಡಯಟ್ಗೂ ಸಹಕಾರಿ. ಬಾದಾಮಿಯನ್ನು ಸೇವಿಸುವುದರಿಂದ ಹೃದಯ ಮೆದುಳು ಸೇರಿದಂತೆ ದೇಹದ ಕಾರ್ಯಚಟುವಟಿಕೆ ಸುಗಮವಾಗುತ್ತದೆ. ರೈಬೋಫ್ಲೇವಿನ್ ಮತ್ತು ಎಲ್- ಕಾರ್ನಿಟೈನ್ ಎಂಬ ಪೌಷ್ಠಿಕಾಂಶಗಳು ಇದರಲ್ಲಿರುವುದರಿಂದ ಮೆದುಳಿನ ಚಟುವಟಿಕೆಯನ್ನು ಉದ್ದೀಪನಗೊಳಿಸುತ್ತದೆ. ಆಂಟಿ-ಆಕ್ಸಿಡಾಂಟ್ ಇರುವುದರಿಂದ ರಕ್ತದ ಪರಿಚಲನೆ ಸುಗಮಗೊಳಿಸುವ ಶಕ್ತಿಯನ್ನು ಹೊಂದಿದೆ. ಯುಕೃತ್ತಿನ ಸಮಸ್ಯೆಯಿಂದ ಉಂಟಾಗುವ ತೊಂದರೆಗಳನ್ನು ಪರಿಹರಿಸಿ ಶಕ್ತಿ ತುಂಬುತ್ತದೆ. ಗ್ಲೂಕೋಸ್ ಅಂಶ ನಿಯಂತ್ರಣಕ್ಕೆ ತಂದು ಮದುಮೇಹ ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಚರ್ಮ ಸುಕ್ಕು ಕಟ್ಟುವುದನ್ನು ತಡೆದು ಕಾಂತಿಯನ್ನು ಹೆಚ್ಚಿಸುತ್ತದೆ. ಕಬ್ಬಿಣದ ಅಂಶ ಹೆಚ್ಚಿನ ಪ್ರಮಾಣದಲ್ಲಿರುವುದರಿಂದ ಹಿಮೋಗ್ಲೋಬಿನ್ ಹೆಚ್ಚಿ ಅನಿಮಿಯಾ (ರಕ್ತಹೀನತೆ)ವನ್ನು ತಡೆಗಟ್ಟುತ್ತದೆ. ರಾತ್ರಿ ವೇಳೆ ಮೂರ್ನಾಲ್ಕು ಬಾದಾಮಿಯನ್ನು ನೀರಿನಲ್ಲಿ ನೆನೆಸಿಟ್ಟು ಬೆಳಿಗ್ಗೆ ಸಿಪ್ಪೆ ತೆಗೆದು ತಿನ್ನುವುದು ಒಳ್ಳೆಯದು.

## ಮುಕೇಶ್ ಅಂಬಾನಿಗೆ ವಾಯ್ಸ್ ಅಂಡ್ ಡೇಟಾದಿಂದ ಜೀವಮಾನ ಸಾಧನೆ ಪ್ರಶಸ್ತಿ



ಭಾರತದ ದೂರಸಂಪರ್ಕ ಕ್ಷೇತ್ರಕ್ಕೆ ನೀಡಿದ ಅಪೂರ್ವ ಕೊಡುಗೆಗಳನ್ನು ಪರಿಗಣಿಸಿ, ರಿಲಯನ್ಸ್ ಇಂಡಸ್ಟ್ರೀಸ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಮುಕೇಶ್ ಅಂಬಾನಿ ಅವರಿಗೆ ವಾಯ್ಸ್ ಅಂಡ್ ಡೇಟಾದಿಂದ ಪ್ರತಿಷ್ಠಿತ ಜೀವಮಾನ ಸಾಧನೆ ಪ್ರಶಸ್ತಿಯನ್ನು ನೀಡಲಾಗಿದೆ.

ನವದೆಹಲಿಯಲ್ಲಿ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ರಿಲಯನ್ಸ್ ಜಿಯೋ ಇನ್ಫೋಕಾಮ್‌ನ ಅಧ್ಯಕ್ಷ ಮ್ಯಾಥ್ಯೂ ಉಮ್ಮನ್ ಅವರು 2023ನೇ ಇಸವಿಯ ''ಪಾಥ್ ಬ್ರೇಕರ್'' ಪ್ರಶಸ್ತಿಯನ್ನು ನೀಡಿ, ಗೌರವಿಸಲಾಯಿತು. ಈ ಜಂಟಿ ಗೌರವದ ಮೂಲಕ 5ಜಿ ತಂತ್ರಜ್ಞಾನದ ಶೀಘ್ರ ನಿಯೋಜನೆಯನ್ನು ಮುನ್ನಡೆಸುವಲ್ಲಿ, ಭಾರತದ ತಾಂತ್ರಿಕ ಪ್ರಗತಿಯಲ್ಲಿ ಮಹತ್ವದ ಮೈಲುಗಲ್ಲು ಮುಟ್ಟುವಲ್ಲಿ ಉಮ್ಮನ್ ಅವರ ಪ್ರಮುಖ ಪಾತ್ರವನ್ನು ಇದು ಎತ್ತಿ ತೋರಿಸುತ್ತದೆ.

ಮುಕೇಶ್ ಅಂಬಾನಿಯನ್ನು ಜಿಪಿಯು ಜತೆಗೆ ಹೋಲಿಸಿದ ಮ್ಯಾಥ್ಯೂ ಉಮ್ಮನ್, ವಾಯ್ಸ್ ಅಂಡ್ ಡೇಟಾದಿಂದ ಮುಕೇಶ್ ಅಂಬಾನಿ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿರುವುದರಿಂದ ನಮಗೆ ಗೌರವ ದೊರೆತಂತೆ ಆಗಿದೆ. ಅವರ ಪ್ರಭಾವಶಾಲಿ ನಾಯಕತ್ವ, ಟೆಲಿಕಾಂ, ರೀಟೇಲ್ ವ್ಯಾಪಾರ, ಮಾಧ್ಯಮ ಮತ್ತು ಕ್ರೀಡೆಗಳನ್ನು ವ್ಯಾಪಿಸಿದ್ದು, ಸೇರ್ಪಡೆ ಮಿತಿಗಳನ್ನು ತಳ್ಳಿದ್ದು ಮತ್ತು ಎಲ್ಲರಿಗೂ ಕೈಗೆಟಕುವ ಬೆಲೆ ದೊರೆಯುವಂತೆ ಆಗಿದೆ. ಈ ನೀತಿಯು ರಿಲಯನ್ಸ್ ಪ್ರತಿಪಾದಿಸುವ ಎಲ್ಲದರಲ್ಲೂ ಒಳಗೊಂಡಿರುತ್ತದೆ. ಇಂದಿನ ಪರಿವರ್ತಕ ತಂತ್ರಜ್ಞಾನದ ಯುಗದಲ್ಲಿ ಡಿಜಿಟಲ್ ಜಗತ್ತಿನಲ್ಲಿ ಭಾರತದ ಪಾತ್ರವು ಕ್ರಾಂತಿಕಾರಿ ಆಗಲಿದೆ. ಉದ್ಯಮವಾಗಿ ಮತ್ತು ರಾಷ್ಟ್ರವಾಗಿ ನಮ್ಮ ಕೊಡುಗೆಗಳು ಅಗಾಧವಾದದ್ದು. ಈ ಮೂಲಕ ಭಾರತೀಯರ ಭವಿಷ್ಯನ್ನು ಹೆಚ್ಚು ಸಮಾನ ಮತ್ತು ಸುಸ್ಥಿರತೆಯತ್ತ ಸಾಗುತ್ತವೆ, ಎಂದಿದ್ದಾರೆ.

ಮ್ಯಾಥ್ಯೂ ಉಮ್ಮನ್ ಅವರು ತಮ್ಮ ಪ್ರಶಸ್ತಿ ಸ್ವೀಕಾರ ಭಾಷಣದಲ್ಲಿ, ಈ ಮಾನ್ಯತೆಗಾಗಿ ಕೃತಜ್ಞತೆಯನ್ನು ವ್ಯಕ್ತಪಡಿಸಿದರು ಮತ್ತು ತಾಂತ್ರಿಕ ಪ್ರಗತಿಗೆ ಚಾಲನೆ ನೀಡುವಲ್ಲಿ ಸಹಯೋಗದ ಪ್ರಮುಖ ಪಾತ್ರದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು. ''ಇದೇ ಉದ್ಯಮದಲ್ಲಿ ಇರುವಂಥ ಇಬ್ಬರು ಗೌರವಾನ್ವಿತರಾದ ನೀರಜ್ ಮಿತ್ತಲ್ ಮತ್ತು ಗೋಪಾಲ್ ವಿಠ್ಠಲ್ ಅವರೊಂದಿಗೆ ನಾನು ಪಡೆದ ಈ ಗೌರವದಿಂದ ಹೆಚ್ಚು ಸಂತೋಷವಾಗಿದೆ. ಇನ್ನು ಅವರು ಮಾಡುವುದಕ್ಕೆ ಸಾಧ್ಯವಾಗುವ ಎಲ್ಲ ಸಾಧನೆಗೂ ಅಭಿನಂದಿಸಲು ಬಯಸುತ್ತೇನೆ,'' ಎಂದರು. ಕೃತಕ ಬುದ್ಧಿಮತ್ತೆ (ಎಐ) ಮತ್ತು ಭದ್ರತೆಯ ಮಿತಿಗಳನ್ನು ದಾಟುವ ಜಿಪಿಯು ಮತ್ತು ಕ್ವಾಂಟಮ್ ಕಂಪ್ಯೂಟ್‌ನಂತಹ ಬೆಳವಣಿಗೆಯಿಂದ ಮುನ್ನಡೆಯುವ ಅದರ ನಿರಂತರ ವಿಕಾಸವನ್ನು ಗಮನಿಸಿ, ಸಮಾಜದ ಮೇಲೆ ಆಗುತ್ತಿರುವ ತಂತ್ರಜ್ಞಾನದ ಪರಿವರ್ತಕ ಪರಿಣಾಮವನ್ನು ಮ್ಯಾಥ್ಯೂ ಉಮ್ಮನ್ ಅವರು ಗಮನ ಸೆಳೆದರು. ಸಮಾಜದ ಎಲ್ಲ ವಿಭಾಗಗಳನ್ನು ಜವಾಬ್ದಾರಿಯುತವಾಗಿ ಮತ್ತು ಸುಸ್ಥಿರವಾಗಿ ಮೇಲಕ್ಕೆತ್ತಲು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಬಳಸಿಕೊಳ್ಳುವ ಪ್ರಾಮುಖ್ಯವನ್ನು ಅವರು ಒತ್ತಿ ಹೇಳಿದರು.



## ಹನಿ ಫೇಸ್ ಪ್ಯಾಕ್

### ಬ್ಯೂಟಿ ಟಿಪ್ಸ್



ಒಣ ತ್ವಚೆಯಿಂದ ನಿಮಗೆ ತೊಂದರೆಯಾಗಿದ್ದರೆ ಚರ್ಮದ ಆರೈಕೆಯಲ್ಲಿ ನೀವು ಜೇನುತುಪ್ಪವನ್ನು ಬಳಸಬೇಕು. ವಾಸ್ತವವಾಗಿ, ಜೇನುತುಪ್ಪದಲ್ಲಿ ಅನೇಕ ಗುಣಲಕ್ಷಣಗಳಿವೆ, ಇದು ದೀರ್ಘಕಾಲದವರೆಗೆ ಚರ್ಮವನ್ನು ನೈಸರ್ಗಿಕವಾಗಿ ತೇವಗೊಳಿಸುವಂತೆ ಮಾಡುತ್ತದೆ. ಜೇನುತುಪ್ಪವನ್ನು ಬಳಸುವುದರಿಂದ ಚರ್ಮವು ಆರೋಗ್ಯಕರ, ಮೃದು ಮತ್ತು ಹೊಳೆಯುತ್ತದೆ. ಇದನ್ನು ಮಾಡಲು, ಒಂದು ಬಟ್ಟಲಿನಲ್ಲಿ ಹಾಲು, ಅರಿಶಿನ, ಜೇನುತುಪ್ಪ ಮತ್ತು ಗ್ಲಿಸರಿನ್ ಮಿಶ್ರಣ ಮಾಡಿ. ಈಗ ಈ ಪೇಸ್ಟ್ ಅನ್ನು ಮುಖಕ್ಕೆ ಹಚ್ಚಿ 15 ನಿಮಿಷಗಳ ಕಾಲ ಬಿಡಿ. ನಂತರ ನೀರಿನಿಂದ ಮುಖವನ್ನು ತೊಳೆಯಿರಿ. ವಾರದಲ್ಲಿ ಎರಡು ಬಾರಿ ಈ ಫೇಸ್ ಪ್ಯಾಕ್ ಅನ್ನು ಅನ್ವಯಿಸುವುದರಿಂದ, ನಿಮ್ಮ ಚರ್ಮವು ಶೀಘ್ರದಲ್ಲೇ ಹೊಳೆಯಲು ಪ್ರಾರಂಭಿಸುತ್ತದೆ.

ಜೇನುತುಪ್ಪದಿಂದ ಫೇಸ್ ಸ್ಕಬ್ ಮಾಡಿ:ಜೇನು ಫೇಸ್ ಸ್ಕಬ್ ತಯಾರಿಸಲು, ಸಕ್ಕರೆ ಮತ್ತು ಕಾಫಿ ಪುಡಿ ಬಳಸಿ. ಈ ಮೂರನ್ನು ಒಟ್ಟಿಗೆ ಮಿಶ್ರಣ ಮಾಡಿ. ಕಾಫಿ ಪುಡಿ ರಕ್ತ ಪರಿಚಲನೆ ಹೆಚ್ಚಿಸುತ್ತದೆ ಮತ್ತು ಸಕ್ಕರೆ ಸತ್ತ ಜೀವಕೋಶಗಳನ್ನು ತೊಡೆದುಹಾಕಲು ಸಹಾಯ ಮಾಡುತ್ತದೆ. ಇದನ್ನು ಮಾಡಲು, ಒಂದು ಬೌಲ್ನಲ್ಲಿ ಸಕ್ಕರೆ, ಕಾಫಿ ಮತ್ತು ಜೇನುತುಪ್ಪವನ್ನು ಬೆರೆಸಿ ಮುಖಕ್ಕೆ ಹಚ್ಚಿ ಮಸಾಜ್ ಮಾಡಿ. ವಾರಕ್ಕೊಮ್ಮೆ ಈ ಮೂಲಕ ನಿಮ್ಮ ಮುಖವನ್ನು ಸ್ವಚ್ಛಗೊಳಿಸಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸ್ವಸಾಮರ್ಥ್ಯದಿಂದ ಅವಕಾಶ, ವಾಹನ ಯೋಗ, ಮನಶಾಂತಿ, ವಿದೇಶಿ ವ್ಯವಹಾರಗಳಲ್ಲಿ ಪ್ರಗತಿ.

**ವೃಷಭ:** ವೆಚ್ಚಗಳ ಬಗ್ಗೆ ಜಾಗ್ರತೆ, ಮಾನಸಿಕ ಚಿಂತೆ, ರಾಜಕೀಯ ವ್ಯಕ್ತಿಗಳ ಭೇಟಿ, ಸೇವಕ ವರ್ಗದಿಂದ ಸಹಾಯ.

**ಮಿಥುನ:** ತಪ್ಪಿನ ಪಶ್ಚಾತ್ತಾಪ, ಸಗಟು ವ್ಯವಹಾರಗಳಲ್ಲಿ ಅಲ್ಪ ಲಾಭ, ಆಲೋಚಿಸಿ ನಿರ್ಣಯ ಕೈಗೊಳ್ಳುವುದು ಸೂಕ್ತ.

**ಕಟಕ:** ಉದ್ಯೋಗದಲ್ಲಿ ಬಡ್ತಿ , ಬಂಧು ಮಿತ್ರರಲ್ಲಿ ಪ್ರೀತಿ, ಆರೋಗ್ಯದಲ್ಲಿ ಏರುಪೇರು, ದಾಂಪತ್ಯದಲ್ಲಿ ಕಲಹ.

**ಸಿಂಹ:** ದುಂದು ವೆಚ್ಚ, ಶತ್ರು ಭಾದೆ ನಿವಾರಣೆ, ಸಣ್ಣ ಪುಟ್ಟ ತೊಂದರೆ, ಮನಕ್ಲೇಶ, ಪರಿಚಿತರಿಂದ ಮೋಸ, ನಿರೀಕ್ಷಿತ ಆದಾಯ.

**ಕನ್ಯಾ:** ಕ್ರಯ ವಿಕ್ರಯಗಳಲ್ಲಿ ಲಾಭ, ಶರೀರದಲ್ಲಿ ಆಯಾಸ, ಕೋಪ ಜಾಸ್ತಿ, ಇತರರ ಮಾತಿಗೆ ಮರುಳಾಗಬೇಡಿ.

**ತುಲಾ:** ಆಪ್ತರೊಡನೆ ಪ್ರಯಾಣ, ಮನೋವ್ಯಥೆ, ವೈಮನಸ್ಸು, ಶತ್ರು ಭಾದೆ, ವಿದ್ಯಾರ್ಥಿಗಳಲ್ಲಿ ಪ್ರಗತಿ, ಕಾರ್ಯಸಿದ್ಧಿ.

**ವೃಶ್ಚಿಕ:** ಅನ್ಯರಲ್ಲಿ ಪ್ರೀತಿ, ಧನ ಲಾಭ, ಸಾಲದಿಂದ ಮುಕ್ತಿ, ಶ್ರಮಕ್ಕೆ ತಕ್ಕ ಫಲ, ಆಹಾರ ಸೇವನೆಯಲ್ಲಿ ವ್ಯತ್ಯಾಸ.

**ಧನಸ್ಸು:** ಪ್ರಯತ್ನ ಪಟ್ಟರೆ ಉತ್ತಮ ಫಲ, ವಕೀಲರಿಗೆ ಕಾರ್ಯಸಿದ್ಧಿ, ಆರೋಗ್ಯ ವೃದ್ಧಿ, ಅಧಿಕ ತಿರುಗಾಟ, ಕುಟುಂಬ ಸೌಖ್ಯ.

**ಮಕರ:** ಆರ್ಥಿಕ ಬಿಕ್ಕಟ್ಟು, ಸ್ತ್ರೀಯರಿಗೆ ಶುಭ, ತಾಳ್ಮೆ ಅತ್ಯಗತ್ಯ, ಕೆಲಸ ಕಾರ್ಯಗಳಲ್ಲಿ ವಿಳಂಬ.

**ಕುಂಭ:** ಕುಟುಂಬದಲ್ಲಿ ಪ್ರೀತಿ, ಚೋರ ಭಯ, ಇಷ್ಟವಸ್ತುಗಳ ಖರೀದಿ, ಮನಕ್ಲೇಶ, ಅತಿಯಾದ ನೋವು, ಎಲ್ಲಿ ಹೋದರೂ ಅಶಾಂತಿ.

**ಮೀನ:** ಅತಿಯಾದ ಪ್ರೀತಿ ದುಃಖಕ್ಕೆ ಕಾರಣ, ಸಣ್ಣ ವಿಷಯಕ್ಕೆ ಭಿನ್ನಾಭಿಪ್ರಾಯ, ಆರ್ಥಿಕ ಸಂಕಷ್ಟ, ರೋಗಭಾದೆ.

## ಹೋಳಿ ಆಚರಣೆ



ಹೋಳಿ ಹಿಂದೂಗಳ ಪ್ರಮುಖ ಹಬ್ಬಗಳಲ್ಲಿ ಒಂದಾಗಿದ್ದು ಇದನ್ನು ದೇಶಾದ್ಯಂತ ಬಹಳ ಆಡಂಬರದಿಂದ ಆಚರಿಸಲಾಗುತ್ತದೆ. ಹೋಳಿ ಹಬ್ಬ ಬಣ್ಣಗಳಿಂದ ಕೂಡಿರುವುದರಿಂದ ಎಲ್ಲರೂ ಪ್ರೀತಿಸುತ್ತಾರೆ. ಈ ಬಣ್ಣದ ಹಬ್ಬವು ಚಿಕ್ಕವರಿಂದ ಹಿಡಿದು ದೊಡ್ಡವರ ವರೆಗೂ ಅಚ್ಚುಮೆಚ್ಚು ಹಾಗಾಗಿ ಬಹಳ ಉತ್ಸಾಹದಿಂದ ಆಚರಿಸಲಾಗುತ್ತದೆ. ಹೋಳಿ ಹಬ್ಬವನ್ನು ಪ್ರತೀ ವರ್ಷ ಫಾಲ್ಗುಣ ಮಾಸದ ಹುಣ್ಣಿಮೆಯ ದಿನದಂದು ಆಚರಿಸಲಾಗುತ್ತದೆ. ಹೋಳಿ ಹಬ್ಬವು ವಸಂತ ಋತುವಿನ ಆಗಮನವನ್ನು ಸೂಚಿಸುತ್ತದೆ. ಈ ಬಾರಿ ಹೋಳಿಯನ್ನು ಮಾರ್ಚ್ 25 ರಂದು ಆಚರಿಸಲಾಗುತ್ತದೆ. ಹುಣ್ಣಿಮೆ ತಿಥಿಯು ಮಾ. 24 ರಂದು ಬೆಳಿಗ್ಗೆ 09:54ಕ್ಕೆ ಆರಂಭವಾಗಿ, ಮಾ. 25 ರಂದು ಮಧ್ಯಾಹ್ನ 12:29 ಕ್ಕೆ ಕೊನೆಗೊಳ್ಳುತ್ತದೆ. ಹಿಂದೂಗಳಲ್ಲಿ ಹೋಳಿ ಹಬ್ಬವು ತನ್ನದೇ ಆದ ಧಾರ್ಮಿಕ ಮಹತ್ವವನ್ನು ಹೊಂದಿದೆ. ಈ ಹಬ್ಬವು ಹಿಂದೂ ಧರ್ಮದ ಪ್ರಮುಖ ಹಬ್ಬಗಳಲ್ಲಿ ಒಂದಾಗಿದ್ದು ಹಾಗಾಗಿ ಹೋಳಿ ಹಬ್ಬವನ್ನು ಅಪಾರ ಸಂತೋಷ ಮತ್ತು ಉತ್ಸಾಹದಿಂದ ಆಚರಿಸಲಾಗುತ್ತದೆ. ಈ ಹಬ್ಬವನ್ನು ಕೆಲವೆಡೆ ಸತತ ಎರಡು ದಿನಗಳ ವರೆಗೆ ಆಚರಿಸಲಾಗುತ್ತದೆ, ಚೋಟಿ ಹೋಳಿ ಮತ್ತು ಮತ್ತೊಂದು ದಿನ ಬಡಿ ಹೋಳಿ ಅಥವಾ ರಂಗ್ ವಾಲಿ ಹೋಳಿ ಎಂದೂ ಕರೆಯಲಾಗುತ್ತದೆ. ಚೋಟಿ ಹೋಳಿಯಂದು, ಜನರು ದೀಪವನ್ನು ಬೆಳಗಿಸುತ್ತಾರೆ, ನಂತರ ರಾತ್ರಿ ಹೋಲಿಯ ದಹನವನ್ನು ನಡೆಸಲಾಗುತ್ತದೆ. ಹೋಳಿ ಶುದ್ಧಾನುಶುದ್ಧ ಭಾರತೀಯ ಆಚರಣೆ. ಅದರಲ್ಲೂ ಉತ್ತರ ಭಾರತದಲ್ಲಿ ಭಾರೀ ಜನಪ್ರಿಯ. ಆ ಜನಪ್ರಿಯತೆಯ ಕಾರಣದಿಂದಲೇ ಈಗ ಇಡೀ ದೇಶವನ್ನು ಹಬ್ಬಿದ್ದಷ್ಟೇ ಅಲ್ಲದೆ ವಿದೇಶಗಳಲ್ಲೂ ವ್ಯಾಪಿಸಿಕೊಂಡಿದೆ. ಇನ್ನು ಕೆಲವೆಡೆ ಜನರು ಬಣ್ಣಗಳು ಮತ್ತು ನೀರಿನಿಂದ ಪೂರ್ತಿ ದಿನ ಆಟವಾಡುತ್ತಾರೆ. ಜೊತೆಗೆ ಪರಸ್ಪರರ ಮನೆಗೆ ಭೇಟಿ ನೀಡುವ ಮೂಲಕ ಸಿಹಿ ಹಂಚುತ್ತಾರೆ. ಈ ಹಬ್ಬವನ್ನು ಕರ್ನಾಟಕದಾದ್ಯಂತ ಅಪಾರ ಸಂತೋಷದಿಂದ ಆಚರಿಸುತ್ತಾರೆ. ಆ ದಿನ ಹೊಸ ಬಟ್ಟೆ ಧರಿಸಿ, ಪ್ರೀತಿ ಪಾತ್ರರೊಂದಿಗೆ ಬಣ್ಣಗಳ ಓಕುಳಿಯಾಡಿ ಹಬ್ಬವನ್ನು ಆನಂದಿಸುತ್ತಾರೆ. ಇನ್ನು ಪೌರಾಣಿಕ ನಂಬಿಕೆಗಳ ಪ್ರಕಾರ, ಭಗವಾನ್ ಶಿವನಿಂದ ಹೋಳಿ ಹಬ್ಬವು ಬೆಳಕಿಗೆ ಬಂದಿತು ಎಂದು ಹೇಳಲಾಗುತ್ತದೆ. ಈ ಹಬ್ಬವು, ದುಷ್ಕೃತ್ಯಗಳು ದೇವರ ಶಕ್ತಿಯ ಎದುರು ಎಂದಿಗೂ ಜಯವನ್ನು ಪಡೆಯಲು ಸಾಧ್ಯವಿಲ್ಲ ಎಂಬ ಸಾರವನ್ನು ತಿಳಿಸಿ ಕೊಡುತ್ತದೆ. ಜೊತೆಗೆ ಕೆಟ್ಟ ಶಕ್ತಿಗಳು, ದುಷ್ಟ ಆಲೋಚನೆಗಳು ನಾಶವಾಗಿ ಹೊಸತನ ಪ್ರಾರಂಭದ ಕಾಲವಾಗಿದೆ. ಉತ್ತರ ಪ್ರದೇಶದ ಮಥುರಾದಲ್ಲಿ ಹೋಳಿ ಅತ್ಯಂತ ಜನಪ್ರಿಯ. ಹೋಳಿ ಹಬ್ಬದೊಂದಿಗೆ ರಾಧಾ- ಕೃಷ್ಣರ ಒಲುಮೆಯ ಕಥೆ ಬೆಸೆದುಕೊಂಡಿದ್ದು ಎನ್ನುವುದು ಇಲ್ಲಿನ ಜನರ ನಂಬಿಕೆ. ಹಾಗಾಗಿ ಬ್ರಜ್ ಎಂಬ ಪ್ರದೇಶದಲ್ಲಿ ಬರೋಬ್ಬರಿ 16 ದಿನಗಳ ಕಾಲ ಹೋಳಿಯ ಆಚರಣೆ ನಿರಂತರವಾಗಿ ನಡೆಸಲಾಗುತ್ತದೆ. ಈ ಹಬ್ಬವನ್ನು ಸಿಖ್ಖರು ಮೂರು ದಿನಗಳ ಕಾಲ ಹೋಲಾ ಮೊಹಲ್ಲಾ ಎಂಬುದಾಗಿ ಆಚರಿಸುತ್ತಾರೆ. ಅಸ್ಸಾಮಿಗರಿಗೆ ಹೋಳಿ ಫಕುವಾ ಅಥವಾ ಫಗುವಾ ಇನ್ನು ಒಡಿಶಾ ಮಂದಿಗೆ ಡೋಲಾ ಜಾತ್ರಾ, ಬಂಗಾಳಿಯರಿಗೆ ಬಸಂತೋ ಉತ್ಸವ್ ಹೀಗೆ ಹೆಸರು ಬೇರೆ ಬೇರೆಯದರೂ ಆಚರಣೆ ಒಂದೇ. ಹಾಗಾಗಿ ಈ ಹಬ್ಬ ವಿಶ್ವ ಪ್ರಸಿದ್ಧ. ಈ ಬಾರಿಯೂ ಹೋಳಿಯನ್ನು ಒಟ್ಟುಗೂಡಿ ಆಚರಿಸುವ ಜೊತೆಗೆ ರಾಸಾಯನಿಕವಲ್ಲದ ಬಣ್ಣಗಳನ್ನು ಬಳಸುವುದರತ್ತ ಗಮನ ಹರಿಸೋಣ.

# ಗಾಝಾ ಕದನವಿರಾಮ : ಸಂಧಾನಸೂತ್ರ ಪ್ರಸ್ತಾವಿಸಿದ ಅಮೆರಿಕ



**ಟೆಲ್‌ಅವೀವ್:** ಗಾಝಾದಲ್ಲಿ ಕದನ ವಿರಾಮಕ್ಕೆ ಸಂಬಂಧಿಸಿ ಅಮೆರಿಕ ಹೊಸ ಸಂಧಾನ ಸೂತ್ರವನ್ನು ಪ್ರಸ್ತಾವಿಸಿದೆ ಎಂದು ಇಸ್ರೇಲ್‌ನ ಅಧಿಕಾರಿ ಹೇಳಿದ್ದಾರೆ.

ಹಮಾಸ್ ಬಿಡುಗಡೆಗೊಳಿಸುವ ಒತ್ತೆಯಾಳುಗಳಿಗೆ ಪ್ರತಿಯಾಗಿ ಇಸ್ರೇಲ್ ಬಿಡುಗಡೆಗೊಳಿಸಬೇಕಿರುವ ಫೆಲೆಸ್ತೀನ್ ಕೈದಿಗಳ ಬಗ್ಗೆ ಅಮೆರಿಕದ ಪ್ರಸ್ತಾವನೆಯಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ ಎಂದು ಅಧಿಕಾರಿ ಹೇಳಿದ್ದಾರೆ. ಖತರ್ ನ ದೋಹಾದಲ್ಲಿ ನಡೆಯುತ್ತಿರುವ ಕದನ ವಿರಾಮ ಮಾತುಕತೆಯಲ್ಲಿ ಇಸ್ರೇಲ್‌ನ ಗುಪ್ತಚರ ಇಲಾಖೆ ಮೊಸಾದ್‌ನ ಮುಖ್ಯಸ್ಥ ಡೇವಿಡ್ ಬರ್ನೆಯ್ ನೇತೃತ್ವದ ಇಸ್ರೇಲ್ ನಿಯೋಗ ಪಾಲ್ಗೊಂಡಿದೆ. ಅಮೆರಿಕದ ಸಿಐಎ ನಿರ್ದೇಶಕ ವಿಲಿಯಂ ಬರ್ನ್ಸ್, ಖತರ್ ಮತ್ತು ಈಜಿಪ್ಟ್‌ನ ಅಧಿಕಾರಿಗಳು ಮಾತುಕತೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಹಮಾಸ್‌ನ ವಶದಲ್ಲಿರುವ ಒತ್ತೆಯಾಳುಗಳ ಬಿಡುಗಡೆಗೆ ಪ್ರತಿಯಾಗಿ ಇಸ್ರೇಲ್ ಎಷ್ಟು ಫೆಲೆಸ್ತೀನ್ ಕೈದಿಗಳನ್ನು ಬಿಡುಗಡೆಗೊಳಿಸಬೇಕು ಎಂಬ ವಿಷಯದಲ್ಲಿ ಅಮೆರಿಕ ಸ್ಪಷ್ಟವಾದ ನಿಲುವು ಮುಂದಿರಿಸಿದೆ. ಇದಕ್ಕೆ ನಮ್ಮ ಒಪ್ಪಿಗೆಯಿದೆ, ಇದೀಗ ಚೆಂಡು ಹಮಾಸ್‌ನ ಅಂಗಳದಲ್ಲಿದೆ ಎಂದು ಇಸ್ರೇಲ್ ಅಧಿಕಾರಿ ಹೇಳಿದ್ದಾರೆ. ಈ ತಿಂಗಳ ಆರಂಭದಲ್ಲಿ ಹಮಾಸ್‌ನ ಉನ್ನತ ಮುಖಂಡರು ಮುಂದಿಟ್ಟ ಪ್ರಸ್ತಾವನೆಯಂತೆ 'ಹಮಾಸ್‌ನ ಒತ್ತೆಸೆರೆಯಲ್ಲಿರುವ ಮಹಿಳೆಯರು, ಅಪ್ರಾಪ್ತ ವಯಸ್ಕರು, ಹಿರಿಯ ನಾಗರಿಕರ ಬಿಡುಗಡೆಗೆ ಪ್ರತಿಯಾಗಿ ಇಸ್ರೇಲ್ ಸುಮಾರು 1000 ಫೆಲೆಸ್ತೀನ್ ಕೈದಿಗಳನ್ನು ಬಿಡುಗಡೆಗೊಳಿಸಬೇಕಾಗಿದೆ'. ಆದರೆ ಈ ಷರತ್ತನ್ನು ಒಪ್ಪಲು ಸಾಧ್ಯವೇ ಇಲ್ಲ ಎಂದು ಇಸ್ರೇಲ್ ತಿರಸ್ಕರಿಸಿತ್ತು.

# ಆಸ್ಟ್ರೇಲಿಯಾದಲ್ಲಿ ಮೋದಿ ಗೆಲುವಿಗಾಗಿ ಅಭಿಯಾನ!



**ಆಸ್ಟ್ರೇಲಿಯಾ:** ಭಾರತದ ಲೋಕಸಭಾ ಚುನಾವಣೆಯ ಗಾಳಿ ವಿದೇಶದಲ್ಲೂ ಆವರಿಸಿದೆ. ಇಲ್ಲಿ ವಿವಿಧ ಪಕ್ಷಗಳು ಭರ್ಜರಿ ಪ್ರಚಾರ ನಡೆಸುತ್ತಿವೆ. ನರೇಂದ್ರ ಮೋದಿ ನೇತೃತ್ವದ ಎನ್ಡಿಎ ಮೈತ್ರಿಕೂಟ ಸತತ ಮೂರನೇ ಬಾರಿ ಅಧಿಕಾರಕ್ಕೆ ಬರಲು ಪಣತೊಟ್ಟಿದೆ. ಅತ್ತ ಮೋದಿಗೆ ವಿದೇಶಗಳಲ್ಲಿರುವ ಭಾರತೀಯ ಸಮುದಾಯಗಳ ಜನರು ಸತತವಾಗಿ ಬೆಂಬಲ ಕೊಡುತ್ತಾ ಬಂದಿದ್ದಾರೆ. ಈ ಬಾರಿ ವಿದೇಶಗಳಲ್ಲೂ ಮೋದಿ ಪರ ಕಲರವ ಕೇಳಿಬರತೊಡಗಿದೆ.ಆಸ್ಟ್ರೇಲಿಯಾದ 'ಓವರ್ಸೀಸ್ ಫ್ರೆಂಡ್ಸ್ ಆಫ್ ಬಿಜೆಪಿ' ಸಂಘಟನೆಯು 'ಮೋದಿ ಫಾರ್ 2024' ಎನ್ನುವ ಅಭಿಯಾನ ನಡೆಸುತ್ತಿದೆ. ಏಳು ಪ್ರಮುಖ ನಗರಗಳಲ್ಲಿ ಈ ಆಂದೋಲನ ನಡೆಯಲಿದೆ. ಪಿಎಂ ಮೋದಿ ನೇತೃತ್ವದ ಬಿಜೆಪಿ ಮತ್ತು ಎನ್ಡಿಎ ಮೈತ್ರಿಕೂಟಕ್ಕೆ ವಿದೇಶಗಳಲ್ಲಿ ಬೆಂಬಲ ತೋರಿಸಲು ಈ ಪ್ರಚಾರ ನಡೆಯುತ್ತಿದೆ. ಸಿಡ್ನಿ ಹಾರ್ಬರ್ ಬ್ರಿಡ್ಜ್, ಮೆಲ್ಬೋರ್ನ್ ಕ್ರಿಕೆಟ್ ಮೈದಾನ, ಪರ್ತ್ ಆಪ್ಟಸ್ ಸ್ಟೇಡಿಯಂ, ಬ್ರಿಸ್ಬೇನ್ ಗಾಬ್ಬಾ ಸ್ಟೇಡಿಯಂ, ಗೋಲ್ಡ್ ಕೋಸ್ಟ್‌ನ ಸರ್ಫರ್ಸ್ ಪ್ಯಾರಡೈಸ್, ಕ್ಯಾನ್ಬೆರಾದ ಮೌಂಟ್ ಏನ್ಸ್ಲೀ, ಅಡಿಲೇಡ್‌ನ ನೇವಲ್ ಮೆಮೋರಿಯಲ್ ಗಾರ್ಡನ್‌ನಲ್ಲಿ ದೊಡ್ಡ ಪ್ರಚಾರ ಕಾರ್ಯಕ್ರಮ ಆರಂಭಿಸಲಾಗಿದೆ.

## ಲೋಕಸಭೆ ಚುನಾವಣೆ: ವೀರಪ್ಪನ್ ಪುತ್ರಿಗೆ ಟಿಕೆಟ್

**ಚೆನ್ನೈ:** ಕಾಡುಗಳ್ಳ, ಆನೆ ದಂತ ಚೋರ ವೀರಪ್ಪನ್ ಪುತ್ರಿ ವಿದ್ಯಾರಾಣಿ ಅವರು ಲೋಕಸಭೆ ಚುನಾವಣೆಯಲ್ಲಿ ಕೃಷ್ಣಗಿರಿ ಲೋಕಸಭೆ ಕ್ಷೇತ್ರದಲ್ಲಿ ನಾಮ್ ತಮಿಳರ್ ಕಚ್ಚಿ ಪಕ್ಷದಿಂದ ಸ್ಪರ್ಧಿಸಲು ಮುಂದಾಗಿದ್ದಾರೆ. ಕೆಲ ದಿನಗಳ ಹಿಂದಷ್ಟೇ ವಿದ್ಯಾರಾಣಿ ಅವರು ಎನ್ಟಿಕೆ ಪಕ್ಷವನ್ನು ಸೇರ್ಪಡೆಯಾಗಿದ್ದರು. ಈ ಕುರಿತು ಎನ್ಟಿಕೆ ಪಕ್ಷದ ಮುಖ್ಯಸ್ಥ ಸೀಮನ್ ಅವರೇ ಘೋಷಣೆ ಮಾಡಿದ್ದಾರೆ. ನಟ-ನಿರ್ದೇಶಕ ಸೀಮನ್ ನೇತೃತ್ವದ ಪಕ್ಷ ಸೇರಿದ್ದರು. ವಿದ್ಯಾರಾಣಿ ಅವರು ತಮಿಳುನಾಡಿನ ಕೃಷ್ಣಗಿರಿ ಲೋಕಸಭೆ ಕ್ಷೇತ್ರದಲ್ಲಿ ಎನ್ಟಿಕೆ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಲಿದ್ದಾರೆ ಎಂಬುದಾಗಿ ಎನ್ಟಿಕೆ ಮುಖ್ಯಸ್ಥ ಸೀಮನ್ ಮಾಹಿತಿ ನೀಡಿದ್ದಾರೆ. ವಿದ್ಯಾರಾಣಿ ಅವರು ವೃತ್ತಿಯಿಂದ ವಕೀಲರಾಗಿದ್ದಾರೆ. ಇವರು ಬೆಂಗಳೂರಿನಲ್ಲಿ ಐದು ವರ್ಷ ಕಾನೂನು ಅಧ್ಯಯನ ಮಾಡಿದ್ದಾರೆ. ಅಷ್ಟೇ ಅಲ್ಲ, ಕೃಷ್ಣಗಿರಿಯಲ್ಲಿ ಇವರು ಶಾಲೆಯೊಂದನ್ನು ಮುನ್ನಡೆಸುತ್ತಿದ್ದಾರೆ. ಆ ಮೂಲಕ ಬಡಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಿದ್ದಾರೆ. 2020ರಲ್ಲಿ ಬಿಜೆಪಿ ಸೇರ್ಪಡೆ ಯಾಗಿದ್ದ ವಿದ್ಯಾರಾಣಿ, ರಾಜ್ಯ ಬಿಜೆಪಿ ಯುವ ಮೋರ್ಚಾ ಘಟಕದ ಉಪಾಧ್ಯಕ್ಷೆ ಯಾಗಿದ್ದರು. ಬಳಿಕ ಇವರು ಎನ್ಟಿಕೆ ಸೇರ್ಪಡೆ ಯಾಗಿದ್ದಾರೆ.



# ಏಪ್ರಿಲ್ 8 ರಂದು ಸೂರ್ಯಗ್ರಹಣ



**ದೆಹಲಿ:** 8 ಏಪ್ರಿಲ್ 2024 ರಂದು ಚೈತ್ರ ಮಾಸದ ಅಮಾವಾಸ್ಯೆಯಂದು ಸಂಪೂರ್ಣ ಸೂರ್ಯಗ್ರಹಣ ಸಂಭವಿಸುತ್ತದೆ. ಈ ಸೂರ್ಯಗ್ರಹಣವು 50 ವರ್ಷಗಳ ನಂತರ ಸಂಭವಿಸುತ್ತಿದೆ, ಹಗಲಿನಲ್ಲಿ ಸೂರ್ಯನು ಚಂದ್ರನನ್ನು ಆವರಿಸುತ್ತಾನೆ ಮತ್ತು ಹಗಲಿನಲ್ಲಿ ಕತ್ತಲೆ ಇರುತ್ತದೆ. ಆ ಸಮಯದಲ್ಲಿ ಸಂಪೂರ್ಣ ಸೂರ್ಯಗ್ರಹಣವಿರುತ್ತದೆ ಮತ್ತು ಸುಮಾರು 7 ನಿಮಿಷಗಳ ಕಾಲ ಸೂರ್ಯನು ಗೋಚರಿಸುವುದಿಲ್ಲ.

ಈ ಅವಧಿಯಲ್ಲಿ 7 ನಿಮಿಷಗಳ ಕಾಲ ಸಂಪೂರ್ಣ ಬ್ಲಾಕೌಟ್ ಇರುತ್ತದೆ. ಏಪ್ರಿಲ್ 8 ರಂದು ಸೂರ್ಯಗ್ರಹಣದ ಸಮಯದಲ್ಲಿ, ಅಮೆರಿಕದ ಅನೇಕ ಭಾಗಗಳಲ್ಲಿ ಕತ್ತಲೆ ಇರುತ್ತದೆ ಎನ್ನಲಾಗಿದೆ. ಇದೇ ಕಾರಣಕ್ಕೆ ಗ್ರಹಣ ಮತ್ತು ಕತ್ತಲೆಯ ಹಿನ್ನೆಲೆಯಲ್ಲಿ ಭದ್ರತಾ ಕ್ರಮವಾಗಿ ಹಲವು ರಾಜ್ಯಗಳಲ್ಲಿ ಶಾಲೆಗಳನ್ನು ಮುಚ್ಚಲಾಗಿದೆ.ಆದರೆ ಈ ಗ್ರಹಣ ಭಾರತದಲ್ಲಿ ಗೋಚರಿಸುವುದಿಲ್ಲ ಎನ್ನಲಾಗಿದೆ.

ವಾಸ್ತವವಾಗಿ, ಸಂಪೂರ್ಣ ಸೂರ್ಯಗ್ರಹಣವು ಯುನೈಟೆಡ್ ಸ್ಟೇಟ್ಸ್‌ನಲ್ಲಿ ದಕ್ಷಿಣದ ಟೆಕ್ಸಾಸ್‌ನಿಂದ ಈಶಾನ್ಯದ ಮೈನೆವರೆಗೆ ಗೋಚರಿಸುತ್ತದೆ. ಮಿಯಾಮಿಯಲ್ಲಿ ಭಾಗಶಃ ಗ್ರಹಣವಿರುತ್ತದೆ,

ಮೆಕ್ಸಿಕೋ, ಸಿನಾಲೋವಾ, ನಯರಿಟ್, ಡುರಾಂಗೊ ಮತ್ತು ಕೊವಾಹಿಲಾ, ಟೆಕ್ಸಾಸ್, ಒಕ್ಲಹೋಮ, ಅರ್ಕಾನ್ಸಾಸ್, ವರ್ಮೊಂಟ್, ನ್ಯೂ ಹ್ಯಾಂಪ್ಶೈರ್, ಯುಎಸ್‌ನ ಮೈನೆ ಮತ್ತು ಒಂಟಾರಿಯೊ, ಕ್ವಿಬೆಕ್, ನ್ಯೂ ಬ್ರನ್ಸ್ವಿಕ್, ಪ್ರಿನ್ಸ್ ಎಡ್ವರ್ಡ್ ಐಲ್ಯಾಂಡ್, ಕೆನಡಾದ ನೋವಾ ಸ್ಕಾಟಿಯಾ ಮತ್ತು ನ್ಯೂಫೌಂಡ್ಲ್ಯಾಂಡ್‌ನಲ್ಲಿ ಗ್ರಹಣವನ್ನುಕಾಣಬಹುದು



# ಇಂದ್ರಪ್ರಸ್ಥಪತ್ತೆಗೆ ಮತ್ತೆ ಉತ್ಖನನ

**ನವದೆಹಲಿ:** ಭಾರತದ ರಾಜಧಾನಿ, ದೆಹಲಿಯು ಪಾಂಡವರ ಮೂಲ ರಾಜಧಾನಿ 'ಇಂದ್ರಪ್ರಸ್ಥ' ಎಂದು ಹೇಳಲಾಗುತ್ತಿದೆ. ಇದರ ಪುರಾವೆಗಳನ್ನು ಸಂಗ್ರಹಿಸಲು ಕಳೆದ 60 ರಿಂದ 70 ವರ್ಷಗಳಿಂದ ವಿವಿಧ ಸಮಯಗಳಲ್ಲಿ ಉತ್ಖನನಗಳನ್ನು ನಡೆಸಲಾಗಿದೆ. ಈಗ ಆರನೇ ಬಾರಿಗೆ ಉತ್ಖನನ ಅಭಿಯಾನ ಕೈಗೆತ್ತಿಕೊಳ್ಳಲಾಗುವುದು.

ಇಂದ್ರಪ್ರಸ್ಥವನ್ನು ಹುಡುಕುವ ಕೊನೆಯ ಪ್ರಯತ್ನ ಇದಾಗಿದೆ ಎಂದು ಹೇಳಲಾಗುತ್ತಿದೆ. ರಾಜಧಾನಿಯ ಪುರಾಣ ಕೋಟೆಯಲ್ಲಿ ಉತ್ಖನನಗಳು ಮುಂದಿನ ತಿಂಗಳಿನಿಂದ ಪ್ರಾರಂಭವಾಗುವ ಸಾಧ್ಯತೆಯಿದೆ. ಇದನ್ನು ಪಾಂಡವರ ಕೋಟೆ ಎಂದು ಪರಿಗಣಿಸಲಾಗಿದೆ.

ಹಿಂದಿನ 5 ಉತ್ಖನನಗಳಲ್ಲಿ, ವಿಷ್ಣು, ಗಣೇಶ ಮತ್ತು ಲಕ್ಷ್ಮಿ ವಿಗ್ರಹಗಳು ಸೇರಿದಂತೆ ಮೌರ್ಯರ ಕಾಲದ ವಿವಿಧ ಕಾಲದ ಅವಶೇಷಗಳು ಕಂಡುಬಂದಿವೆ. ಈ ಅವಶೇಷಗಳು 2 ಸಾವಿರದ 500 ವರ್ಷಗಳಷ್ಟು ಹಳೆಯವು ಎಂದು ಅಂದಾಜಿಸಲಾಗಿದೆ. ಭಾರತ ಸರಕಾರದ ಸೂಚನೆಗಳನ್ನು ಅನುಸರಿಸಿ, ಈ ಬಾರಿ ಅತ್ಯಾಧುನಿಕ ತಂತ್ರಜ್ಞಾನವನ್ನು ಉತ್ಖನನದಲ್ಲಿ ಬಳಸಲಾಗುವುದು. ಪುರಾತತ್ವ ಇಲಾಖೆಯು ಅತ್ಯಾಧುನಿಕ ವ್ಯವಸ್ಥೆಯಡಿ 'ಲಿಡರ್' ಸಮೀಕ್ಷೆಯನ್ನು ಯೋಜಿಸುತ್ತಿದೆ. ಈ ಮೂಲಕ ಮಣ್ಣಿನ ಅಡಿಯಲ್ಲಿ ಹೂತಿರುವ ಅವಶೇಷಗಳನ್ನು ಕಂಡುಹಿಡಿಯಲಾಗುತ್ತದೆ. ಇದರ ಜವಾಬ್ದಾರಿಯನ್ನು ಹಿರಿಯ ಅಧಿಕಾರಿ ವಸಂತ ಸ್ವರ್ಣಕರ್ ಅವರಿಗೆ ನೀಡಲಾಗಿದೆ. ಅವರೇ ಪುರಾಣ ಕೋಟೆಯನ್ನು ಮೂರು ಬಾರಿ ಉತ್ಖನನ ಮಾಡಿದ್ದಾರೆ.

## ಬಿಜೆಪಿಗೆ ಸೇರ್ಪಡೆಗೊಂಡ ಕಾಂಗ್ರೆಸ್ ಮಾಜಿ ನಾಯಕ ನವೀನ್ ಜಿಂದಾಲ್

**ನವದೆಹಲಿ:** ಚುನಾವಣೆ ಹೊತ್ತಲ್ಲೇ ಕೈಗಾರಿಕೋದ್ಯಮಿ ಮತ್ತು ಕಾಂಗ್ರೆಸ್ ಮಾಜಿ ನಾಯಕ ನವೀನ್ ಜಿಂದಾಲ್ ಭಾನುವಾರ ಆಡಳಿತಾರೂಢ ಬಿಜೆಪಿಗೆ ಸೇರ್ಪಡೆಗೊಂಡಿದ್ದಾರೆ. ನಾನು 10 ವರ್ಷಗಳ ಕಾಲ ಕುರುಕ್ಷೇತ್ರ, ಕ್ಷೇತ್ರದಿಂದ ಸಂಸದನಾಗಿ ಸಂಸತ್ತಿನಲ್ಲಿ ಕಾಂಗ್ರೆಸ್ ಪಕ್ಷವನ್ನು ಪ್ರತಿನಿಧಿಸಿದ್ದೇನೆ. ನಾನು ಕಾಂಗ್ರೆಸ್ ನಾಯಕತ್ವ ಮತ್ತು ಅಂದಿನ ಪ್ರಧಾನಿ ಡಾ.ಮನಮೋಹನ್ ಸಿಂಗ್ ಅವರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ಜಿಂದಾಲ್ ತಿಳಿಸಿದ್ದಾರೆ. ಈಗ ನಾನು ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದ್ದರು. ಅದಾದ ಬಳಿಕ ಈಗ ಬಿಜೆಪಿ ಸೇರ್ಪಡೆಗೊಂಡಿದ್ದಾರೆ. ಭಾರತೀಯ ವಾಯುಪಡೆಯ ಮಾಜಿ ಮುಖ್ಯಸ್ಥ ಆರ್‌ಕೆಎಸ್ ಬದೌರಿಯಾ ಬಿಜೆಪಿ ಸೇರಿದ ಕೆಲವೇ ಗಂಟೆಗಳಲ್ಲಿ ಜಿಂದಾಲ್ ಅವರ ಪ್ರವೇಶವಾಗಿದೆ.



# ಮಂಡಿ ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಯಾಗಿ ಕಂಗನಾ ಕಣಕ್ಕೆ



**ನವದೆಹಲಿ:** ಮೊದಲಿನಿಂದಲೂ ನರೇಂದ್ರ ಮೋದಿ ನೇತೃತ್ವದ ಸರ್ಕಾರವನ್ನು ಬೆಂಬಲಿಸುತ್ತಾ ಬಂದಿದ್ದ ಕಂಗನಾ ರಣಾವತ್ ಅವರಿಗೆ ಈಗ ಬಿಜೆಪಿ ಟಿಕೆಟ್ ನೀಡಿದೆ. ಅಭ್ಯರ್ಥಿಗಳ 5ನೇ ಪಟ್ಟಿಯನ್ನು ಬಿಡುಗಡೆ ಮಾಡಿದ ಬಿಜೆಪಿಯಲ್ಲಿ ನಟಿ ಕಂಗನಾ ರಣಾವತ್ ಅವರ ಹೆಸರು ಕೂಡ ಸೇರಿಸಿದ್ದಾರೆ. ಹಿಮಾಚಲ ಪ್ರದೇಶದ ಮಂಡಿ ಕ್ಷೇತ್ರದಿಂದ ಅವರು ಬಿಜೆಪಿ ಅಭ್ಯರ್ಥಿಯಾಗಿ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧಿಸಲಿದ್ದಾರೆ. ಅಧಿಕೃತವಾಗಿ ಕಂಗನಾ ರಣಾವತ್ ಅವರು ರಾಜಕೀಯದ ಅಖಾಡಕ್ಕೆ ಇಳಿಯುತ್ತಿದ್ದಾರೆ. 'ನಾನು ರಾಜಕೀಯಕ್ಕೆ ಎಂಟ್ರಿ ನೀಡುವುದಾದರೆ ಇದು ಸೂಕ್ತ ಸಮಯ' ಎಂದು ಕಂಗನಾ ರಣಾವತ್ ಅವರು ಇತ್ತೀಚೆಗೆ ಹೇಳಿದ್ದರು.

## ಬ್ರೆಝಿಲ್ ಚಂಡಮಾರುತ 12 ಮಂದಿ ಸಾವು

**ಬ್ರಸೀಲಿಯಾ:** ಆಗ್ನೇಯ ಬ್ರೆಝಿಲ್ಗೆ ಅಪ್ಪಳಿಸಿದ ಪ್ರಬಲ ಚಂಡಮಾರುತದಿಂದ ಕನಿಷ್ಠ 12 ಮಂದಿ ಮೃತಪಟ್ಟಿದ್ದು ಹಲವರು ಗಾಯಗೊಂಡಿದ್ದಾರೆ. ಸಾವಿರಾರು ಮಂದಿಯನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ರಿಯೊ ಡಿ ಜನೈರೊದ ಪರ್ವತ ಪ್ರದೇಶಗಳ ಸುತ್ತಮುತ್ತ ಚಂಡಮಾರುತದಿಂದ ವ್ಯಾಪಕ ನಾಶ-ನಷ್ಟವಾಗಿದ್ದು ಶೋಧ ಮತ್ತು ರಕ್ಷಣಾ ಕಾರ್ಯ ತಂಡವನ್ನು ನಿಯೋಜಿಸಲಾಗಿದೆ. ರಿಯೊ ಡಿ ಜನೈರೊದ ಪೆಟ್ರೊಪೊಲಿಸ್ ನಗರದಲ್ಲಿ ಮನೆಯೊಂದು ಕುಸಿದುಬಿದ್ದು ಮನೆಯಲ್ಲಿದ್ದ 4 ಮಂದಿ ಸಾವನ್ನಪ್ಪಿದ್ದಾರೆ. 16 ಗಂಟೆ ಮನೆಯ ಅವಶೇಷಗಳಡಿ ಸಿಲುಕಿದ್ದ ಬಾಲಕಿಯನ್ನು ಶನಿವಾರ ರಕ್ಷಿಸಲಾಗಿದ್ದು ಆಸ್ಪತ್ರೆಯಲ್ಲಿ ಚೇತರಿಸಿಕೊಳ್ಳುತ್ತಿದ್ದಾಳೆ. ರಿಯೊ ಡಿ ಜನೈರೊ ರಾಜ್ಯದಲ್ಲೇ ಕನಿಷ್ಠ 8 ಮಂದಿ ಮೃತಪಟ್ಟಿದ್ದರೆ ನೆರೆಯ ಎಸ್ಪಿರಿಟೊ ಸ್ಯಾಂಟೊ ರಾಜ್ಯದಲ್ಲಿ ಕನಿಷ್ಠ 4 ಮಂದಿ ಸಾವನ್ನಪ್ಪಿದ್ದು 7 ಮಂದಿ ನಾಪತ್ತೆಯಾಗಿರುವುದು ದೃಢಪಟ್ಟಿದೆ. ತೀವ್ರ ವೇಗದ ಸುಂಟರಗಾಳಿ ಬೀಸುತ್ತಿರುವುದು ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗಿದೆ. ಹಲವು ಮನೆಗಳಿಗೆ ಹಾನಿಯಾಗಿದ್ದು ಸಾವಿರಾರು ಮಂದಿಯನ್ನು ಸುರಕ್ಷಿತ ಪ್ರದೇಶಕ್ಕೆ ಸ್ಥಳಾಂತರಿಸಲಾಗಿದೆ.



# ಬ್ರಿಟನ್‌ನಲ್ಲಿ ಆರ್ಥಿಕ ಹಿಂಜರಿತ

**ಲಂಡನ್:** 2023ರ ನಾಲ್ಕನೆ ತ್ರೈಮಾಸಿಕದಲ್ಲಿ ಬ್ರಿಟನ್ ನ ಜಿಡಿಪಿ ಶೇ. 0.3ರಷ್ಟು ಕುಗ್ಗಿರುವುದರಿಂದ ಬ್ರಿಟನ್ ಅಧಿಕೃತವಾಗಿ ಆರ್ಥಿಕ ಹಿಂಜರಿತಕ್ಕೆ ತಲುಪಿದೆ. ರಾಯಿಟರ್ಸ್ ವರದಿಗಳ ಪ್ರಕಾರ, ತಲಾ ವ್ಯಕ್ತಿಯ ಜಿಡಿಪಿ ಕುಗ್ಗಿರುವುದರಿಂದ ಯಾವುದೇ ಬೆಳವಣಿಗೆ ಇಲ್ಲದೆ ದೀರ್ಘಾವಧಿ ಆರ್ಥಿಕ ಹಿಂಜರಿತ ದಾಖಲಾಗಿದೆ.



ಈ ಆರ್ಥಿಕ ಹಿಂಜರಿತದ ಹಿನ್ನೆಲೆಯಲ್ಲಿ ಭಾರತೀಯ ಅಂತಾರಾಷ್ಟ್ರೀಯ ವಿದ್ಯಾರ್ಥಿಗಳು ತಮ್ಮ ಭವಿಷ್ಯದ ಕುರಿತು ಕಳವಳ ಪಡುವಂತಾಗಿದೆ. ವ್ಯಾಸಂಗ ಮುಗಿದ ನಂತರ ಉದ್ಯೋಗ ದೊರೆಯದೆ ನಮ್ಮ ವ್ಯಾಸಂಗೋತ್ತರ ಉದ್ಯೋಗ ವೀಸಾದ ಅವಧಿಯು ಮುಗಿದು ಹೋಗಬಹುದು ಎಂದು ಹಲವಾರು ವಿದ್ಯಾರ್ಥಿಗಳು ಕಳವಳ ವ್ಯಕ್ತಪಡಿಸಿದ್ದಾರೆ.

**ಉದ್ಯೋಗ ಬಿಕ್ಕಟ್ಟು:** ಸ್ಟರ್ಲಿಂಗ್ ವಿಶ್ವವಿದ್ಯಾಲಯದಲ್ಲಿ ಮಾಧ್ಯಮ ನಿರ್ವಹಣೆ ವಿದ್ಯಾರ್ಥಿಯಾಗಿರುವ ವೈಷ್ಣವಿ ಜಾವಲ್ಕರ್, ನಾನು ನನ್ನ ಭವಿಷ್ಯದ ಬಗ್ಗೆ ಕಳವಳಗೊಂಡಿದ್ದು, ಅರೆಕಾಲಿಕ ಉದ್ಯೋಗ ಪಡೆಯಲು ಒದ್ದಾಡುತ್ತಿದ್ದೇನೆ. ಕೇವಲ ಪೂರ್ಣಕಾಲಿಕ ಉದ್ಯೋಗ ಮಾತ್ರ ಉಳಿದಿದೆ ಎಂದು ಹೇಳುತ್ತಾರೆ. ಬ್ರಿಟನ್ ಸರಕಾರವು ಹಾಗೂ ವಿಶ್ವವಿದ್ಯಾಲಯಗಳು ಅಂತಾರಾಷ್ಟ್ರೀಯ ವಿದ್ಯಾರ್ಥಿಗಳು ತಮ್ಮ ವಿಶ್ವದರ್ಜೆಯ ಶಿಕ್ಷಣವನ್ನು ಮುಂದುವರಿಸಲು ತಮ್ಮಲ್ಲಿಗೆ ಆಹ್ವಾನಿಸಲು ಎಲ್ಲ ಪ್ರಯತ್ನಗಳನ್ನೂ ಮಾಡಿವೆ. ಆದರೆ, ಅವು ವಿದ್ಯಾರ್ಥಿಗಳಿಗೆ ಉದ್ಯೋಗ ದೊರೆಯುವಂತೆ ಮಾಡುವ ತಮ್ಮ ಪ್ರಾಥಮಿಕ ಭರವಸೆಯನ್ನು ಉಳಿಸಿಕೊಳ್ಳುವಲ್ಲಿ ವಿಫಲಗೊಂಡಿವೆ. ರೂ. 25 ಲಕ್ಷ ಸಾಲವನ್ನು ಪಡೆದಿರುವುದರಿಂದ ನಾನು ವೃತ್ತಿ ಜೀವನದಲ್ಲಿ ರಾಜಿ ಮಾಡಿಕೊಂಡಿದ್ದು, ನನ್ನ ದೈನಂದಿನ ವೆಚ್ಚಗಳಿಗಾಗಿ ಅರೆಕಾಲಿಕ ಉದ್ಯೋಗಗಳನ್ನು ಅವಲಂಬಿಸಿದ್ದೇನೆ ಎಂದು ಅವರು ಹೇಳುತ್ತಾರೆ.

# ಹೋಳಿ ಸಂಭ್ರಮಾಚರಣೆ ಮುಸ್ಲಿಂ ಮಹಿಳೆಗೆ ಕಿರುಕುಳ



**ಲಕ್ನೋ:** ಉತ್ತರ ಪ್ರದೇಶದ ಬಿಜ್ನೋರ್‌ನಲ್ಲಿ ಹೋಳಿ ಸಂಭ್ರಮಾಚರಣೆ ವೇಳೆ ಮುಸ್ಲಿಂ ಮಹಿಳೆಗೆ ಕಿರುಕುಳ ನೀಡಿದ್ದಕ್ಕೆ ವ್ಯಕ್ತಿಯೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ವ್ಯಕ್ತಿಯ ಜೊತೆಗೆ ಮೂವರು ಅಪ್ರಾಪ್ತರನ್ನು ವಶಕ್ಕೆ ಪಡೆದು ವಿಚಾರಣೆಗೊಳಪಡಿಸಿದ್ದಾರೆ. ಮುಸ್ಲಿಂ ದಂಪತಿ ಬೈಕ್‌ನಲ್ಲಿ ಹೋಗುತ್ತಿದ್ದರು.ಈ ವೇಳೆ ಸ್ಥಳದಲ್ಲೇ ಹೋಳಿ ಸಂಭ್ರಮಾಚರಣೆ ಮಾಡುತ್ತಿದ್ದ ಗುಂಪೊಂದು, ಬೈಕ್‌ನಲ್ಲಿ ತೆರಳುತ್ತಿದ್ದ ದಂಪತಿಯನ್ನು ತಡೆದಿದ್ದಾರೆ. ಅಲ್ಲದೇ ಪೈಪ್ ಮೂಲಕ ಮಹಿಳೆ ಮೇಲೆ ನೀರು ಹಾರಿಸಿದ್ದಾರೆ. ಇದಕ್ಕೆ ಮಹಿಳೆ ವಿರೋಧಿಸಿದರೂ ಗುಂಪು ಕಿರುಕುಳ ನೀಡುವುದನ್ನು ನಿಲ್ಲಿಸಲಿಲ್ಲ. ಮುಸ್ಲಿಂ ಮಹಿಳೆ ಮುಖಕ್ಕೆ ಬಲವಂತವಾಗಿ ಬಣ್ಣ ಬಳಿದಿದ್ದಾರೆ. ಈ ದೃಶ್ಯದ ವೀಡಿಯೋ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ. ವಿಡಿಯೋ ವೈರಲ್ ಆದ ಕೂಡಲೇ ಬಿಜ್ನೋರ್ ಪೊಲೀಸ್ ಮುಖ್ಯಸ್ಥ ನೀರಜ್ ಕುಮಾರ್ ಜದೌನ್, ಸ್ಥಳೀಯ ಪೊಲೀಸರಿಗೆ ಕ್ರಮ ಕೈಗೊಳ್ಳುವಂತೆ ಸೂಚಿಸಿದ್ದಾರೆ. ಸ್ವಯಂಪ್ರೇರಣೆಯಿಂದ ಮಹಿಳೆಗೆ ನೋವುಂಟು ಮಾಡುವುದು ಮತ್ತು ಹಲ್ಲೆ ಸೇರಿದಂತೆ ಹಲವು ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ.

# ಇಸ್ರೇಲ್ ಹಠಾತ್ ದಾಳಿಗೆ 170 ಹಮಾಸ್ ಉಗ್ರರ ಬಲಿ

**ಟೆಲ್ ಅವಿವ್:** ಇಸ್ರೇಲ್ ಮತ್ತು ಪ್ಯಾಲೆಸ್ಟೀನ್ ನಡುವಿನ ಯುದ್ಧ ಆರು ತಿಂಗಳ ಬಳಿಕವೂ ಇನ್ನೂ ಬಿಸಿ ಕಾಯ್ದುಕೊಂಡಿದೆ. ಹಮಾಸ್ ಉಗ್ರರ ನೆಲೆಗಳ ಮೇಲೆ ಇಸ್ರೇಲ್ ಹೂಡಿರುವ ಅಲ್ ಶಿಫಾ ದಾಳಿಯಲ್ಲಿ 170 ಉಗ್ರರು ಹತರಾಗಿದ್ದಾರೆ. 800 ಕ್ಕೂ ಶಂಕಿತ ಉಗ್ರರನ್ನು ವಶಕ್ಕೆ ಪಡೆದಿರುವ ಇಸ್ರೇಲ್ , ಅವರನ್ನು ವಿಚಾರಣೆಗೊಳಪಡಿಸಿದೆ. 2023ರ ಅ. 7 ರಂದು ಗಾಜಾಪಟ್ಟಿಯಲ್ಲಿ ಅತಿಕ್ರಮಣ ಮಾಡಿದ್ದ ಹಮಾಸ್ ಉಗ್ರರು ಅಸಂಖ್ಯಾತ ಇಸ್ರೇಲ್ ನಾಗರಿಕರನ್ನು ದಾರುಣವಾಗಿ ಹತ್ಯೆಗೈದಿದ್ದರು. ಮಹಿಳೆಯರು ಮತ್ತು ಮಕ್ಕಳನ್ನು ಯುದ್ಧಕೈದಿಗಳಾಗಿ ಇರಿಸಿಕೊಂಡಿದ್ದಲ್ಲದೇ, ಮೃತ ಯುವತಿಯರ ಶವಗಳನ್ನು ಬಹಿರಂಗ ಮೆರವಣಿಗೆ ಮಾಡಿ ರಾಕ್ಷಸೀಯತೆ ಪ್ರದರ್ಶಿಸಿದ್ದರು. ಅಂದಿನಿಂದ ಸತತವಾಗಿ ಎರಡೂ ದೇಶಗಳ ನಡುವೆ ಯುದ್ಧ ಸಾಗುತ್ತಿದ್ದು, ಸಧ್ಯಕ್ಕೆ ಗಾಜಾದಲ್ಲಿರುವ ಅಲ್ ಶಿಫಾ ಆಸ್ಪತ್ರೆ ಯುದ್ಧದ ಕೇಂದ್ರವಾಗಿ ಮಾರ್ಪಟ್ಟಿದೆ. ಹಮಾಸ್ ಉಗ್ರರು, ಆಸ್ಪತ್ರೆಗಳನ್ನು ಅಡಗುತಾಣವಾಗಿರಿಸಿಕೊಂಡಿರುವುದಲ್ಲದೇ ಅಲ್ಲಿ ಸುರಂಗ ಮಾರ್ಗ ನಿರ್ಮಿಸಿ ಭಯೋತ್ಪಾದನಾ ಚಟುವಟಿಕೆಗಳನ್ನು ನಡೆಸುತ್ತಿದ್ದ ದೃಶ್ಯಗಳನ್ನು ಇಸ್ರೇಲ್ ಬಹಿರಂಗಪಡಿಸಿತ್ತು.



# ಸೈನಿಕರ ಜೊತೆ ರಾಜನಾಥ್ ಸಿಂಗ್ ಹೋಳಿ

**ನವದೆಹಲಿ:** ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೋಳಿ ಹಬ್ಬದ ಪ್ರಯುಕ್ತ ಲಡಾಖ್‌ನ ಲೇಹ್ಗೆ ತೆರಳಿ ಸೈನಿಕರೊಂದಿಗೆ ಹೋಳಿ ಹಬ್ಬವನ್ನು ಆಚರಿಸಿದರು.

ಹೋಳಿ ಹಬ್ಬ ಆಚರಣೆಯ ಸಮಯದಲ್ಲಿ ರಾಜನಾಥ್ ಸಿಂಗ್ ಜೊತೆ ಸೇನಾ ಮುಖ್ಯಸ್ಥ ಜನರಲ್ ಮನೋಜ್ ಪಾಂಡೆ ಮತ್ತು ಲೆಫ್ಟಿನೆಂಟ್ ಜನರಲ್ ರಶೀಮ್ ಬಾಲಿ ಇದ್ದರು.

ರಕ್ಷಣಾ ಸಚಿವರು ಅತಿ ಎತ್ತರದ ಯುದ್ಧಭೂಮಿ ಸಿಯಾಚಿನ್ ಪ್ರದೇಶಕ್ಕೆ ಭೇಟಿ ನೀಡಲು ನಿರ್ಧರಿಸಿದ್ದರು. ಆದರೆ ಪ್ರತಿಕೂಲ ಹವಾಮಾನದಿಂದ ಸಾಧ್ಯವಾಗಲಿಲ್ಲ. ಈ ಕಾರಣದಿಂದಾಗಿ ಅಲ್ಲಿನ ಕಮಾಂಡಿಂಗ್ ಅಧಿಕಾರಿಯೊಂದಿಗೆ ದೂರವಾಣಿ ಮೂಲಕ ಮಾತನಾಡಿದ ರಾಜನಾಥ್ ಸಿಂಗ್, ಆದಷ್ಟು ಬೇಗ ಸಿಯಾಚಿನ್ ಪ್ರದೇಶಕ್ಕೆ ಭೇಟಿ ನೀಡಿ ಅವರನ್ನು ಭೇಟಿ ಮಾಡುವುದಾಗಿ ತಿಳಿಸಿದರು.

ಈ ವೇಳೆ ಯೋಧರನ್ನುದ್ದೇಶಿಸಿ ಮಾತನಾಡಿದ ಅವರು, ದೆಹಲಿ ನಮ್ಮ ರಾಜಧಾನಿಯಾದರೇ, ಲಡಾಖ್ ಶೌರ್ಯವನ್ನು ತೋರಿಸುವ ಮತ್ತೊಂದು ರಾಜಧಾನಿಯಾಗಿದೆ. ನಿಮ್ಮೆಲ್ಲರನ್ನು ಭೇಟಿ ಮಾಡಿ ಹೋಳಿ ಆಚರಿಸಿರುವುದು ನನಗೆ ಅತ್ಯಂತ



ಸಂತೋಷದಾಯಕ ಕ್ಷಣ. ಸಿಯಾಚಿನ್ ಸಾಮಾನ್ಯ ಪ್ರದೇಶವಲ್ಲ. ಇದು ಭಾರತದ ಸಾರ್ವಭೌಮತ್ವ ಮತ್ತು ನಿರ್ಣಯದ ಸಂಕೇತ. ಇದು ನಮ್ಮ ರಾಷ್ಟ್ರೀಯ ನಿರ್ಣಯವನ್ನು ಪ್ರತಿನಿಧಿಸುತ್ತದೆ ಎಂದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಬಾಲಿವುಡ್‌ನಲ್ಲಿ ರಿಮೇಕ್ ಆಗಲಿದೆ 'ಉಪ್ಪೇನಾ' ಚಿತ್ರ- ನಾಯಕಿ ಯಾರು?

ತೆಲುಗಿನ ಸೂಪರ್ ಹಿಟ್ 'ಉಪ್ಪೇನಾ' ಸಿನಿಮಾ ಬಾಲಿವುಡ್‌ಗೆ ರಿಮೇಕ್ ಮಾಡಲು ನಿರ್ಮಾಪಕ ಬೋನಿ ಕಪೂರ್ ನಿರ್ಧರಿಸಿದ್ದಾರೆ. ಕೃತಿ ಶೆಟ್ಟಿ–ವೈಷ್ಣವ್ ತೇಜ್ ನಟಿಸಿದ ಈ ಚಿತ್ರವನ್ನು ಹಿಂದಿ ವರ್ಷನ್‌ನಲ್ಲಿ ತೋರಿಸಲು ಯೋಚಿಸಿದ್ದಾರೆ. ನಾಯಕಿಯಾಗಿ ಕೃತಿ ಶೆಟ್ಟಿ ನಟಿಸಿದ್ದ ಪಾತ್ರಕ್ಕೆ ಸ್ಟಾರ್ ನಟಿಯ ಮಗಳನ್ನೇ ಆಯ್ಕೆ ಮಾಡಿದ್ದಾರೆ.

ಬುಚ್ಚಿಬಾಬು ಸನಾ ಅವರು 'ಉಪ್ಪೇನಾ' ಸಿನಿಮಾ ನಿರ್ದೇಶನ ಮಾಡಿ ಗೆದ್ದು ಬೀಗಿದ್ದರು. ಈ ಚಿತ್ರದಿಂದ ಕೃತಿ ಶೆಟ್ಟಿಗೆ ಬಂಪರ್ ಅವಕಾಶಗಳು ಸಿಕ್ಕಿದ್ದವು. ಈ ಕಥೆಯನ್ನು ಪ್ರೇಕ್ಷಕರು ನೋಡಿ ಗೆಲ್ಲಿಸಿದ್ದರು. ದಕ್ಷಿಣದ ಚಿತ್ರಗಳೇ ಸಿನಿಮಾರಂಗದಲ್ಲಿ ಕ್ಲಿಕ್ ಆಗುತ್ತಿರೋ ಕಾರಣ, ಇದೇ ಸಿನಿಮಾವನ್ನು ರಿಮೇಕ್ ಮಾಡಲು ನಿರ್ಮಾಪಕ ಬೋನಿ ಕಪೂರ್ ಮನಸ್ಸು ಮಾಡಿದ್ದಾರೆ. ಬೋನಿ ಕಪೂರ್– ಶ್ರೀದೇವಿ ಅವರ 2ನೇ ಪುತ್ರಿ ಖುಷಿ ಕಪೂರ್ ಅವರನ್ನು ನಾಯಕಿಯಾಗಿ ಫೈನಲ್ ಮಾಡಿದ್ದಾರೆ. ಅವರ ಸಲುವಾಗಿಯೇ ಈ ಚಿತ್ರವನ್ನು ಬೋನಿ ಕಪೂರ್ ನಿರ್ಮಾಣ ಮಾಡುತ್ತಿದ್ದಾರೆ. ಈ ಸುದ್ದಿ ಕೇಳ್ತಿದ್ದಂತೆ ಬೋನಿ ಕಪೂರ್ ಅವರನ್ನು ನೆಟ್ಟಿಗರು ಟ್ರೋಲ್ ಮಾಡುತ್ತಿದ್ದಾರೆ. ನೆಪೋಟಿಸಂ ಎಂದು ನೆಟ್ಟಿಗರು ಕುಟುಕಿದ್ದಾರೆ. ಟ್ರೋಲ್ ಮಾಡಲು ಕಾರಣ ಕೂಡ ಇದೆ. ಉಪ್ಪೇನಾ ಸಿನಿಮಾದ ಕಥೆ 'ಧಡಕ್' ಚಿತ್ರದ ಕಥೆಯ ರೀತಿಯೇ ಇದೆ. ಈ ಚಿತ್ರ ಮರಾಠಿಯ 'ಸೈರಾಟ್' ಚಿತ್ರದ ರಿಮೇಕ್. ಉಪ್ಪೇನಾ ಕ್ಲೈಮಾಕ್ಸ್‌ನಲ್ಲಿ ಬರುವ ಕೆಲವು ದೃಶ್ಯಗಳನ್ನು ಹೊರತುಪಡಿಸಿ ಬಹುತೇಕ ಕಥೆ ಅದೇ ರೀತಿ



ಇತ್ತು. ಈಗ ಹಿಂದಿಯಲ್ಲಿ 'ಉಪ್ಪೇನಾ' ರಿಮೇಕ್ ಮಾಡಿದರೆ ಹಿಂದಿ ಪ್ರೇಕ್ಷಕರು ಮತ್ತೊಮ್ಮೆ ಅದೇ ಕಥೆಯನ್ನು ನೋಡಬೇಕಾ ಎಂದು ನೆಟ್ಟಿಗರು ಟ್ರೋಲ್ ಮಾಡಲು ಆರಂಭಿಸಿದ್ದಾರೆ. ಈ ಬಗ್ಗೆ ಚಿತ್ರತಂಡ ಯಾವುದೇ ಪ್ರತಿಕ್ರಿಯೆ ನೀಡಿಲ್ಲ.

ಬೋನಿ ಕಪೂರ್ ಮೊದಲ ಪುತ್ರಿ ಜಾನ್ವಿ ಕಪೂರ್ ತೆಲುಗು ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಜ್ಯೂ. ಎನ್‌ಟಿಆರ್ ಮತ್ತು ರಾಮ್ ಚರಣ್ ಸಿನಿಮಾಗಳಿಗೆ ಹೀರೋಯಿನ್ ಆಗಿದ್ದಾರೆ. 2ನೇ ಪುತ್ರಿ ಖುಷಿ ಕಪೂರ್ ಕೂಡ ಚಿತ್ರರಂಗದಲ್ಲಿ ಗಟ್ಟಿ ನೆಲೆ ಗಿಟ್ಟಿಸಿಕೊಳ್ಳಬೇಕು ಎಂಬ ದೃಷ್ಟಿಯಿಂದ ಶ್ರೀದೇವಿ ಪತಿ ನಿರ್ಮಾಣಕ್ಕೆ ಸಾಥ್ ನೀಡುತ್ತಿದ್ದಾರೆ.

# 'ವಿಐಪಿ' ಆದ ವಸಿಷ್ಠ ಸಿಂಹ




ತಮ್ಮ ಅಮೋಘ ಅಭಿನಯದ ಮೂಲಕ ಅಭಿಮಾನಿಗಳ ಮನ ಗೆದ್ದಿರುವ ವಸಿಷ್ಠ ಸಿಂಹ ನಾಯಕರಾಗಿ ನಟಿಸುತ್ತಿರುವ ''ವಿಐಪಿ'' ಚಿತ್ರದ ಫಸ್ಟ್ ಲುಕ್ ಇತ್ತೀಚೆಗೆ ಬಿಡುಗಡೆಯಾಯಿತು. ಆದಿಚುಂಚನಗಿರಿ ಮಠದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶ್ರೀ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಹಾಗೂ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿ ಇವರ ದಿವ್ಯ ಸಾನಿಧ್ಯದಲ್ಲಿ ಈ ಚಿತ್ರದ ಫಸ್ಟ್ ಲುಕ್ ಬಿಡುಗಡೆಯಾಯಿತು. ಈ ಸಂದರ್ಭದಲ್ಲಿ ನಾಯಕ ವಸಿಷ್ಠ ಸಿಂಹ ಹಾಗೂ ಚಿತ್ರತಂಡ ಉಪಸ್ಥಿತರಿದ್ದರು. ಫಸ್ಟ್ ಲುಕ್ ನಲ್ಲಿ ವಸಿಷ್ಠ ಸಿಂಹ ಬ್ಯಾಟ್ ಹಿಡಿದಿದ್ದಾರೆ. ಮಾಸ್ ಫೀಲ್ ಇರುವಂತಹ ಪೋಸ್ಟರ್ ಕುತೂಹಲ ಮೂಡಿಸಿದೆ.

ಬಹು ನಿರೀಕ್ಷಿತ ಈ ಚಿತ್ರಕ್ಕೆ ಈಗಾಗಲೇ ಬೆಂಗಳೂರು ಸುತ್ತಮುತ್ತ ಎರಡು ಹಂತಗಳ ಚಿತ್ರೀಕರಣ ನಡೆದಿದೆ. ಈ ಭಾಗದಲ್ಲಿ ಮಾತಿನ ಭಾಗದ ಚಿತ್ರೀಕರಣ ಹಾಗೂ ''ಕೆ.ಜಿ.ಎಫ್'' ಖ್ಯಾತಿಯ ವಿಕ್ರಂ ಮೋರ್ , ''ಯುವ'' ಖ್ಯಾತಿಯ ಅರ್ಜುನ್ ಅವರ ಸಾಹಸ ನಿರ್ದೇಶನದಲ್ಲಿ ಸಾಹಸ ಸನ್ನಿವೇಶಗಳ ಚಿತ್ರೀಕರಣ ನಡೆದಿದೆ. ಕಲಾ ಸೃಷ್ಟಿ ಪ್ರೊಡಕ್ಷನ್ಸ್ ಲಾಂಛನದಲ್ಲಿ ಆರ್.ಎಸ್ . ಮೋಹನ್ ಕುಮಾರ್ ಹಾಗೂ ಆರ್ ಅಚ್ಯುತ್ ರಾವ್ ಅವರ ನಿರ್ಮಾಣದಲ್ಲಿ ಈ ಚಿತ್ರ ಅದ್ದೂರಿಯಾಗಿ ಮೂಡಿ ಬರುತ್ತಿದೆ. ಬ್ರಹ್ಮ ಈ ಚಿತ್ರದ ನಿರ್ದೇಶಕರು.

ವಿಭಿನ್ನ ಕಥಾಹಂದರ ಹಾಗೂ ಮೇಕಿಂಗ್ ನಿಂದ ಸದ್ದು ಮಾಡುತ್ತಿರುವ ''ವಿಐಪಿ'' ಚಿತ್ರದಲ್ಲಿ ವಸಿಷ್ಠ ಸಿಂಹ ಅವರಿಗೆ ನಾಯಕಿಯಾಗಿ ತೇಜಸ್ವಿನಿ ಶರ್ಮ ಅಭಿನಯಿಸುತ್ತಿದ್ದಾರೆ. ಸುನೀಲ್ ಪುರಾಣಿಕ್, ಬಲ ರಾಜವಾಡಿ , ಅಫ್ಜಲ್ , ಸ್ಪರ್ಶ ರೇಖಾ, ಸುಚೇಂದ್ರ ಪ್ರಸಾದ್ , ಹನುಮಂತೇಗೌಡ, ರಾಮ್ ಕಶ್ಯಪ್, ರಣವೀರ್ ಮುಂತಾದವರು ತಾರಾಬಳಗದಲ್ಲಿದ್ದಾರೆ.

ರಾಜೀವ್ ಗಣೇಸನ್ ಛಾಯಾಗ್ರಹಣ, ಹರ್ಷವರ್ಧನ್ ರಾಜ್ ಸಂಗೀತ ನಿರ್ದೇಶನ, ಸತೀಶ್ ಚಂದ್ರಯ್ಯ ಸಂಕಲನ ಈ ಚಿತ್ರದಲ್ಲಿರಲಿದೆ ಎಂದು ಕಾರ್ಯಕಾರಿ ನಿರ್ಮಾಪಕ ಅಫ್ಜಲ್ ತಿಳಿಸಿದ್ದಾರೆ.



## 'ಯುವ' ಚಿತ್ರದ ಪ್ರೀ ರಿಲೀಸ್ ಇವೆಂಟ್

# ಫೋಟೋ ಗ್ಯಾಲರಿ

ರಾಜಕುಮಾರ, ಕೆಜಿಎಫ್, ಕಾಂತಾರದಂತಹ ಜನಪ್ರಿಯ ಚಿತ್ರಗಳನ್ನು ನಿರ್ಮಾಣ ಮಾಡಿರುವ ಹೊಂಬಾಳೆ ಫಿಲಂಸ್ ಮೂಲಕ ವಿಜಯ್ ಕಿರಗಂದೂರ್ ಅವರು ನಿರ್ಮಿಸಿರುವ 'ಯುವ' ಚಿತ್ರದ ಪ್ರೀ ರಿಲೀಸ್ ಇವೆಂಟ್ ಇತ್ತೀಚಿಗೆ ಹೊಸಪೇಟೆಯಲ್ಲಿ ಅದ್ದೂರಿಯಾಗಿ ನೆರವೇರಿತು. ಯುವ ರಾಜಕುಮಾರ್ ಈ ಚಿತ್ರದ ಮೂಲಕ ನಾಯಕರಾಗಿ ಚಿತ್ರರಂಗ ಪ್ರವೇಶಿಸುತ್ತಿದ್ದಾರೆ. ಸಂತೋಷ್ ಆನಂದರಾಮ್ ನಿರ್ದೇಶಿಸಿದ್ದಾರೆ.

ಹೊಸಪೇಟೆಯ ಪುನೀತ್ ರಾಜಕುಮಾರ್ ಮೈದಾನದಲ್ಲಿ ಅದ್ದೂರಿಯಾಗಿ ಈ ವರ್ಣರಂಜಿತ ಸಮಾರಂಭ ನಡೆಯಿತು. ರಾಘವೇಂದ್ರ, ರಾಜಕುಮಾರ್, ಮಂಗಳ ರಾಘವೇಂದ್ರ, ರಾಜಕುಮಾರ್, ಅಶ್ವಿನಿ ಪುನೀತ್ ರಾಜಕುಮಾರ್, ವಿನಯ್ ರಾಜಕುಮಾರ್, ನಿರ್ಮಾಪಕ ವಿಜಯ್ ಕಿರಗಂದೂರ್, ನಿರ್ದೇಶಕ ಸಂತೋಷ್ ಆನಂದರಾಮ್, ನಾಯಕ ಯುವ ರಾಜಕುಮಾರ್, ಚಿತ್ರದಲ್ಲಿ ನಟಿಸಿರುವ ಅಚ್ಯುತಕುಮಾರ್, ಸುಧಾರಾಣಿ, ಹಿತ, ಗಿರಿರಾಜ್, ರಾಘು ಶಿವಮೊಗ್ಗ ಮುಂತಾದವರು ಭಾಗವಹಿಸಿದ್ದರು. ಚಿತ್ರದ ಅನೇಕ ತಂತ್ರಜ್ಞರು ಸಹ ಉಪಸ್ಥಿತರಿದ್ದರು.

ಯುವ ಚಿತ್ರ ಆಗಲು ಅಶ್ವಿನಿ ಪುನೀತ್ ರಾಜಕುಮಾರ್ ಅವರೆ ಕಾರಣ. ಅವರು ವಿಜಯ್ ಕಿರಗಂದೂರ್ ಅವರಿಗೆ ಫೋನ್ ಮಾಡಿ ನಮ್ಮ ಗುರು(ಯುವ ರಾಜಕುಮಾರ್) ವನ್ನು ನಿಮ್ಮ ಸಂಸ್ಥೆಯ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿಸಿ ಎಂದರು. ವಿಜಯ್ ಕಿರಗಂದೂರ್ ಅವರು ಒಪ್ಪಿ ಈ ಚಿತ್ರ ನಿರ್ಮಾಣ ಮಾಡಿದರು. ಯುವ ರಾಜಕುಮಾರ್ ಕೂಡ ಈ ಚಿತ್ರಕ್ಕಾಗಿ



ಸಾಕಷ್ಟು ಶ್ರಮ ಪಟ್ಟಿದ್ದಾರೆ. ಯುವ ಅವರು ಓಡುವ ಸನ್ನಿವೇಶವನ್ನು ಚಿತ್ರದ ಮೊದಲ ಸನ್ನಿವೇಶವಾಗಿ ಚಿತ್ರಿಸಿಕೊಳ್ಳಲಾಗಿದೆ. ಕಾರಣ, ಯುವ ಅವರು ಯಾವಾಗಲೂ ಚಿತ್ರರಂಗದಲ್ಲಿ ಓಡುವ ಕುದುರೆಯಾಗಿರಲಿ ಎಂದು. ಇನ್ನು ನನ್ನ ಚಿತ್ರತಂಡದ ಸಹಕಾರದಿಂದ ಈ ಚಿತ್ರ ಉತ್ತಮವಾಗಿ ಮೂಡಿ ಬಂದಿದೆ. ಇದೇ ಮಾರ್ಚ್ 29 ರಂದು ಚಿತ್ರ ಬಿಡುಗಡೆಯಾಗಲಿದೆ. ಎಲ್ಲರೂ ಬಂದು ಚಿತ್ರ ನೋಡಿ ಪ್ರೋತ್ಸಾಹಿಸಿ. ಈ ಸಂದರ್ಭದಲ್ಲಿ ನಾನು ನಿರ್ಮಾಪಕ ವಿಜಯ್ ಕಿರಗಂದೂರ್ ಅವರಿಗೆ, ಅಶ್ವಿನಿ ಪುನೀತ್ ರಾಜಕುಮಾರ್ ಅವರಿಗೆ, ನನ್ನ ತಂಡಕ್ಕೆ ಹಾಗೂ ವಿಶೇಷವಾಗಿ ಪುನೀತ್ ರಾಜಕುಮಾರ್ ಅವರ ಅಭಿಮಾನಿಗಳಿಗೆ ಧನ್ಯವಾದ ತಿಳಿಸುತ್ತೇನೆ ಎಂದರು ನಿರ್ದೇಶಕ ಸಂತೋಷ್ ಆನಂದರಾಮ್.

ನಾನು ಮೊದಲು ನನ್ನ ಚಿಕ್ಕಪ್ಪ ಪುನೀತ್ ರಾಜಕುಮಾರ್ ಹಾಗೂ ಚಿಕ್ಕಮ್ಮ ಪುನೀತ್ ರಾಜಕುಮಾರ್ ಅವರಿಗೆ ಧನ್ಯವಾದ ತಿಳಿಸುತ್ತೇನೆ ಎಂದು ಮಾತನಾಡಿದ ಯುವ ರಾಜಕುಮಾರ್, ಏಕೆಂದರೆ ನನ್ನನ್ನು ನಾಯಕನನ್ನಾಗಿ ಮಾಡಿ ಎಂದು ಅವರಿಬ್ಬರು ಹೊಂಬಾಳೆ ಫಿಲಂಸ್ ನ ವಿಜಯ್ ಕಿರಗಂದೂರ್ ಸರ್ ಗೆ ಹೇಳಿದ್ದಾರೆ. ಅವರಿಂದಲೇ ಸಾಕಷ್ಟು ಹಿಟ್ ಚಿತ್ರಗಳನ್ನು ಕೊಟ್ಟಿರುವ ಹೊಂಬಾಳೆ ಫಿಲಂಸ್ ನಿರ್ಮಾಣದ ಚಿತ್ರದಲ್ಲಿ ನಟಿಸಲು ಸಾಧ್ಯವಾಗಿದೆ. ನಿರ್ಮಾಪಕರಾದ ವಿಜಯ್ ಕಿರಗಂದೂರ್ ಹಾಗೂ ನಿರ್ದೇಶಕ ಸಂತೋಷ್ ಆನಂದರಾಮ್ ಅವರಿಗೂ ನಾನು ಚಿರ ಋಣಿ. ಈ ಚಿತ್ರಕ್ಕಾಗಿ ಸಾಕಷ್ಟು ತಯಾರಿ ಮಾಡಿಕೊಂಡಿದ್ದೆ. ಹಿರಿಯ ನಟರಾದ ಅಚ್ಯುತಕುಮಾರ್, ಸುಧಾರಾಣಿ ಮುಂತಾದವರಿಂದ ಸಾಕಷ್ಟು ಕಲಿತಿದ್ದೇನೆ. ನಾಯಕಿಯಾಗಿ ಸಪ್ತಮಿ ಗೌಡ ಅಭಿನಯಿಸಿದ್ದಾರೆ. ಇಡೀ ತಂಡದ ಶ್ರಮದಿಂದ ಚಿತ್ರ ಚೆನ್ನಾಗಿ ಬಂದಿದೆ. ನನ್ನ ಮೊದಲ ಚಿತ್ರಕ್ಕೆ ನಿಮ್ಮೆಲ್ಲರ ಹಾರೈಕೆ ಇರಲಿ ಎಂದರು.

ರಾಘವೇಂದ್ರ, ರಾಜಕುಮಾರ್, ಅಶ್ವಿನಿ ಪುನೀತ್ ರಾಜಕುಮಾರ್, ವಿನಯ್ ರಾಜಕುಮಾರ್ ಮುಂತಾದವರು ಯುವ ಚಿತ್ರ ಯಶಸ್ವಿಯಾಗಲಿ ಎಂದು ಹಾರೈಸಿದರು. ಈ ಸಮಾರಂಭದಲ್ಲಿ ಕರ್ನಾಟಕದ ಹೆಸರಾಂತ ಕಲಾವಿದರ ಗಾಯನ, ನೃತ್ಯ ಮುಂತಾದ ಮನೋರಂಜನಾ ಕಾರ್ಯಕ್ರಮಗಳು ಸಹ ಅದ್ಭುತವಾಗಿ ಮೂಡಿಬಂತು.

## ರಾಜಸ್ಥಾನ್ ರಾಯಲ್ಸ್‌ಗೆ 20 ರನ್‌ಗಳ ಅಮೋಘ ಜಯ

# ಸಂಜು-ಪರಾಗ್ ಬಹುಪರಾಕ್

ನಿಕೋಲಸ್ ಪೂರನ್, ಕೆ.ಎಲ್ ರಾಹುಲ್ ಅವರ ಅರ್ಧಶತಕಗಳ ಹೋರಾಟದ ಹೊರತಾಗಿಯೂ ರಾಜಸ್ಥಾನ್ ರಾಯಲ್ಸ್ ತಂಡ, ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ 20 ರನ್‌ಗಳ ಅಮೋಘ ಜಯ ಸಾಧಿಸಿದೆ.

ಜೈಪುರದ ಸವಾಯಿ ಮಾನ್ಸಿಂಗ್ ಕ್ರೀಡಾಂಗಣದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ್ ರಾಯಲ್ಸ್ ತಂಡ 20 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 193 ರನ್ ಗಳಿಸಿತ್ತು. 194 ರನ್‌ಗಳ ಗುರಿ ಬೆನ್ನತ್ತಿದ ಲಕ್ನೋ ಸೂಪರ್ ಜೈಂಟ್ಸ್ 20 ಓವರ್‌ಗಳಲ್ಲಿ 6 ವಿಕೆಟ್ ನಷ್ಟಕ್ಕೆ 173 ರನ್ ಗಳಿಸಿ ಸೋಲೊಪ್ಪಿಕೊಂಡಿತು.

ಕೊನೇ ಓವರ್‌ನಲ್ಲಿ ಲಕ್ನೋ ತಂಡದ ಗೆಲುವಿಗೆ 27 ರನ್ ಅಗತ್ಯವಿತ್ತು. ಬೌಲಿಂಗ್‌ನಲ್ಲಿದ್ದ ಅವೇಶ್ ಖಾನ್ ಮೊದಲೇ 2 ವೈಡ್ ಬಿಟ್ಟುಕೊಟ್ಟರು. ಉಳಿದ ನಾಲ್ಕು ಎಸೆತಗಳಲ್ಲಿ ಕ್ರೀಸ್‌ನಲ್ಲಿದ್ದ ಕೃನಾಲ್ ಪಾಂಡ್ಯ ಹಾಗೂ ನಿಕೋಲಸ್ ಪೂರನ್ ಕೇವಲ ಒಂದೊಂದು ರನ್ ಗಳಿಸುವಲ್ಲಿ ಸಮರ್ಥರಾದರು. ಇದರಿಂದ ಗೆಲುವು ರಾಜಸ್ಥಾನ್ ಪಾಲಾಯಿತು.

ಬೃಹತ್ ಮೊತ್ತದ ಚೇಸಿಂಗ್ ಆರಂಭಿಸಿದ ಲಕ್ನೋ ತಂಡ ಮೊದಲ ಮೂರು ಓವರ್ ಗಳಲ್ಲೇ 11 ರನ್‌ಗಳಿಗೆ 3 ವಿಕೆಟ್ ಕಳೆದುಕೊಂಡು ಕಂಗಾಲಾಗಿತ್ತು. ಇದರಿಂದ ತಂಡ ಅಲ್ಪ ಮೊತ್ತಕ್ಕೆ ಆಲೌಟ್ ಆಗಲಿದೆ ಎಂದು ನಿರೀಕ್ಷಿಸಲಾಗಿತ್ತು. ಆದ್ರೆ, ದೀಪಕ್ ಹೂಡಾ ಮತ್ತು ಕೆ.ಎಲ್ ರಾಹುಲ್ ನಡುವಿನ 49 ರನ್‌ಗಳ ಸಣ್ಣ ಜೊತೆಯಾಟ ತಂಡಕ್ಕೆ



ಚೇತರಿಕೆ ನೀಡಿತ್ತು. ಆದ್ರೆ, ಹೂಡಾ 26 ರನ್ ಗಳಿಸುತ್ತಿದ್ದಂತೆ ವಿಕೆಟ್ ಒಪ್ಪಿಸಿದರು.

ಬಳಿಕ 5ನೇ ವಿಕೆಟ್‌ಗೆ ಕ್ರೀಸ್‌ನಲ್ಲಿ ಭದ್ರವಾಗಿ ನೆಲೆಯೂರಿದ ಕೆ.ಎಲ್ ರಾಹುಲ್ ಹಾಗೂ ನಿಕೋಲಸ್ ಪೂರನ್ ಜೋಡಿ 52 ಎಸೆತಗಳಲ್ಲಿ 85 ರನ್‌ಗಳ ಜೊತೆಯಾಟ ನೀಡಿತ್ತು. ಇದರಿಂದ ತಂಡ ಗೆಲುವಿನ ಸನಿಹ ತಲುಪಿತ್ತು. ಕೊನೇ ಕ್ಷಣದಲ್ಲಿ ನಿಧಾನಗತಿಯ ಬ್ಯಾಟಿಂಗ್ ತಂಡದ ದಿಕ್ಕನ್ನೇ ಬದಲಿಸಿತು. ಲಕ್ನೋ ಪರ ನಿಕೋಲಸ್ ಪೂರನ್ 64 ರನ್ (41 ಎಸೆತ, 4 ಸಿಕ್ಸರ್, 4 ಬೌಂಡರಿ), ಕೆ.ಎಲ್ ರಾಹುಲ್ 58 ರನ್ (44 ಎಸೆತ, 4 ಬೌಂಡರಿ, 2 ಸಿಕ್ಸರ್), ಕ್ವಿಂಟನ್ ಡಿ ಕಾಕ್ 4 ರನ್, ಆಯುಷ್ ಬದೋನಿ 1 ರನ್, ದೀಪಕ್ ಹೂಡಾ 26 ರನ್, ಮಾರ್ಕಸ್ ಸ್ಟೋಯ್ನಿಸ್ 3 ರನ್ ಗಳಿಸಿದ್ರೆ, ಕೃನಾಲ್ ಪಾಂಡ್ಯ 3 ರನ್ ಗಳಿಸಿ ಕ್ರೀಸ್‌ನಲ್ಲಿ ಉಳಿದರು. ದೇವದತ್ ಪಡಿಕಲ್ ಶೂನ್ಯ ಸುತ್ತಿದರು.

ಮೊದಲು ಬ್ಯಾಟಿಂಗ್ ಮಾಡಿದ ರಾಜಸ್ಥಾನ ರಾಯಲ್ಸ್ ಉತ್ತಮ ಆರಂಭ ಪಡೆಯಲು ವಿಫಲವಾಯಿತು. ಆರಂಭಿಕ ಬ್ಯಾಟರ್ ಜೋಸ್ ಬಟ್ಲರ್ ಕೇವಲ 11 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಈ ಬೆನ್ನಲ್ಲೇ ಸ್ಫೋಟಕ ಪ್ರದರ್ಶನಕ್ಕಿಳಿದಿದ್ದ ಯಶಸ್ವಿ ಜೈಸ್ವಾಲ್ ಸಹ 12 ಎಸೆತಗಳಲ್ಲಿ 24 ರನ್ ಬಾರಿಸಿ ಔಟಾದರು.

5 ಓವರ್‌ಗಳಲ್ಲಿ 49 ರನ್‌ಗಳಿಗೆ ಎರಡು ವಿಕೆಟ್ ಕಳೆದುಕೊಂಡು ಕಂಗಾಲಾಗಿದ್ದ ರಾಜಸ್ಥಾನ ರಾಯಲ್ಸ್ ತಂಡಕ್ಕೆ ನಾಯಕ ಸಂಜು ಸ್ಯಾಮ್ಸನ್ ಹಾಗೂ ರಿಯಾನ್ ಪರಾಗ್ ಬ್ಯಾಟಿಂಗ್ ಬಲ ತುಂಬಿದರು. 59 ಎಸೆತಗಳಲ್ಲಿ ಈ ಜೋಡಿ 93 ರನ್‌ಗಳ ಜತೆಯಾಟ ನೀಡುವ ಮೂಲಕ ತಂಡಕ್ಕೆ ಚೇತರಿಕೆ ನೀಡಿದರು. ಸ್ಫೋಟಕ ಬ್ಯಾಟಿಂಗ್ ಮಾಡಿದ ರಿಯಾನ್ ಪರಾಗ್ 29 ಎಸೆತಗಳಲ್ಲಿ 43 ರನ್ (3 ಸಿಕ್ಸರ್, 1 ಬೌಂಡರಿ) ಬಾರಿಸಿ ವಿಕೆಟ್ ಒಪ್ಪಿಸಿದರು. ಕೊನೆಯವರೆಗೂ ಹೋರಾಡಿದ ಸಂಜು ಸ್ಯಾಮ್ಸನ್ ಆಕರ್ಷಕ ಅರ್ಧಶತಕ ಸಿಡಿಸಿ ಮಿಂಚಿದರು. ಸಂಜು ಸ್ಯಾಮ್ಸನ್ ಕೇವಲ 33 ಎಸೆತಗಳನ್ನು ಎದುರಿಸಿ 21ನೇ ಐಪಿಎಲ್ ಶತಕ ಸಿಡಿಸಿದರು. ಅಂತಿಮವಾಗಿ ಸಂಜು ಸ್ಯಾಮ್ಸನ್ 52 ಎಸೆತಗಳಲ್ಲಿ ಅಜೇಯ 82 ರನ್ (3 ಬೌಂಡರಿ, 6 ಸಿಕ್ಸರ್) ಸಿಡಿಸಿದರು. ಕೊನೆಯಲ್ಲಿ ಧ್ರುವ್ ಜುರೆಲ್ ಕೇವಲ 12 ಎಸೆತಗಳಲ್ಲಿ ತಲಾ 1 ಸಿಕ್ಸರ್, ಬೌಂಡರಿ ಸಹಿತ 20 ರನ್ ಬಾರಿಸಿದರು.

ಲಖನೌ ಸೂಪರ್ ಜೈಂಟ್ಸ್ ಪರ ನವೀನ್ ಉಲ್ ಹಕ್ ಎರಡು ವಿಕೆಟ್ ಪಡೆದರೆ, ರವಿ ಬಿಷ್ಣೋಯಿ ಹಾಗೂ ಮೊಯ್ಸಿನ್ ಖಾನ್ ತಲಾ ಒಂದೊಂದು ವಿಕೆಟ್ ಪಡೆದರು.

# ಮುಂಬೈ ವಿರುದ್ಧ ಗುಜರಾತ್‌ಗೆ 6 ರನ್‌ಗಳ ರೋಚಕ ಜಯ

ಸಾಯಿ ಸುದರ್ಶನ್ ಸಮಯೋಜಿತ ಬ್ಯಾಟಿಂಗ್ ಹಾಗೂ ಸಂಘಟಿತ ಬೌಲಿಂಗ್ ದಾಳಿ ನೆರವಿನಿಂದ ಮುಂಬೈ ಇಂಡಿಯನ್ಸ್ ವಿರುದ್ಧ ಗುಜರಾತ್ ಟೈಟನ್ಸ್ 6 ರನ್‌ಗಳ ಗೆಲುವು ದಾಖಲಿಸಿತು.

ಇಲ್ಲಿನ ಮೊಟೇರಾದ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ ಟಿ–20 ಟೂರ್ನಿಯ ಪಂದ್ಯದಲ್ಲಿ ಗುಜರಾತ್ ಕೊನೆ ಕ್ಷಣದಲ್ಲಿ ರೋಚಕ ಜಯ ಸಾಧಿಸಿತು. ಟಾಸ್ ಗೆದ್ದ ಮುಂಬೈ ತಂಡ ಬೌಲಿಂಗ್ ಆಯ್ಕೆ ಮಾಡಿಕೊಂಡಿತು.

ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 168 ರನ್ ಗಳಿಸಿತು. 169 ರನ್ ಗುರಿ ಬೆನ್ನತ್ತಿದ ಮುಂಬೈ 20 ಓವರ್‌ಗೆ 9 ವಿಕೆಟ್ ನಷ್ಟಕ್ಕೆ 162 ರನ್ ಗಳಿಸಿ ಸೋಲನುಭವಿಸಿತು.

ಗುಜರಾತ್ ಪರ ಸಾಯಿ ಸುದರ್ಶನ್ 45, ಶುಭಮನ್ ಗಿಲ್ 31 ರನ್ ಗಳಿಸಿದರು. ಉಳಿದಂತೆ ಯಾವ ಬ್ಯಾಟರ್ ಕೂಡ ಕ್ರೀಸ್‌ನಲ್ಲಿ ಹೆಚ್ಚು ಹೊತ್ತು ನಿಲ್ಲಲಿಲ್ಲ. ನೀರಸ ಬ್ಯಾಟಿಂಗ್ ಪ್ರದರ್ಶನದ ಹೊರತಾಗಿಯೂ ಗುಜರಾತ್ 168 ರನ್ ಗಳಿಸಿತು. ಆ ಮೂಲಕ ಮುಂಬೈ ಇಂಡಿಯನ್ಸ್ ತಂಡಕ್ಕೆ 169 ರನ್‌ಗಳ ಗುರಿ ನೀಡಿತು. ಮುಂಬೈ ಪರ ಬೂಮ್ರಾ ಉತ್ತಮ ಬೌಲಿಂಗ್ ದಾಳಿ ನಡೆಸಿ 3 ವಿಕೆಟ್ ಪಡೆದರು.



ಇತ್ತ 169 ರನ್ ಗುರಿ ಬೆನ್ನತ್ತಿದ ಮುಂಬೈ ತಂಡಕ್ಕೆ ಇಶಾನ್ ಕಿಶಾನ್ ಆರಂಭಿಕ ಆಘಾತ ನೀಡಿದರು. ನಾಲ್ಕು ಬಾಲ್ ಆಡಿದ ಅವರು ಶೂನ್ಯಕ್ಕೆ ಔಟಾಗಿ ಪೆವಿಲಿಯನ್ ಸೇರಿದರು. ರೋಹಿತ್ ಶರ್ಮಾ (43) ಹಾಗೂ ಡೆವಾಲ್ಡ್ ಬ್ರೆವಿಸ್ ಜವಾಬ್ದಾರಿಯುತ ಆಟವು ಮುಂಬೈಗೆ ಗೆಲುವಿನ ಭರವಸೆ ಮೂಡಿಸಿತ್ತು.

ಕೊನೆ ಎರಡು ಓವರ್ ವರೆಗೂ ಪಂದ್ಯ ರೋಚಕವಾಗಿತ್ತು. ಮುಂಬೈ ತಂಡದ ನಾಯಕ ಹಾರ್ದಿಕ್ ಪಾಂಡ್ಯ ಕ್ರೀಸ್‌ನಲ್ಲಿದ್ದರು. 19ನೇ ಓವರ್‌ನಲ್ಲಿ 1 ಸಿಕ್ಸ್ ಮತ್ತು 1 ಫೋರ್ ಹೊಡೆದು ಭರವಸೆಯನ್ನು ಮತ್ತಷ್ಟು ಹೆಚ್ಚಿಸಿದ್ದರು. ಆದರೆ ದೊಡ್ಡ ಹೊಡೆತಕ್ಕೆ ಕೈ ಹಾಕಿ ಕ್ಯಾಚ್ ಇತ್ತು ಪೆವಿಲಿಯನ್ ಸೇರಿದರು. ಇದು ಮುಂಬೈ ಅಭಿಮಾನಿಗಳಲ್ಲಿ ನಿರಾಸೆ ಮೂಡಿಸಿತು. ಗೆಲುವಿನ ಭರವಸೆಯಲ್ಲಿದ್ದ ಮುಂಬೈಗೆ ಪಾಂಡ್ಯ ಔಟಾಗಿದ್ದು, ಸೋಲಿನ ಸೂಚನೆ ನೀಡಿತು. ಕೊನೆಗೆ ಮುಂಬೈ 6 ರನ್‌ಗಳ ಸೋಲನುಭವಿಸಿತು.

ಗುಜರಾತ್ ಪರ ಅಜ್ಮತುಲ್ಲಾ ಒಮರ್ಜಾಯ್, ಉಮೇಶ್ ಯಾದವ್, ಸ್ಪೆನ್ಸರ್ ಜಾನ್ಸನ್, ಮೋಹಿತ್ ಶರ್ಮಾ ತಲಾ 2 ಹಾಗೂ ಸಾಯಿ ಕಿಶೋರ್ 1 ವಿಕೆಟ್ ಕಿತ್ತು ತಂಡದ ಗೆಲುವಿಗೆ ಸಹಕಾರಿಯಾದರು.

# ಬರಪೀಡಿತ ಇತರ ರಾಜ್ಯಗಳ ಮುಖ್ಯಮಂತ್ರಿಗಳನ್ನು ನೋಡಿ ಕಲಿಯಿರಿ

**ಬೆಂಗಳೂರು:** ಬರ ನಿರ್ವಹಣೆಯಲ್ಲಿ ತನ್ನ ವೈಫಲ್ಯ ಹಾಗೂ ಬೇಜವಾಬ್ದಾರಿಗಳನ್ನು ಮುಚ್ಚಿಕೊಳ್ಳಲು ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸಲು ಸುಪ್ರೀಂ ಕೋರ್ಟ್ ಅಂಗಳ ಪ್ರವೇಶಿಸಿರುವ ಸಿಎಂ ಸಿದ್ದರಾಮಯ್ಯ ಅವರ ನಡೆ ರಾಜಕೀಯ ಪ್ರೇರಿತವಾಗಿದ್ದು ಇದು ಭಾರತದ ಒಕ್ಕೂಟ ವ್ಯವಸ್ಥೆಯನ್ನು ಅಪಮಾನಿಸುವ ಹಾಗೂ ಕರ್ನಾಟಕದ ಘನತೆಯನ್ನು ಕುಗ್ಗಿಸುವ ತಪ್ಪು ನಿರ್ಧಾರವಾಗಿದೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸಿದ್ದರಾಮಯ್ಯ ವಿರುದ್ಧ ಕಿಡಿಕಾರಿದ್ದಾರೆ.

ಈ ಸಂಬಂಧ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ ಬರ ಬಂದಾಗ ಬಿಜೆಪಿ ಸರ್ಕಾರ ಏನು ಮಾಡಿತ್ತು ಮತ್ತು ಹಿಂದೆ ಕಾಂಗ್ರೆಸ್ ಸರ್ಕಾರ ಏನು ಮಾಡಿತ್ತು ಎಂಬುದರ ಬಗ್ಗೆ ಲೆಕ್ಕದೊಂದಿಗೆ ವಿವರವನ್ನು ಹಂಚಿಕೊಂಡು ತಿರುಗೇಟು ನೀಡಿದ್ದಾರೆ.

**ಪೋಸ್ಟ್‌ನಲ್ಲಿ ಏನಿದೆ?:** 'ಕೈಲಾಗದವನು ಮೈಪರಚಿಕೊಂಡ' ಎಂಬಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಎಲ್ಲ ಎಡವಟ್ಟುಗಳಿಗೂ ಕೇಂದ್ರ ಸರ್ಕಾರದತ್ತ ಬೊಟ್ಟು ಮಾಡಿ ತೋರಿಸುವ ಮೂಲಕ ಚುನಾವಣಾ ಸಂದರ್ಭದ ಕುಟಿಲತನ ಪ್ರದರ್ಶಿಸಲು ಹೊರಟಿದ್ದಾರೆ.

ಹಿಂದಿನ ಬಿಜೆಪಿ ಸರ್ಕಾರ ಬರ, ಪ್ರವಾಹ ಮುಂತಾದ ನೈಸರ್ಗಿಕ ವಿಕೋಪ ಎದುರಾದಾಗ ಕೇಂದ್ರ ಸರ್ಕಾರದ ನೆರವಿಗೆ ಕಾಯದೇ ರಾಜ್ಯ ಸರ್ಕಾರದ ಆರ್ಥಿಕ ಸ್ಥಿತಿಯ ಸಮತೋಲನ ಕಾಯ್ದುಕೊಂಡು ಸಂಕಷ್ಟಿತ ಜನರ ಕಣ್ಣೀರು ಒರೆಸಿ ಪರಿಹಾರ ನೀಡಿತ್ತು. ಆದರೆ ಕಿಂಚಿತ್ತೂ ರೈತ ಕಾಳಜಿ ಇಲ್ಲದ ಸಿಎಂ ಸಿದ್ದರಾಮಯ್ಯನವರ ನೇತೃತ್ವದ ಕಾಂಗ್ರೆಸ್ ಸರ್ಕಾರ ತನ್ನ ಅಭಿವೃದ್ಧಿ ಶೂನ್ಯ ಜನವಿರೋಧಿ ಆಡಳಿತದ ಕರಾಳ ಮುಖವನ್ನು ಮುಚ್ಚಿಕೊಳ್ಳಲು ಜನರನ್ನು ದಿಕ್ಕು ತಪ್ಪಿಸಲು ಹೊರಟಿದೆ.

ಯಡಿಯೂರಪ್ಪನವರ ಆಡಳಿತದ 2019ರಲ್ಲಿ 9,72,517 ಹೆಕ್ಟೇರ್ ಬೆಳೆಹಾನಿಯಾಗಿತ್ತು. ಆಗ 6,71,314 ಫಲಾನುಭವಿಗಳಿಗೆ 1232.20 ಕೋಟಿ ರೂ. ಪರಿಹಾರ ನೀಡಲಾಗಿತ್ತು. 2020ರಲ್ಲಿ 19,68,247 ಹೆಕ್ಟೇರ್ ಬೆಳೆಹಾನಿಯಾಗಿತ್ತು. ಆಗ



12,00,346 ಫಲಾನುಭವಿಗಳಿಗೆ 941.70 ಕೋಟಿ ರೂ. ಪರಿಹಾರ ನೀಡಲಾಗಿತ್ತು. 2021ರಲ್ಲಿ 14,93,811 ಹೆಕ್ಟೇರ್ ಬೆಳೆಹಾನಿಯಾಗಿತ್ತು. ಆಗ 18,56,083 ಫಲಾನುಭವಿಗಳಿಗೆ 2446.10 ಕೋಟಿ ರೂ. ಪರಿಹಾರ ನೀಡಲಾಗಿತ್ತು. 2022 ರಲ್ಲಿ 13,09,421, ಹೆಕ್ಟೇರ್ ಬೆಳೆಹಾನಿ ಆಗಿತ್ತು. ಆಗ 14,62,841 ಫಲಾನುಭವಿಗಳಿಗೆ 2031.15 ಕೋಟಿ ರೂ. ಪರಿಹಾರ ನೀಡಲಾಗಿತ್ತು.

ಸಿದ್ದರಾಮಯ್ಯನವರ ನಿದ್ರೆ ಸರ್ಕಾರದ ಈ ನಾಟಕ ಹೊಸದೇನಲ್ಲ. ಕಾಂಗ್ರೆಸ್ ಸರ್ಕಾರ ಬಂದಾಗಲೆಲ್ಲ ರೈತರಿಗೆ ಬರ ಪರಿಹಾರ ವಿಷಯದಲ್ಲಿ ಇದೇ ರೀತಿ ನಾಟಕವಾಡುತ್ತದೆ. 2013–14ರಲ್ಲಿ ಸಿದ್ದರಾಮಯ್ಯ ಅವರ ಸರ್ಕಾರ ಜುಲೈ–ಆಗಸ್ಟ್ ಅವಧಿಯ ಮುಂಗಾರಿನ ಬರಗಾಲಕ್ಕೆ 2014 ರ ಏಪ್ರಿಲ್‌ನಿಂದ ಇನ್‌ಪುಟ್ ಸಬ್ಸಿಡಿ ಪಾವತಿ ಮಾಡಲು ಶುರು ಮಾಡಿತ್ತು. ಅಂದರೆ ಅದಕ್ಕೆ ತೆಗೆದುಕೊಂಡ ಅವಧಿ 9 ತಿಂಗಳು.

2014–15ರ ಸಾಲಿನಲ್ಲಿ ಇದೇ ಸಿದ್ದರಾಮಯ್ಯನವರ ಸರ್ಕಾರ 2014ರ ಜುಲೈ–ಆಗಸ್ಟ್ ಅವಧಿಯ ಬರಗಾಲಕ್ಕೆ ಪರಿಹಾರ ನೀಡಲು, 2015 ಮಾರ್ಚ್‌ನಿಂದ ಇನ್‌ಪುಟ್ ಸಬ್ಸಿಡಿ ಪಾವತಿ ಶುರು ಮಾಡಿತ್ತು. ಅಂದರೆ ಇದಕ್ಕೆ ತೆಗೆದುಕೊಂಡ ಅವಧಿ 8 ತಿಂಗಳು.

2019–20 ನೇ ಸಾಲಿನಲ್ಲಿ ಬಿಜೆಪಿ ಸರ್ಕಾರವಿದ್ದಾಗ, 2019ರ ಆಗಸ್ಟ್–ಸೆಪ್ಟೆಂಬರ್‌ನಲ್ಲಿ ಪ್ರವಾಹ ವಿಕೋಪ ಉಂಟಾಗಿತ್ತು. ಆಗ 2019ರ ಅಕ್ಟೋಬರ್‌ನಿಂದ ಇನ್‌ಪುಟ್ ಸಬ್ಸಿಡಿ ಪಾವತಿ ಶುರು ಮಾಡಲಾಗಿತ್ತು. ಅಂದರೆ ಬರ ಪರಿಹಾರ ನೀಡಲು ಬಿಜೆಪಿ ಸರ್ಕಾರ ತೆಗೆದುಕೊಂಡ ಅವಧಿ ಕೇವಲ 2 ತಿಂಗಳು. 2020–21 ರ ಸಾಲಿನಲ್ಲಿ, 2020ರ ಆಗಸ್ಟ್–ಅಕ್ಟೋಬರ್‌ನಲ್ಲಿ ಪ್ರವಾಹ ಉಂಟಾಗಿತ್ತು. ಆಗ ಅಕ್ಟೋಬರ್‌ನಿಂದಲೇ ಪರಿಹಾರ ವಿತರಣೆ ಶುರುವಾಗಿತ್ತು. ಅಂದರೆ ಬಿಜೆಪಿ ಸರ್ಕಾರ ತೆಗೆದುಕೊಂಡ ಅವಧಿ 2 ತಿಂಗಳು. 2021–22 ನೇ ಸಾಲಿನಲ್ಲಿ, 2021ರ ಆಗಸ್ಟ್‌ನಲ್ಲಿ ಪ್ರವಾಹವಾದಾಗ, ಸೆಪ್ಟೆಂಬರ್‌ನಿಂದಲೇ ಪರಿಹಾರ ವಿತರಣೆ ಶುರುವಾಯಿತು. ಅದಕ್ಕೆ ತೆಗೆದುಕೊಂಡ ಅವಧಿ 2 ತಿಂಗಳು. ಇದೇ ಸಾಲಿನಲ್ಲಿ, ಮತ್ತೊಮ್ಮೆ ಅಕ್ಟೋಬರ್–ನವೆಂಬರ್ ನಲ್ಲಿ ಪ್ರವಾಹ ಉಂಟಾಗಿ, ಆಗ ನವೆಂಬರ್ ನಿಂದಲೇ ಪರಿಹಾರ ವಿತರಣೆ ಮಾಡಲಾಯಿತು. ಅದಕ್ಕೆ ತೆಗೆದುಕೊಂಡ ಅವಧಿ 1 ತಿಂಗಳು.

2022–23 ನೇ ಸಾಲಿನಲ್ಲಿ, 2022ರ ಮೇ–ಜೂನ್–ಜುಲೈ ತಿಂಗಳಲ್ಲಿ ಪ್ರವಾಹವಾದಾಗ ಜುಲೈನಿಂದ ಪರಿಹಾರ ವಿತರಣೆ ಶುರು ಮಾಡಲಾಯಿತು. ಅದಕ್ಕೆ ತೆಗೆದುಕೊಂಡ ಅವಧಿ 1 ತಿಂಗಳು. ಮತ್ತೆ ಇದೇ ಸಾಲಿನಲ್ಲಿ, 2022 ರ ಆಗಸ್ಟ್–ಸೆಪ್ಟೆಂಬರ್‌ನಲ್ಲಿ ಪ್ರವಾಹ ಉಂಟಾಯಿತು. ಆಗ 2 ತಿಂಗಳಲ್ಲಿ ಪರಿಹಾರ ವಿತರಣೆ ಶುರು ಮಾಡಲಾಯಿತು.

ಮೇಲಿನ ಈ ಎಲ್ಲಾ ಅಂಶಗಳನ್ನು ಗಮನಿಸಿದರೆ ಒಂದಂತೂ ಸ್ಪಷ್ಟವಾಗುತ್ತದೆ. ಕಷ್ಟ ಕಾಲದಲ್ಲಿ ರೈತರ ನೆರವಿಗೆ ಬರುವುದಕ್ಕಿಂತ ರೈತರ ಕಣ್ಣೀರಿನಲ್ಲಿ ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವುದೇ ಕಾಂಗ್ರೆಸ್ ಸರ್ಕಾರದ ಅಮಾನವೀಯ ಕುತಂತ್ರ ಅನ್ನಿಸುತ್ತಿದೆ.

ಮಾನ್ಯ ಸಿದ್ದರಾಮಯ್ಯನವರೇ, ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರದ ಜೊತೆ ಹೇಗೆ ವ್ಯವಹರಿಸಬೇಕು ಎನ್ನುವುದನ್ನು ಬರಪೀಡಿತ ಇತರ ರಾಜ್ಯಗಳ ಮುಖ್ಯಮಂತ್ರಿಗಳನ್ನು ನೋಡಿ ನೀವು ಕಲಿಯಬೇಕಿದೆ. ಇದುವರೆಗು ಸುಮ್ಮನಿದ್ದು ಚುನಾವಣಾ ಪ್ರಕ್ರಿಯೆ ಚಾಲ್ತಿಯಲ್ಲಿರುವ ಈ ಹೊತ್ತಿನಲ್ಲೇ ಸುಪ್ರೀಂ ಕದ ತಟ್ಟುತ್ತಿರುವ ನಿಮ್ಮ ಕಾಂಗ್ರೆಸ್ ಸರ್ಕಾರದ ಕಾಳಜಿ 'ಮೊಸಳೆ ಕಣ್ಣೀರಿನದು' ಎಂಬುದನ್ನು ಅರ್ಥಮಾಡಿಕೊಳ್ಳುವಷ್ಟು ಕರ್ನಾಟಕದ ಜನತೆ ಪ್ರಬುದ್ಧರಿದ್ದಾರೆ, ಇದಕ್ಕೆ ತಕ್ಕನಾದ ಉತ್ತರ ಅತೀ ಶೀಘ್ರದಲ್ಲೇ ನೀವು ಪಡೆಯಲ್ಲಿದ್ದೀರಿ.

# ಹಾರಂಗಿ ಜಲಾಶಯದಿಂದ 400 ಕ್ಯೂಸೆಕ್ ನೀರು ಬಿಡುಗಡೆ

**ಮಡಿಕೇರಿ:** ಕಾವೇರಿ ತವರು ಕೊಡಗಿನ ಐದು ಗ್ರಾಮ ಪಂಚಾಯತ್‌ಗಳ 15 ಉಪ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರಿದ್ದು, ಈ ಹಿನ್ನೆಲೆಯಲ್ಲಿ ಹಾರಂಗಿ ಜಲಾಶಯದಿಂದ 400 ಕ್ಯೂಸೆಕ್ ನೀರನ್ನು ನದಿಗೆ ಹರಿಸಲಾಗಿದೆ.

ಬಿರು ಬಿಸಿಲಿನ ಕಾರಣದಿಂದ ಕಾವೇರಿ ನದಿಯಲ್ಲಿ ನೀರಿನ ಹರಿವು ತೀರಾ ಕಡಿಮೆಯಾಗಿದ್ದು, ಹೆಬ್ಬಾಲೆ, ಶಿರಂಗಾಲ ಸೇರಿದಂತೆ ಐದು ಗ್ರಾಮ ಪಂಚಾಯಿತಿ ವ್ಯಾಪ್ತಿಯ 15 ಉಪ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರಿದೆ.

ಹೆಬ್ಬಾಲೆಯಲ್ಲಿರುವ ಗ್ರಾಮೀಣ ಕುಡಿಯುವ ನೀರಿನ ಘಟಕಕ್ಕೆ ಕಾವೇರಿ ನದಿಯಿಂದ ನೀರು ದೊರಕದ ಹಿನ್ನೆಲೆಯಲ್ಲಿ ಇದೀಗ ಹಾರಂಗಿಯಿಂದ ನೀರನ್ನು ನದಿಗೆ ಹರಿಸಲಾಗುತ್ತಿದೆ. ಇದರಿಂದ ಕೊಡಗು ಮತ್ತು ಹಾಸನ ಜಿಲ್ಲೆಯ ಕಾವೇರಿ ನದಿ ದಂಡೆಯ ಗ್ರಾಮಗಳ ದನಕರುಗಳಿಗೆ ಮತ್ತು ಕುಡಿಯುವ ನೀರಿನ ಸರಬರಾಜಿಗೆ ಅನುಕೂಲವಾಗಲಿದೆ.

ಅಣೆಕಟ್ಟೆಯಿಂದ ದಿನ 100 ಕ್ಯೂಸೆಕ್ ನೀರನ್ನು ಹರಿಸಲಾಗುತ್ತಿತ್ತು. ಆದರೆ ಇದೀಗ ಕಾವೇರಿ ನದಿಯಲ್ಲಿ ನೀರಿನ ಹರಿವು ಮತ್ತಷ್ಟು ಕಡಿಮೆಯಾದ ಹಿನ್ನೆಲೆಯಲ್ಲಿ ಜಲಚರಗಳಿಗೂ ನೀರು ಇಲ್ಲದಂತಾಗುವ ಪರಿಸ್ಥಿತಿ ಕಂಡುಬರುತ್ತಿದೆ. ಈ ಹಿನ್ನೆಲೆಯಲ್ಲಿ ಹಾರಂಗಿ ಅಣೆಕಟ್ಟೆಯಲ್ಲಿ ಸಂಗ್ರಹವಿರುವ 2 ಟಿಎಂಸಿ ನೀರಿನ ಪೈಕಿ 400 ಕ್ಯೂಸೆಕ್ ನೀರನ್ನು ಅಣೆಕಟ್ಟೆಯ ಕೆಳಭಾಗದಲ್ಲಿ ನದಿ ದಂಡೆಯಲ್ಲಿರುವ ಗ್ರಾಮಗಳ ಜನ- ಜಾನುವಾರುಗಳಿಗೆ ಕುಡಿಯುವುದಕ್ಕಾಗಿ ನೀರನ್ನು ಹರಿಸಲಾಗುತ್ತಿದೆ ಎಂದು ಮೂಲಗಳು ಹೇಳಿವೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com